# ಬೆಳಗಾವಿ ವರದಿ

VOL. 05 , ISSUE. 01 | MONDAY, 1 JANUARY 2024 | NEWSBELAGAVI@GMAIL.COM | 9900332089 | REG.NO.G-2/PMG/KA/NK/BM/139/2021-23





ನಾಡಿನ ಸಮಸ್ತ ಜನತೆಗೆ ಬೆಳಗಾವಿ ವರದಿ ದಿನಪತ್ರಿಕೆ ಸಂಪಾದಕರಿಂದ ಹೊಸ ವರ್ಷದ ಹಾರ್ದಿಕ ಶುಭಾಶಯಗಳು

-2024

## ರೈತರ ನಿರಾಸೆಗೊಳಿಸಿ, ಸಲಹೆಗಾರರ ನೇಮಿಸಿಕೊಂಡಿದ್ದಾರೆ:

# ಸಿಎಂ ಸಿದ್ದರಾಮಯ್ಯ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ

ಬೆಂಗಳೂರು: ಬರದಿಂದ ಸಂಕಷ್ಟದಲ್ಲಿರುವ ರೈತರನ್ನು ನಿರಾಗೊಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತೆರಿಗೆದಾರರ ಹಣ ವೆಚ್ಚ ಮಾಡಿ ಆರ್ಥಿಕ ಸಲಹೆಗಾರರನ್ನು ನೇಮಕ ಮಾಡಿಕೊಂಡಿದ್ದಾರೆಂದು ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್'ಡಿ.ಕುಮಾರಸ್ವಾಮಿಯವರು ಶನಿವಾರ ವಾಗ್ದಾಳಿ ನಡೆಸಿದ್ದಾರೆ.

ಜೆಡಿಎಸ್ ಕಚೇರಿ ಜೆಪಿ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರ ಆತ್ಮಹತ್ಯೆಗಳು ಪ್ರಾರಂಭವಾಗಿವೆ. ಒಂದು ಕಡೆ ವಸೂಲಿ ಮಾಡಬೇಡಿ ಎಂದು ಹೇಳುತ್ತಾರೆ. ಮತ್ತೊಂದು ಕಡೆ ವಸೂಲಿ ಮಾಡುತ್ತಿದ್ದಾರೆ. ಬೆಳೆ ಉಳಿಸಿಕೊಳ್ಳಲು ರೈತರು ಪರದಾಡುತ್ತಿದ್ದಾರೆ. ಸರ್ಕಾರಕ್ಕೆ ರೈತರ ಬಗ್ಗೆ ಚಿಂತೆ ಇದೆಯೇ? ಮಾತೆತ್ತಿದ್ದರೆ ಮೂವರು ಡೆಪ್ಯುಟಿ ಸಿಎಂ ಬಗ್ಗೆ ಮಾತನಾಡುತ್ತಾರೆ. ನಿನ್ನೆ ಒಂದು ಅದ್ಭುತವಾದ ಆರ್ಡರ್ ನೋಡಿದೆ. ಹಿರಿಯ ಶಾಸಕರಿಗೆ ಹುದ್ದೆಗಳನ್ನು ಕೊಟ್ಟಿದ್ದಾರೆ. 14 ಬಜೆಟ್ ಮಂಡನೆ ಮಾಡಿದವರು ಸಿದ್ದರಾಮಯ್ಯ. ಅವರಿಗೆ ಆರ್ಥಿಕ ಸಲಹೆಗಾರರನ್ನು ನೇಮಿಸಿದ್ದಾರೆ. ಅನುಭವ ಇರುವ ತಜ್ಞರನ್ನು ನೇಮಿಸಿಕೊಂಡಿಲ್ಲ. ಇವೇನು ಗಂಜಿ ಕೇಂದ್ರಗಳೇ? ಎಂದು ವ್ಯಂಗ್ಯವಾಡಿದರು.

ಆರ್ವಿ. ದೇಶಪಾಂಡೆ ಅವರು 25 ವರ್ಷ ಮಂತ್ರಿಗಳಾಗಿದ್ದವರು. ಅವರನ್ನು ಆಡಳಿತ ಸುಧಾರಣೆ ಆಯೋಗಕ್ಕೆ ನೇಮಿಸಿದ್ದಾರೆ. ಹಿಂದೆ ಹಾರನಹಳ್ಳಿ ರಾಮಸ್ವಾಮಿ ಅವರನ್ನು ನೇಮಿಸಿದ್ದರು. ವಿಜಯಭಾಸ್ಕರ್ ಆಯೋಗ ಮಾಡಿ ವರದಿ ಪಡೆದಿದ್ದರು. ಈ ವರದಿ ಪಡೆದು ಏನು ಸುಧಾರಣೆ ತಂದಿದ್ದೀರಿ? ಈಗ ದೇಶಪಾಂಡೆಯವರನ್ನು ಮಾಡಿದ್ದೀರಿ. ವಿಧಾನಸೌಧದಲ್ಲಿ ಮಾಡಬಾರದ ಕೆಲಸವನ್ನು ಮಾಡುತ್ತಿದ್ದೀರಿ. ಈಗ ದೇಶಪಾಂಡೆ ಕೈಯಲ್ಲಿ ಏನು ಸುಧಾರಣೆ ಮಾಡಿಸುತ್ತೀರಿ? ಬಿ.ಆರ್. ಪಾಟೀಲ್ ಅವರನ್ನು ಕಾರ್ಯದರ್ಶಿಯನ್ನಾಗಿ



ಮಾಡಿಕೊಂಡಿದ್ದಾರೆ. ಸಿದ್ದರಾಮಯ್ಯಗಿಂತ ದೊಡ್ಡವರು ಬೇಕಾ? ಅವರಿಗೆ ಆರ್ಥಿಕ ಕಾರ್ಯದರ್ಶಿ ನೇಮಕ ಬೇಕಾ? ಬಿ.ಆರ್. ಪಾಟೀಲರಿಗೆ ಯಾವ ಅನುಭವ ಇದೆ? ಎಂದು ವಾಗ್ದಾಳಿ ನಡೆಸಿದರು.

ಮಲ್ಲಿಕಾರ್ಜುನ ಖರ್ಗೆ ಅವರನ್ನು ಕರ್ನಾಟಕದಿಂದ ಖಾಲಿ ಮಾಡಿಸಿದ್ದು ಯಾರು? ಆವಾಗ ನಿಮಗೆ ಬಿ.ಆರ್.ಪಾಟೀಲ್ ಸಲಹೆ ಕೊಟ್ಟಿದ್ದರಾ? ಯಾವ ಕಾರಣಕ್ಕೆ ಸಲಹೆಗಾರರನ್ನಾಗಿ ಮಾಡಿಕೊಂಡಿರಿ? ನಾನು ಎರಡು ಬಾರಿ ಸಿಎಂ ಆಗಿದ್ದೆ. ಅದೂ 10–15 ತಿಂಗಳು ಆಗಿದ್ದೆ ಬಿಡಿ. ಆದರೆ, ಸಿದ್ದರಾಮಯ್ಯ ಅವರಂತೆ ಸುದೀರ್ಘ ಅವಧಿಗೆ ಆಗಿದ್ದೆನಾ? ಸಿದ್ದರಾಮಯ್ಯ ಅವರೇ ನಿಮಗೆ ಬಿ.ಆರ್.ಪಾಟೀಲರ ಸಲಹೆ ಬೇಕಾ? ಈ ಸರ್ಕಾರ ಗ್ಯಾರಂಟಿ ಬಗ್ಗೆ ಚರ್ಚೆ ಬಿಟ್ಟರೆ ಬೇರೆ ಏನಾದರೂ ಮಾಡಿದೆಯಾ? ಬರಗಾಲದ ಹೇಳಿಕೆಗಳಿಗೆ ಸರ್ಕಾರ ಸೀಮಿತವಾಗಿದೆಯೇ ಹೊರತು ಅದಕ್ಕೆ ಸಂಬಂಧಪಟ್ಟ ಯೋಜನೆಗಳ ಬಗ್ಗೆ ಮಾತನಾಡುತ್ತಿಲ್ಲ.

ರಾಜ್ಯದಲ್ಲಿ ಈ ವರ್ಷ ಚುನಾವಣೆ ನಡೆದವು. ಹೊಸ ಸರ್ಕಾರ ರಚನೆ ಆಯ್ತು. ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದರು. ಅದರ ಬಗ್ಗೆ ನಮಗೆ ಯಾವುದೇ ಅಸೂಯೆ ಇಲ್ಲ. ಗ್ಯಾರಂಟಿ ಯೋಜನೆಗಳನ್ನು ನೆನಪಿಸಲು ಜಾಹೀರಾತುಗಳನ್ನು ಕೊಡುತ್ತಿದ್ದೀರಿ. ಆದರೆ, ನುಡಿದಂತೆ ನಡೆದೆವು ಎಂದು ಸಾಕಷ್ಟು ಭಾರಿ ಜಾಹೀರಾತು ಕೊಡುವ ಅವಶ್ಯಕತೆ ಇರಲಿಲ್ಲ. ಇದನ್ನು ನೋಡಿದರೆ ಅಯ್ಯೋ ಎಂದಿನಿಸುತ್ತದೆ. 8 ತಿಂಗಳ ಅವದಿಯಲ್ಲಿ ಗ್ಯಾರಂಟಿ ಭಜನೆ ಬಿಟ್ಟರೆ ಬೇರೆ ಏನು ಮಾಡಿದ್ದಾರೆ? ಅಭಿವೃದ್ಧಿ ಕೆಲಸಗಳು ಆಗುತ್ತಿವೆಯೇ?

ಮುಖ್ಯಮಂತ್ರಿ ಮತ್ತು ಅವರ ಸಂಪುಟ ಸಹೋದ್ಯೋಗಿಗಳು ಬರ ಪರಿಹಾರಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದು, ಕೇಂದ್ರವು ಈಗಾಗಲೇ ವರದಿಯನ್ನು ಸಿದ್ಧಪಡಿಸಿದೆ. ಶೀಘ್ರದಲ್ಲೇ ಎನ್‌ಡಿಆರ್‌ಎಫ್ ಅಡಿಯಲ್ಲಿ ಹಣ ಬಿಡುಗಡೆ ಮಾಡಲಿದೆ. ಆದರೆ ರಾಜ್ಯ ಸರ್ಕಾರ ಭರವಸೆ ನೀಡಿದಂತೆ ಪ್ರತಿ ರೈತನಿಗೆ 2 ಸಾವಿರ ರೂ.ಗಳನ್ನು ಬಿಡುಗಡೆ ಮಾಡಿಲ್ಲ. ಫೆಬ್ರವರಿಯಲ್ಲಿ ನಡೆಯಲಿರುವ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ಈ ಬಗ್ಗೆ ಪ್ರಸ್ತಾಪಿಸುತ್ತೇನೆಂದು ತಿಳಿಸಿದರು.

## ಹಾಳಾದ ರಸ್ತೆ ಪರಿಶೀಲನೆ ನಡೆಸಿದ ಸಚಿವ ಸತೀಶ್ ಜಾರಕಿಹೊಳಿ

ಲಕ್ಷ್ಮೇಶ್ವರ: ಲಕ್ಷ್ಮೇಶ್ವರ ತಾಲೂಕಿನ ಪ್ರಮುಖ ರಸ್ತೆಗಳು ಶೇ. 30ರಷ್ಟು ಹಾಳಾಗಿವೆ. ಈ ಕುರಿತು ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರು ಅಧಿವೇಶನದಲ್ಲಿ ಪ್ರಸ್ತಾಪ ಮಾಡಿದ್ದಾರೆ. ಅದಕ್ಕಾಗಿ ನಾನೇ ಖುದ್ದಾಗಿ ಪರಿಶೀಲನೆ ಮಾಡುತ್ತಿರುವೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಬಂಕಾಪೂರದಿಂದ ಲಕ್ಷ್ಮೇಶ್ವರ ಮಾರ್ಗವಾಗಿ ಗದಗ ಹೋಗುತ್ತಿರುವ ವೇಳೆ ಪಟ್ಟಣದ ಚಂದನ ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಳಾಗಿರುವ ತಾಲೂಕಿನ ರಸ್ತೆಗಳ ಬಗ್ಗೆ ಸ್ವತಃ ನೋಡಿ ದುರಸ್ತಿ ಮಾಡಿಸುವ ಕಾರ್ಯ ಮಾಡುವ ದೃಷ್ಟಿಯಿಂದ ಮಾಡುತ್ತಿದ್ದೇವೆ. ಶಾಸಕ ಡಾ. ಚಂದ್ರು ಲಮಾಣಿ ಅವರು ಈ ಕುರಿತು ಸದನದಲ್ಲಿ



ಪ್ರಸ್ತಾಪಮಾಡಿದ್ದಾರೆ. ಶಾಸಕರು ನೀಡಿರುವ ಅಂಕಿ ಅಂಶಗಳು ಹಾಗೂ ನಮ್ಮ ಅಧಿಕಾರಿಗಳ ನೀಡಿರುವ ಅಂಶಗಳು ಸರಿಯಾಗಿವೆಯೋ ಅಥವಾ ಸುಳ್ಳೋ ಎನ್ನುವ ಕುರಿತು ನಾನೇ ಪರಿಶೀಲಿಸುತ್ತಿರುವೆ ಎಂದು ಹೇಳಿದರು.

ಪಾಳಾ–ಬಾದಾಮಿ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆಯನ್ನು ಕೇಂದ್ರಕ್ಕೆ ಕಳುಹಿಸಿ ಕೊಡಲಾಗಿದೆ. ಅವರಿಂದ ಯಾವುದೇ ಉತ್ತರ ಬಂದಿಲ್ಲ. ಮೇಲ್ದರ್ಜೆಗೆ ಏರಿಸಿದರೆ ಹೆಚ್ಚು ಅನುಕೂಲವಾಗುತ್ತದೆ ಎಂದರು.

ಶಾಸಕ ಬಸವರಾಜ ಪಾಟೀಲ್ ಯತ್ನಾಳ ಅವರು ಕೋವಿಡ್ ಕಾಲದಲ್ಲಿ ಬಿಜೆಪಿ ಸರ್ಕಾರದಲ್ಲಿ 40 ಸಾವಿರ ಕೋಟಿ ರೂ. ಭ್ರಷ್ಟಾಚಾರ ನಡೆದಿದೆ ಎನ್ನುವ ಆರೋಪದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿ, ನೀವು ಅವರನ್ನೇ ಹೋಗಿ ಕೇಳಿರಿ, ಅವರ ಪಕ್ಷದ ಬಗ್ಗೆ ಅವರೇ ಆರೋಪ ಮಾಡುತ್ತಿದ್ದಾರೆ. ಅದರ ಕುರಿತು ಸೂಕ್ತ ತನಿಖೆ ನಡೆಸುವ ಕಾರ್ಯವನ್ನು ನಮ್ಮ ಸಕಾ ಸರ್ಕಾರ ಮಾಡುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಜಾತಿ ಜನಗಣತಿ ವರದಿಯ ಕುರಿತು ಈಗಾಗಲೇ ಕೆಲವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು, ಜಾತಿ ಜನಗಣತಿ ವರದಿ ಇನ್ನೂ ನಮ್ಮ ಕೈ ಸೇರಿಲ್ಲ. ಕೆಲವರು ವಿರೋಧ ವ್ಯಕ್ತ ಪಡಿಸುತ್ತಿದ್ದಾರೆ. ರಾಜಕಾರಣದಲ್ಲಿ ಇದು ಸ್ವಾಭಾವಿಕ, ವರದಿ ಕೈ ಸೇರಿದ ಮೇಲೆ ನೋಡೋಣ ಎಂದು ಹೇಳಿದರು.

ಈ ವೇಳೆ ಶಾಸಕ ಡಾ.ಚಂದ್ರು ಲಮಾಣಿ, ವಿಪ ಸದಸ್ಯ ಎಸ್.ವಿ. ಸಂಕನೂರ, ಚಂದನ ಶಾಲೆಯ ಮುಖ್ಯಸ್ಥ ಟಿ. ಈಶ್ವರ, ವಾಲ್ಮೀಕಿ ಸಮಾಜದ ಅಧ್ಯಕ್ಷ ಭೀಮಣ್ಣ ಯಂಗಾಡಿ. ಯಲ್ಲಪ್ಪ ತಳವಾರ, ಅಂಬರೀಷ ತೆಂಬದಮನಿ, ರಾಜಣ್ಣ ಹೊಳಲಾಪುರ, ಮಹಾಂತಗೌಡ ಪಾಟೀಲ, ಗಂಗಾಧರ ಪರಸಣ್ಣವರ, ಎಚ್.ಸಿ. ರಟಗೇರಿ, ಗಿರಿಜಾ ಈಶ್ವರ ಸೇರಿದಂತೆ ಇದ್ದರು.

## ಅಂಗಡಿ, ವಾಣಿಜ್ಯ ಸಂಕೀರ್ಣಗಳ ನಾಮಫಲಕ: ಶೇ.60 ರಷ್ಟು ಕನ್ನಡ ಬಳಕೆಗೆ ಸೂಚನೆ



ಬೆಳಗಾವಿ: ರಾಜ್ಯ ಸರ್ಕಾರದ ಸುತ್ತೋಲೆಯಂತೆ ಜಿಲ್ಲೆಯಾದ್ಯಂತ/ ನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ/ಮುಂಗಟ್ಟುಗಳು, ವಾಣಿಜ್ಯ ಸಂಕೀರ್ಣಗಳ ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಅಂದರೆ, ಒಟ್ಟು ನಾಮಫಲಕದ ಶೇ.60 ರಷ್ಟು ಭಾಗ ಕನ್ನಡ ಭಾಷೆ ಬಳಸಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಅದೇ ರೀತಿಯಲ್ಲಿ ವಿಳಾಸದಲ್ಲಿ "ಬೆಳಗಾವಿ" ಎಂದು ನಮೂದಿಸಬೇಕಾಗಿರುತ್ತದೆ ಆದರೆ ಪಾಲಿಕೆ ವ್ಯಾಪ್ತಿಯಲ್ಲಿ ಹಲವು ಉದ್ದಿಮೆದಾರರು ತಮ್ಮ ಉದ್ದಿಮೆಯ ನಾಮಫಲಕದಲ್ಲಿ ಬೆಳಗಾಂವ, ಬೆಲಗಾಮ್ ಎಂದು ನಮೂದಿಸಿದ್ದು ಹಾಗೂ ಶೇ.60 ರಷ್ಟು ಭಾಗವನ್ನು ಕನ್ನಡ ಭಾಷೆಗೆ ಪ್ರಥಮ ಆದ್ಯತೆ ನೀಡದೇ ನಾಮಫಲಕವನ್ನು ಉಪಯೋಸುತ್ತಿದ್ದು ಕಂಡುಬಂದಿರುತ್ತದೆ.

ಇಂತಹ ಉದ್ದಿಮೆದಾರರಿಗೆ ಪಾಲಿಕೆ ವತಿಯಿಂದ ನೀಡಿದ ಪರವಾನಿಗೆಯನ್ನು ರದ್ದುಗೊಳಿಸಿ ಅಂಗಡಿಯನ್ನು ಬಂದ/ಸೀಲ್ ಮಾಡಲಾಗವುದು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭೆ ಚುನಾವಣೆಯಲ್ಲಿ ಸಚಿವರ ಸ್ಪರ್ಧೆ ವಿಚಾರ ರಾಜ್ಯ ಕಾಂಗ್ರೆಸ್ ನಾಯಕರಿಗೆ ಬಿಟ್ಟದ್ದು: ಮಲ್ಲಿಕಾರ್ಜುನ ಖರ್ಗೆ



ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಸಚಿವರು ಸ್ಪರ್ಧಿಸುವ ಬಗ್ಗೆ ರಾಜ್ಯದ ನಾಯಕರು ನಿರ್ಧರಿಸುತ್ತಾರೆ ಎಂದು ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದರು.

ರಾಜ್ಯದಲ್ಲಿ ಕೆಲವು ಸಚಿವರನ್ನು ಲೋಕಸಭೆ ಚುನಾವಣೆ ಅಖಾಡಕ್ಕೆ ಇಳಿಸಲಾಗುತ್ತಿದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಖರ್ಗೆ ಅವರು, ನೀವು ಈ ಬಗ್ಗೆ ಇಲ್ಲಿನ ನಾಯಕರನ್ನು ಕೇಳಬೇಕು. ಇಲ್ಲಿ ಯಾರು ಒಳ್ಳೆಯವರು, ಯಾರು ಕೆಟ್ಟವರು ಎಂಬುದನ್ನು ರಾಜ್ಯ ಚುನಾವಣಾ ಸಮಿತಿ ನೋಡುತ್ತದೆ ಎಂದು ಹೇಳಿದರು.

ರಾಜ್ಯ ಚುನಾವಣಾ ಸಮಿತಿಯ ಅಭಿಪ್ರಾಯದ ಬಳಿಕ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಮುಂದಿನ ನಿರ್ಧಾರ ಆಗುತ್ತದೆ. ಯಾರು ಸ್ಪರ್ಧೆ ಮಾಡಬೇಕು, ಯಾರು ಮಾಡಬಾರದು ಎಂಬುದನ್ನು ರಾಜ್ಯ ಚುನಾವಣಾ ಸಮಿತಿ ನಿರ್ಧಾರ ಮಾಡಿದ ಬಳಿಕ, ಸಂಭಾವ್ಯ ಅಭ್ಯರ್ಥಿಗಳ ಪಟ್ಟಿ ಅಖಿಲ ಭಾರತ ಕಾಂಗ್ರೆಸ್ ಸಮಿತಿಗೆ ಬರುತ್ತದೆ. ಆಗ ಯಾರು ಅಭ್ಯರ್ಥಿಯಾಗಬೇಕು ಎಂಬುದನ್ನು ನಾವು ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

ನಿಗಮ – ಮಂಡಳಿಗಳಿಗೆ ಅಧ್ಯಕ್ಷರ ನೇಮಕ ವಿಚಾರವಾಗಿ ಪ್ರತಿಕ್ರಿಯಿಸಿ, ನಿಗಮ–ಮಂಡಳಿ ನೇಮಕಾತಿಯನ್ನು ಆದಷ್ಟು ಬೇಗ ಮಾಡುತ್ತೇವೆ ಎಂದರು,

## ಪುತ್ರನಿಗೆ ಟಿಕೆಟ್ ಪಡೆಯಲು ಪ್ರಯತ್ನ: ಕೆ.ಎಸ್. ಈಶ್ವರಪ್ಪ



ಬೆಳಗಾವಿ: ಮುಂಬರುವ ಚುನಾವಣೆಯಲ್ಲಿ ನನ್ನ ಮಗನಿಗೆ ಟಿಕೆಟ್ ಪಡೆಯೋಕೆ ಪ್ರಯತ್ನಿಸುತ್ತಿದ್ದೇನೆ. ಟಿಕೆಟ್ ಕೊಟ್ಟರೇ ಹಾವೇರಿಯಿಂದ ಸ್ಪರ್ಧಿಸುತ್ತಾನೆ ಎಂದು ಕೆ.ಎಸ್. ಈಶ್ವರಪ್ಪ ಹೇಳಿದ್ದಾರೆ.

ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಈಶ್ವರಪ್ಪ, ಮುಂದಿನ ಚುನಾವಣೆಗೆ ನನ್ನ ಮಗ ಕಾಂತೇಶ್ ಗೆ ಟಿಕೆಟ್ ಪಡೆಯಬೇಕು ಎಂದು ಪ್ರಯತ್ನಿಸುತ್ತಿದ್ದೇನೆ. ಟಿಕೆಟ್ ಕೊಟ್ಟರೆ ಚುನಾವಣೆಗೆ ನಿಲ್ಲಿಸುತ್ತೇನೆ. ಹಾವೇರಿಯಿಂದ ಕಾಂತೇಶ್ ಸ್ಪರ್ಧೆ ಮಾಡ್ತಾನೆ ಎಂದು ಹೇಳಿದ್ದಾರೆ.

ರಾಮಮಂದಿರ ಆಗಬಾರದು ಎಂದು ಕೋರ್ಟಿಗೆ ಹೋದವರು, ಈಗ ಪ್ರಧಾನಿ ಮೋದಿಗೆ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಪಾಕಿಸ್ತಾನದವರು ಮೋದಿಯಂತಹ ಪ್ರಧಾನಿ ನಮಗೆ ಇರಬೇಕಿತ್ತು ಅನ್ನುತ್ತಿದ್ದಾರೆ. ಆದರೆ, ಹಿಂದೂ–ಮುಸ್ಲಿಂ ಒಟ್ಟಾಗಬಾರದು ಅನ್ನೋದು ಕಾಂಗ್ರೆಸ್ ಉದ್ದೇಶ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮತ್ತೊಂದು ಹಡಗು ಅಪಹರಣಕ್ಕೆ ಯತ್ನಿಸಿದ ಹೌತಿ ಉಗ್ರರ ಬೋಟ್ ಸ್ಫೋಟಿಸಿದ ಅಮೆರಿಕ ಸೇನೆ

ನವದೆಹಲಿ: ಕೆಂಪು ಸಮುದ್ರದಲ್ಲಿ ಹೌತಿ ಬಂಡುಕೋರರ ಹಾವಳಿ ಮಿತಿ ಮೀರುತ್ತಿದ್ದು, ಇದೀಗ ಮತ್ತೊಂದು ಹಡಗು ಹೈಜಾಕ್ ಯತ್ನಿಸಿದ್ದ ವೇಳೆ ಅಮೆರಿಕ ನೌಕಾಪಡೆಯ ಹೆಲಿಕಾಪ್ಟರ್ ಗಳು ಹೌತಿ ಉಗ್ರರ 2 ಬೋಟ್ ಗಳನ್ನು ಸ್ಫೋಟಿಸಿ ನಾಶಪಡಿಸಿದೆ.

ಕೆಂಪು ಸಮುದ್ರದಲ್ಲಿ ಕಂಟೈನರ್ ಹಡಗಿನ ಮೇಲೆ ದಾಳಿ ನಡೆಸಿದ ಯೆಮೆನ್‌ನ ಇರಾನ್ ಬೆಂಬಲಿತ ಹೌತಿ ಬಂಡುಕೋರರ ಮೇಲೆ ಅಮೆರಿಕ ಸೇನಾಪಡೆ ದಾಳಿ ನಡೆಸಿದ್ದು, ಉಗ್ರರು ನಿರ್ವಹಿಸುತ್ತಿದ್ದ ಹಡಗುಗಳನ್ನು ಸ್ಫೋಟಿಸಿ ಮುಳುಗಿಸಿವೆ ಎಂದು ಅಮೆರಿಕ ಸೇನಾ ಮಿಲಿಟರಿ ಭಾನುವಾರ ತಿಳಿಸಿದೆ.

ಕೆಂಪು ಸಮುದ್ರದಲ್ಲಿ ಗಸ್ತು ತಿರುಗುತ್ತಿದ್ದ ವೇಳೆ ಸರಕುಸಾಗಾಣಿಕಾ ಹಡಗಿನ ಮೇಲೆ ದಾಳಿ ಯತ್ನಿಸಿದ ಹೌತಿ ಬಂಡುಕೋರರು ಭದ್ರತಾ ಪಡೆಗಳ ಹೆಲಿಕಾಪ್ಟರ್‌ಗಳ ಮೇಲೆ ಗುಂಡು ಹಾರಿಸಿದ್ದಾರೆ. ಈ ವೇಳೆ ಸೇನಾಪಡೆಯೂ



ಕೂಡ 'ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದೆ. ಹಡಗಿನ 20 ಮೀಟರ್‌ಗಳ ಒಳಗೆ ಬಂದ ನಾಲ್ಕು ಸಣ್ಣ ದೋಣಿಗಳಲ್ಲಿ ಮೂರು ಬೋಟ್ ಗಳನ್ನು ರಕ್ಷಣಾ ಪಡೆಗಳು ಹೊಡೆದುರುಳಿಸಿವೆ. ಅದರಲ್ಲಿದ್ದ ಬಂಡುಕೋರರು ಕೂಡ ಹತರಾಗಿದ್ದಾರೆ. ಅಮೆರಿಕ ಸೇನಾ ಸಿಬ್ಬಂದಿ ದಾಳಿ ಆರಂಭಿಸಿದ ಬೆನ್ನಲ್ಲೇ ಹೌತಿ ಬಂಡುಕೋರರ ನಾಲ್ಕನೇ ದೋಣಿ ಪ್ರದೇಶದಿಂದ ಪಲಾಯನ ಮಾಡಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ (CENTCOM) ಹೇಳಿಕೆಯಲ್ಲಿ ತಿಳಿಸಿದೆ.

**24 ಗಂಟೆಗಳಲ್ಲಿ 2ನೇ ದಾಳಿ**

ಸಿಂಗಾಪುರದ ಧ್ವಜದ, ಡೆನ್ಮಾರ್ಕ್ ಒಡೆತನದ ಮತ್ತು ಚಾಲಿತ ಕಂಟೇನರ್ ಹಡಗಿನ ಮಾರ್ಸ್ಕ್ ಹ್ಯಾಂಗ್‌ಝೌ ಅವರ ಸಹಾಯಕ್ಕಾಗಿ ಕೋರಿಕೆಗೆ ನೌಕಾಪಡೆ ಪ್ರತಿಕ್ರಿಯಿಸಿದೆ ಎಂದು ಸೆಂಟ್‌ಕಾಮ್ ಹೇಳಿದೆ, ಇದು ಕೆಂಪು ಸಮುದ್ರದಲ್ಲಿ 24 ಗಂಟೆಗಳಲ್ಲಿ ಎರಡನೇ ಬಾರಿಗೆ ದಾಳಿಗೆ ಒಳಗಾಗಿದೆ. ಹಡಗನ್ನು ಮೊದಲು ಎರಡು ಹಡಗು ವಿರೋಧಿ ಬ್ಯಾಲಿಸ್ಟಿಕ್ ಕ್ಷಿಪಣಿಗಳೊಂದಿಗೆ ಗುರಿಯಾಗಿಸಲಾಗಿತ್ತು, ಅದನ್ನು ಯುಎಸ್ ಮಿಲಿಟರಿ ಹೊಡೆದುರುಳಿಸಿತು.

ಹೌತಿ–ನಿಯಂತ್ರಿತ ಯೆಮೆನ್‌ನಿಂದ ಉಡಾವಣೆಯಾದ ಕ್ಷಿಪಣಿಗಳಲ್ಲಿ ಒಂದು, ಮಾರ್ಸ್ಕ್ ಹ್ಯಾಂಗ್‌ಝೌಗೆ ಅಪ್ಪಳಿಸಿತು. ಹಮಾಸ್ ವಿರುದ್ಧ ಇಸ್ರೇಲ್ ಯುದ್ಧ ಮಾಡುತ್ತಿರುವ ಸಂದರ್ಭದಲ್ಲಿ ಪ್ಯಾಲೆಸ್ಟೀನಿಯನ್ನರಿಗೆ ಬೆಂಬಲ ನೀಡುವ ಸಲುವಾಗಿ ಹೌತಿ ಬಂಡುಕೋರರು ಈ ದಾಳಿ ಮಾಡುತ್ತಿದ್ದಾರೆ. ಪ್ರಮುಖವಾದ ಕೆಂಪು ಸಮುದ್ರದ ಹಡಗು ಲೇನ್‌ನಲ್ಲಿ ಬಂಡುಕೋರರು ಪದೇ ಪದೇ ಹಡಗುಗಳನ್ನು ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿದ್ದಾರೆ.

## ಸಂಸದ ಪ್ರತಾಪ್ ಸಿಂಹ ಅವರ ಸಹೋದರ ಅರೆಸ್ಟ್



ಮೈಸೂರು: ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಸಂಸದ ಪ್ರತಾಪ್ ಸಿಂಹ ಸಹೋದರ ವಿಕ್ರಂ ಸಿಂಹ ಅವರನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ಹಾಸನ ಜಿಲ್ಲೆ ಬೈಲೂರು ತಾಲೂಕಿನ ನಂದಗೊಂಡನಹಳ್ಳಿಯ ಜಮೀನಿನಲ್ಲಿದ್ದ ಸುಮಾರು 50 ವರ್ಷಕ್ಕೂ ಹಳೆಯದಾದ 126 ಮರಗಳನ್ನು ಕಡಿದಿರುವ ಆರೋಪದ ಮೇಲೆ ಸಂಸದ ಪ್ರತಾಪ್ ಸಿಂಹ ಸಹೋದರರನ್ನು ಪೊಲೀಸರು ಬಂಧಿಸಿದ್ದಾರೆ.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಹಾಸನ) ಪ್ರಭುಗೌಡ ಬಿರಾದಾರ್ ಮತ್ತು ಎಸಿಪಿ (ಕ್ರೈಂ ಸೆಲ್) ಬೆಂಗಳೂರು ನೇತೃತ್ವದ ಜಂಟಿ ತಂಡವು ವಿಕ್ರಮ್ ಸಿಂಹನನ್ನು ಬೆಂಗಳೂರಿನಲ್ಲಿ ಬಂಧಿಸಿದೆ.

ಈ ಕುರಿತು ಸಂಸದ ಪ್ರತಾಪ್ ಸಿಂಹ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದು, ನನ್ನ ರಾಜಕೀಯ ಭವಿಷ್ಯ ಅಂತ್ಯಗೊಳಿಸಲು ಕುಟುಂಬ ಬಲಿ ಕೊಡಲು ಮುಂದಾಗಿದ್ದಾರೆ. ಸಿಎಂ ತಮ್ಮ ಮಗನ ರಾಜಕೀಯ ಭವಿಷ್ಯಕ್ಕಾಗಿ ಈ ರೀತಿಯ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

## ಡಿಸಿಎಂ ಡಿಕೆ ಶಿವಕುಮಾರ್ ಗೆ ವರ್ಷದ ವ್ಯಕ್ತಿ ಪ್ರಶಸ್ತಿ ಪ್ರದಾನ




ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಕೊಡ ಮಾಡುವ "ವರ್ಷದ ವ್ಯಕ್ತಿ–ವಿಶೇಷ ವ್ಯಕ್ತಿ" ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ, 2024ರ ಪ್ರೆಸ್ ಕ್ಲಬ್ ಡೈರಿಯನ್ನು ಬಿಡುಗಡೆ ಗೊಳಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ವರ್ಷದ ವ್ಯಕ್ತಿ ಪ್ರಶಸ್ತಿ ನೀಡಲಾಯಿತು. ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ, ಕಾರ್ಮಿಕ ಸಚಿವರಾದ ಸಂತೋಷ್ ಎಸ್ ಲಾಡ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಕೆ.ಗೋವಿಂದರಾಜು ಅವರಿಗೆ ವಿಶೇಷ ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಲಾಯಿತು. ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿಗಳಾದ ಶಿವರಾಜ್ ಪಾಟೀಲ್ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ, ಸಂವಿಧಾನವೇ ನಮ್ಮ ಧರ್ಮ. ರಾಜಕೀಯ ಧರ್ಮ ಅನುಸರಿಸುವುದೇ ಸಂವಿಧಾನಕ್ಕೆ ಕೊಡುವ ಗೌರವ.

ಸುದೀರ್ಘ ಮತ್ತು ಅರ್ಥಪೂರ್ಣ ಚರ್ಚೆಯ ಬಳಿಕ ನಮ್ಮ ಈ ಸಂವಿಧಾನ ಜಾರಿಯಾಗಿದೆ. ಆದ್ದರಿಂದ ಈ ಸಂವಿಧಾನವನ್ನು ಗೌರವಿಸುವುದು, ಪಾಲಿಸುವುದು ಎಲ್ಲಾ ರಾಜಕೀಯ ಪಕ್ಷಗಳ, ವ್ಯಕ್ತಿಗಳ ಕರ್ತವ್ಯ ಎಂದರು.

ಅವಕಾಶ ವಂಚಿತರ ಪರವಾಗಿ, ಧ್ವನಿ ಇಲ್ಲದವರ ಪರವಾಗಿ ಧ್ವನಿ ಎತ್ತಿ ಬೆಂಬಲಿಸುವುದು, ವಸ್ತುನಿಷ್ಠವಾಗಿ ಸುದ್ದಿಗಳನ್ನು ವರದಿ ಮಾಡುವುದು ಪತ್ರಿಕಾ ವೃತ್ತಿಯ ಮೂಲಭೂತ ಮೌಲ್ಯ.

ಈ ಮೌಲ್ಯಗಳನ್ನು ಪಾಲಿಸುವುದೇ ಸಂವಿಧಾನಕ್ಕೆ ಕೊಡುವ ಗೌರವ. ಇದನ್ನು ಬಿಟ್ಟು ನನ್ನ ಕಾರಿನ ಮೇಲೆ ಕಾಗೆ ಕುಳಿತದ್ದನ್ನು ದೊಡ್ಡ ಚರ್ಚೆ ಮಾಡಿ ಮೌಢ್ಯ ಬೆಳೆಸಿದಂತಹ ರೀತಿಯಲ್ಲಿ ಕೆಲಸ ಮಾಡಬೇಡಿ ಎಂದು ತಿಳಿಸಿದರು.


ಯಾವುದೇ ಸರ್ಕಾರ ತಪ್ಪು ಮಾಡಿದರೂ ಅದನ್ನು ಹೇಳುವ ಧೈರ್ಯ ಪತ್ರಕರ್ತರಿಗೆ ಇರಬೇಕು. ಸ್ವಾತಂತ್ರ್ಯಪೂರ್ವದಲ್ಲಿ ದೇಶದ ಅಭಿವೃದ್ಧಿಯ ಚರ್ಚೆ ಮತ್ತು ಕನಸು ಇತ್ತು. ಈಗ ಮಾಧ್ಯಮ ಉದ್ಯಮಿಗಳ ಕೈಗೆ ಸಿಕ್ಕಿಕೊಂಡಿದೆ. ಉದ್ಯಮಿಗಳಿಗೆ ಸಮಾಜಮುಖಿಯಾದ ಯಾವ ಕಾಳಜಿಗಳೂ ಇರುವುದಿಲ್ಲ. ಈ ಬಗ್ಗೆ ಪತ್ರಕರ್ತ ಸಮೂಹ ಎಚ್ಚರ ವಹಿಸಬೇಕು.

ನನ್ನನ್ನು ಜೆಡಿಎಸ್ ನಿಂದ ಉಚ್ಚಾಟಣೆ ಮಾಡಿದರೇ ಹೊರತು ನಾನು ಜೆಡಿಎಸ್ ಬಿಡಲಿಲ್ಲ. ಹೀಗಾಗಿ ವರದಿ, ವಿಶ್ಲೇಷಣೆ ಮಾಡುವಾಗ ನಾನು ಜೆಡಿಎಸ್ ಪಕ್ಷ ತೊರೆದೆ ಎಂದು ಬರೆಯುವುದು ಸರಿಯಲ್ಲ ಎಂದರು.

## ಅಯೋಧ್ಯೆ ಟ್ರಸ್ಟ್ ಹೆಸರಿನಲ್ಲಿ ವಂಚಕರಿಂದ ಜನರಿಗೆ ಮೋಸ

ನವದೆಹಲಿ: ಅಯೋಧ್ಯೆ ರಾಮ ಮಂದಿರ ಟ್ರಸ್ಟ್ ನ ಹೆಸರಿನಲ್ಲಿ ಕೆಲವು ವ್ಯಕ್ತಿಗಳು ಜನರನ್ನು ವಂಚಿಸುತ್ತಿದ್ದಾರೆ ಎಂದು ವಿಶ್ವಹಿಂದೂ ಪರಿಷತ್ ಆರೋಪಿಸಿದೆ. ಟ್ರಸ್ಟ್ ನ ಅನುಮತಿ ಇಲ್ಲದೇ ದೇಣಿಗೆ ಸಂಗ್ರಹಿಸುವ ಮೂಲಕ ಹಲವು ವ್ಯಕ್ತಿಗಳು ವಂಚನೆ ಮಾಡುತ್ತಿದ್ದಾರೆ. ಈ ವಿಷಯವನ್ನು ಸಿಎಂ ಯೋಗಿ ಆದಿತ್ಯನಾಥ್, ಕೇಂದ್ರ ಗೃಹ ಸಚಿವಾಲಯದ ಗಮನಕ್ಕೂ ತರಲಾಗಿದ್ದು, ಕ್ರಮಕ್ಕೆ ಆಗ್ರಹಿಸಲಾಗಿದೆ ಎಂದು ವಿಶ್ವ ಹಿಂದೂ ಪರಿಷತ್ ಆರೋಪಿಸಿದೆ.

ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಹೆಚ್ ಪಿಯ ರಾಷ್ಟ್ರೀಯ ವಕ್ತಾರ ವಿನೋದ್ ಬನ್ಸಾಲ್, ಮಂದಿರ ಟ್ರಸ್ಟ್ ಹೆಸರಿನಲ್ಲಿ ವಂಚನೆ ಮಾಡುತ್ತಿರುವ ಇಂತಹ ವಂಚಕರ ಬಗ್ಗೆ ಎಚ್ಚರದಿಂದ ಇರಲು ಜನತೆಗೆ ಮನವಿ ಮಾಡಿದ್ದಾರೆ. ಅವರು ಉತ್ತರ ಪ್ರದೇಶ ಪೊಲೀಸ್ ಮುಖ್ಯಸ್ಥರಿಗೆ ಕಳುಹಿಸಿದ ದೂರನ್ನು ಮೈಕ್ರೋಬ್ಲಾಗಿಂಗ್ ಸೈಟ್‌ನಲ್ಲಿ ಹಂಚಿಕೊಂಡಿದ್ದಾರೆ, ಅದರ ಪ್ರತಿಯನ್ನು ಆದಿತ್ಯನಾಥ್ ಮತ್ತು ಗೃಹ ಸಚಿವ ಅಮಿತ್ ಶಾ



ಅವರಿಗೂ ಕಳಿಸಲಾಗಿದೆ.

'ಎಚ್ಚರ! ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರದ ನಕಲಿ ಗುರುತಿನ ಚೀಟಿ ಹೊಂದಿರುವವರು ಜನರನ್ನು ವಂಚಿಸಲು ಪ್ರಯತ್ನಿಸುತ್ತಿದ್ದಾರೆ' ಎಂದು ವಿಎಚ್‌ಪಿ ವಕ್ತಾರ ಬನ್ಸಾಲ್ ತಿಳಿಸಿದ್ದಾರೆ.

ಅಯೋಧ್ಯೆಯ ರಾಮ ಮಂದಿರದಲ್ಲಿ ಜನವರಿ 22 ರಂದು ನಡೆಯುವ ಶಂಕುಸ್ಥಾಪನೆ ಸಮಾರಂಭಕ್ಕೆ ಪ್ರತ್ಯೇಕ ಸಮಿತಿ ರಚಿಸಲು ಮತ್ತು ಹಣವನ್ನು ಸಂಗ್ರಹಿಸಲು ಯಾರಿಗೂ ಅನುಮತಿ ನೀಡಲಾಗಿಲ್ಲ ಎಂದು ಎಕ್ಸ್ ಪೋಸ್ಟ್‌ನಲ್ಲಿ ವಿಎಚ್‌ಪಿ ಇತ್ತೀಚೆಗೆ ಹೇಳಿತ್ತು.

## 37 ಐಪಿಎಸ್‌ಗಳ ವರ್ಗಾವಣೆ

### 46 IAS ಅಧಿಕಾರಿಗಳಿಗೆ ಬಡ್ತಿ: ಸರ್ಕಾರ ಆದೇಶ

ಬೆಂಗಳೂರು: ಹೊಸ ವರ್ಷಕ್ಕೆ ಒಂದು ದಿನ ಮುನ್ನವೇ 37 ಐಪಿಎಸ್‌ಅಧಿಕಾರಿಗಳನ್ನು ವರ್ಗಾವಣೆ ಮಾಡಿದ್ದರೆ, 46 ಐಎಎಸ್ ಅಧಿಕಾರಿಗಳಿಗೆ ವೇತನ ಶ್ರೇಣಿಯೊಂದಿಗೆ ಪದೋನ್ನತಿ ನೀಡಲಾಗಿದೆ.

ಆ ಮೂಲಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಮೇಜರ್ ಸರ್ಜರಿ ಮಾಡಲಾಗಿದೆ. ಕೆಲ ಐಪಿಎಸ್ ಅಧಿಕಾರಿಗಳಿಗೆ



ಮುಂಬಡ್ತಿ ನೀಡಿದರೆ. ಕೇಂದ್ರ ಸೇವೆಯಲ್ಲಿರುವ, ಅಧ್ಯಯನ ರಜೆ ಯಲ್ಲಿರುವ ಅಧಿಕಾರಿಗಳು, ಕೆಲ ದಿನಗಳ ಹಿಂದಷ್ಟೇ ಸ್ಥಳ ನಿಯೋಜಿಸಲ್ಪಟ್ಟ ಅಧಿಕಾರಿಗಳು ಸೇರಿದಂತೆ 46 ಐಎಎಸ್ ಅಧಿಕಾರಿಗಳಿಗೆ ಬಡ್ತಿ ನೀಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

## ವಿದ್ಯಾರ್ಥಿನಿ ಮೇಲೆ ಅತ್ಯಾಚಾರ: ಮೂವರ ಬಂಧನ




ವಾರಣಾಸಿ: ಬನಾರಸ್ ಹಿಂದೂ ವಿವಿ ಅವರಣದಲ್ಲಿ ಐಐಟಿ ವಿದ್ಯಾರ್ಥಿನಿ ಮೇಲೆ ನಡೆದಿದ್ದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ವಾರಣಾಸಿ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಬಿಎಚ್‌ಯು ಕ್ಯಾಂಪಸ್‌ನಲ್ಲಿ ಐಐಟಿಯ ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿದ ಆರೋಪಕ್ಕೆ ಸಂಬಂಧಿಸಿದಂತೆ ಇಲ್ಲಿನ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ಭಾನುವಾರ ತಿಳಿಸಿದ್ದಾರೆ.

ಬಂಧಿತರನ್ನು ಕುನಾಲ್ ಪಾಂಡೆ, ಆನಂದ್ ಅಲಿಯಾಸ್ ಅಭಿಷೇಕ್ ಚೌಹಾಣ್ ಹಾಗೂ ಸಕ್ಷಮ್ ಪಟೇಲ್ ಎಂದು ಗುರುತಿಸಲಾಗಿದೆ ಎಂದು ಲಂಕಾ ಪೊಲೀಸ್ ಠಾಣೆಯ ಎಸ್‌ಎಚ್‌ಒ ಶಿವಕಾಂತ್ ಮಿಶ್ರಾ ತಿಳಿಸಿದ್ದಾರೆ.

**ಏನಿದು ಘಟನೆ?**

ದೂರುದಾರರ ಪ್ರಕಾರ, ನವೆಂಬರ್1 ರ ರಾತ್ರಿ ಅತ್ಯಾಚಾರ ಘಟನೆ ನಡೆದಿತ್ತು. ಸಂತ್ರಸ್ತೆ ತನ್ನ ಸ್ನೇಹಿತನೊಂದಿಗೆ ಹಾಸ್ಟೆಲ್‌ನಿಂದ ಹೊರಗೆ ಹೋಗಿದ್ದಳು.

ಆಗ ಬೈಕ್ ನಲ್ಲಿ ಬಂದ ಮೂವರು ವ್ಯಕ್ತಿಗಳು, ಸ್ನೇಹಿತನಿಂದ ಬೇರ್ಪಡಿಸಿ ಅವಳನ್ನು ಬಲವಂತವಾಗಿ ಕರೆದೊಯ್ದು ಅತ್ಯಾಚಾರವೆಸಗಿದ್ದರು.

ಬಳಿಕ ಆರೋಪಿಗಳು ಆಕೆಯನ್ನು ವಿವಸ್ತ್ರಗೊಳಿಸಿ, ವಿಡಿಯೊ ಮಾಡಿ ಫೋಟೋ ತೆಗೆದಿದ್ದಾರೆ. ಸುಮಾರು 15 ನಿಮಿಷಗಳ ನಂತರ ಆಕೆಯ ಫೋನ್ ನಂಬರ್ ತೆಗೆದುಕೊಂಡು ಹೋಗಲು ಬಿಟ್ಟರು ಎಂದು ದೂರುದಾರರು ತಿಳಿಸಿದ್ದಾರೆ.

ಸಂತ್ರಸ್ತೆಯ ದೂರಿನ ಆಧಾರದ ಮೇಲೆ, ಐಪಿಸಿಯ ಸೆಕ್ಷನ್ 354 (ಮಹಿಳೆ ಮೇಲೆ ದೌರ್ಜನ್ಯ), ಸಾಮೂಹಿಕ ಅತ್ಯಾಚಾರ ಹಾಗೂ ಮಾಹಿತಿ ತಂತ್ರಜ್ಞಾನ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಲಂಕಾ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಸಂಪಾದಕೀಯ

## ಅದಾನಿ ಸಮೂಹದ ಮೇಲೆ ಆರೋಪ: ಸೂಕ್ತ ತನಿಖೆ ಅನಿವಾರ್ಯ

ಅಮೆರಿಕದ ನ್ಯೂಯಾರ್ಕ್‌ನ ಸಂಶೋಧನಾ ಸಂಸ್ಥೆ 'ಹಿಂಡನ್‌ಬರ್ಗ್ ರಿಸರ್ಚ್' ವರದಿಯೊಂದನ್ನು ಬಿಡುಗಡೆ ಮಾಡಿದ ನಂತರದಲ್ಲಿ ಭಾರತದ ಷೇರುಪೇಟೆಗಳಲ್ಲಿ ಬುಧವಾರ ಹಾಗೂ ಶುಕ್ರವಾರ ಕಂಡುಬಂದ ಕುಸಿತವು ಹಣಕಾಸು ಮಾರುಕಟ್ಟೆ ವ್ಯವಸ್ಥೆಯಲ್ಲಿನ ಅಪಾಯಗಳನ್ನು ಹಾಗೂ ಅವು ಬಾಹ್ಯ ಪ್ರಭಾವಗಳಿಗೆ ಹೇಗೆ ಬಾಗಬಲ್ಲವು ಎಂಬುದನ್ನು ತೋರಿಸಿದೆ. ಹಿಂಡನ್‌ಬರ್ಗ್ ರಿಸರ್ಚ್ ಪ್ರಕಟಿಸಿರುವ ವರದಿಯು ಅದಾನಿ ಸಮೂಹಕ್ಕೆ ಸೇರಿದ ಕಂಪನಿಗಳ ಬಗ್ಗೆ ಟೀಕೆಗಳನ್ನು, ಆರೋಪಗಳನ್ನು ಮಾಡಿದೆ. ಆದರೆ, ಈ ವರದಿ ಬಹಿರಂಗವಾದ ನಂತರದಲ್ಲಿ ಅದಾನಿ ಸಮೂಹಕ್ಕೆ ಸೇರಿದ ಕಂಪನಿಗಳ ಷೇರುಮೌಲ್ಯ ಮಾತ್ರವಲ್ಲದೆ, ದೇಶದ ಷೇರುಪೇಟೆಗಳಲ್ಲಿ ನೋಂದಾಯಿತವಾಗಿರುವ ಇತರ ಕೆಲವು ಕಂಪನಿಗಳ ಷೇರುಮೌಲ್ಯ ಕೂಡ ಕುಸಿದಿದೆ.

ಎರಡು ದಿನಗಳ ವಹಿವಾಟಿನಲ್ಲಿ ಷೇರುಪೇಟೆಯು ಶೇಕಡ 3ರಷ್ಟು ಕುಸಿಯಿತು. ಷೇರುಪೇಟೆ ಸೂಚ್ಯಂಕಗಳು ಇಷ್ಟು ಕುಸಿದಿದ್ದಕ್ಕೆ ಒಂದು ಮುಖ್ಯ ಕಾರಣ ಈ ವರದಿ ಎಂಬುದು ಸ್ಪಷ್ಟ. ಅದಾನಿ ಸಮೂಹದ ಕಂಪನಿಗಳ ಷೇರು ಮೌಲ್ಯ ಭಾರಿ ಕುಸಿತ ಕಂಡಿತು. ಅಲ್ಲದೆ, ಅದಾನಿ ಸಮೂಹಕ್ಕೆ ಸಾಲ ನೀಡಿರುವ, ಸಮೂಹದಲ್ಲಿ ಹೂಡಿಕೆ ಮಾಡಿರುವ ಎಸ್‌ಬಿಐ ಹಾಗೂ ಎಲ್‌ಐಸಿಯಂತಹ ಕಂಪನಿಗಳ ಷೇರುಮೌಲ್ಯ ಕೂಡ ಗಮನಾರ್ಹ ಪ್ರಮಾಣದಲ್ಲಿ ಕುಸಿದಿದೆ. ವರದಿಯ ಪರಿಣಾಮವು ದೇಶದ ಷೇರುಪೇಟೆಗೆ ಮಾತ್ರ ಸೀಮಿತವಾಗಿರುವುದಿಲ್ಲ. ಬದಲಿಗೆ, ಅದಾನಿ ಸಮೂಹದ ಕಂಪನಿಗಳು ಸಕ್ರಿಯವಾಗಿರುವ ಇತರ ಹಲವು ವಲಯಗಳ ಮೇಲೆಯೂ ಇದು ಪರಿಣಾಮ ಉಂಟುಮಾಡಬಹುದು.

ಅದಾನಿ ಸಮೂಹವು 'ಷೇರು ಮೌಲ್ಯದ ಮೇಲೆ ಕೃತಕವಾಗಿ ಪ್ರಭಾವ ಬೀರಬಲ್ಲ ಕೃತ್ಯಗಳಲ್ಲಿ ಲಜ್ಜೆಯಿಲ್ಲದೆ ತೊಡಗಿಸಿಕೊಂಡಿದೆ ಹಾಗೂ ಲೆಕ್ಕಪತ್ರ ವಂಚನೆ ಎಸಗಿದೆ' ಎಂದು ಹಿಂಡನ್‌ಬರ್ಗ್ ರಿಸರ್ಚ್ ಸಂಸ್ಥೆಯು ಆರೋಪ ಮಾಡಿದೆ. ಸಮೂಹವು ಶೆಲ್ ಕಂಪನಿಗಳ ಮೂಲಕ, ತೆರಿಗೆ ವಂಚಕರ ಪಾಲಿಗೆ ಸ್ವರ್ಗವೆಂದು ಕರೆಸಿಕೊಂಡಿರುವ ಸಾಗರದಾಚೆಯ ನಾಡುಗಳನ್ನು 'ಸರಿಯಲ್ಲದ ರೀತಿಯಲ್ಲಿ' ಬಳಸಿಕೊಂಡಿದೆ ಎಂದು ಕೂಡ ಅದು ಆರೋಪಿಸಿದೆ.

ಅದಾನಿ ಸಮೂಹಕ್ಕೆ ಸೇರಿದ, ಷೇರುಪೇಟೆ ನೋಂದಾಯಿತ ಕಂಪನಿಗಳ ಸಾಲದ ಪ್ರಮಾಣವು ಗಣನೀಯ ಪ್ರಮಾಣದಲ್ಲಿ ಇದೆ. ಇದರಿಂದಾಗಿ ಇಡೀ ಸಮೂಹದ ಹಣಕಾಸಿನ ಸ್ಥಿತಿ ಅಪಾಯದಲ್ಲಿದೆ ಎಂದು ಕೂಡ ವರದಿಯಲ್ಲಿ ಹೇಳಲಾಗಿದೆ. 'ತಪ್ಪು ಮಾಹಿತಿ, ಆಧಾರವಿಲ್ಲದ ಹಾಗೂ ವಿಶ್ವಾಸಾರ್ಹವಲ್ಲದ ಮಾಹಿತಿಯನ್ನು ಕೆಟ್ಟ ಉದ್ದೇಶದಿಂದ ಒಗ್ಗೂಡಿಸಿ ಈ ವರದಿ ಸಿದ್ಧಪಡಿಸಲಾಗಿದೆ' ಎಂದು ಈ ವರದಿಯ ಬಗ್ಗೆ ಅದಾನಿ ಸಮೂಹ ಪ್ರತಿಕ್ರಿಯಿಸಿದೆ.

ಸಮೂಹದ ಪ್ರಮುಖ ಕಂಪನಿಯಾಗಿರುವ ಅದಾನಿ ಎಂಟರ್‌ಪ್ರೈಸಸ್‌ನ ಷೇರು ಮಾರಾಟ ಪ್ರಕ್ರಿಯೆಯ (ಎಫ್‌ಪಿಒ) ಸಂದರ್ಭದಲ್ಲಿ ಬಿಡುಗಡೆ ಆಗಿರುವ ವರದಿಯು 'ಕೆಡುಕು ಉಂಟುಮಾಡುವ ಉದ್ದೇಶ ಹೊಂದಿದೆ' ಎಂದು ಕೂಡ ಸಮೂಹ ಹೇಳಿದೆ. ವರದಿ ಬಿಡುಗಡೆ ಆಗಿರುವ ಸಂದರ್ಭವು ಎಫ್‌ಪಿಒ ಪ್ರಕ್ರಿಯೆಗೆ ತೊಂದರೆ ಉಂಟುಮಾಡಬಹುದು. ಆದರೆ ಇದನ್ನೇ ಆಧಾರವಾಗಿ ಇರಿಸಿಕೊಂಡು ವರದಿಯ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗದು.

ಅದಾನಿ ಸಮೂಹದ ಕುರಿತು ಕಳವಳಗಳು ವ್ಯಕ್ತವಾಗಿರುವುದು ಇದೇ ಮೊದಲೇನೂ ಅಲ್ಲ. ಹಣಕಾಸು ವಲಯದಲ್ಲಿ ಹೆಸರು ಸಂಪಾದಿಸಿರುವ ಕ್ರೆಡಿಟ್‌ಸೈಟ್ಸ್ ಸಂಸ್ಥೆಯು ಕೆಲವು ತಿಂಗಳ ಹಿಂದೆ, 'ಸಮೂಹದ ಸಾಲ ಹೆಚ್ಚಿನ ಮಟ್ಟದಲ್ಲಿದೆ' ಎಂದು ಹೇಳಿತ್ತು. ಖಾಸಗಿ ಮ್ಯೂಚುವಲ್ ಫಂಡ್ ಕಂಪನಿಗಳು ಅದಾನಿ ಸಮೂಹದ ಕಂಪನಿಗಳಲ್ಲಿ ಹೂಡಿಕೆ ಮಾಡಿಲ್ಲ. ಆದರೆ, ಸರ್ಕಾರದ ಪ್ರಭಾವಕ್ಕೆ ಒಳಪಟ್ಟಿರುವ ಭಾರತೀಯ ಜೀವ ವಿಮಾ ನಿಗಮ (ಎಲ್‌ಐಸಿ) ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್‌ನ ಅಂಗಸಂಸ್ಥೆಗಳು ಅದಾನಿ ಸಮೂಹದ ಕಂಪನಿಗಳಲ್ಲಿ ದೊಡ್ಡ ಮಟ್ಟದಲ್ಲಿ ಹೂಡಿಕೆ ಮಾಡಿವೆ. ಸಮೂಹದ ಕಂಪನಿಗಳ ಷೇರುಮೌಲ್ಯ ಕುಸಿಯುತ್ತಿದ್ದ ಹೊತ್ತಿನಲ್ಲಿಯೂ ಎಲ್‌ಐಸಿ, ಸಮೂಹದ ಕಂಪನಿಯಲ್ಲಿ ಹೂಡಿಕೆ ಹೆಚ್ಚಿಸಿದೆ.

ಹಿಂಡನ್‌ಬರ್ಗ್ ರಿಸರ್ಚ್ ಸಂಸ್ಥೆ ಮಾಡಿರುವ ಆರೋಪಗಳ ಕುರಿತು ಗಂಭೀರ ತನಿಖೆ ಆಗಬೇಕು. ಆರೋಪಗಳಲ್ಲಿ ಹುರುಳಿದೆಯೇ ಎಂಬ ಬಗ್ಗೆ ಸ್ವತಂತ್ರವಾಗಿ ತನಿಖೆ ನಡೆಯಬೇಕು. ಅದಾನಿ ಸಮೂಹದ ಪ್ರವರ್ತಕರ ಕುಟುಂಬವು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹತ್ತಿರವಾಗಿದೆ ಎಂಬ ವರದಿಗಳು ಇವೆ. ಸಮೂಹವು ಈಚಿನ ಕೆಲವು ವರ್ಷಗಳಲ್ಲಿ ಅಸಾಧಾರಣ ಬೆಳವಣಿಗೆ ಕಂಡಿರುವುದಕ್ಕೂ, ಈ ಸಂಬಂಧಕ್ಕೂ ನಂಟು ಇದೆ ಎಂಬ ಮಾತು ಕೂಡ ಇದೆ. ಆದರೆ ಇವೆಲ್ಲ ತನಿಖೆಯ ಮೇಲೆ ಪ್ರಭಾವ ಬೀರಬಾರದು.

ಇದು ಹೂಡಿಕೆದಾರರ ಹಣ ಹಾಗೂ ಎಲ್‌ಐಸಿ ಮತ್ತು ಎಸ್‌ಬಿಐನಂತಹ ಕಂಪನಿಗಳಲ್ಲಿ ಇರುವ ಸಾರ್ವಜನಿಕರ ಹಣಕ್ಕೆ ಸಂಬಂಧಿಸಿದ ವಿಚಾರ. ಅದಾನಿ ಸಮೂಹಕ್ಕೆ ನೆರವು ಒದಗಿಸಲು ಈ ಸಂಸ್ಥೆಗಳನ್ನು ಬಳಸಿಕೊಳ್ಳಬಾರದು. ವಾಣಿಜ್ಯ ವಹಿವಾಟಿನ ಸಂದರ್ಭದಲ್ಲಿ ಪಾಲನೆಯಾಗುವ ನೀತಿ–ನಿಯಮಗಳು, ಕಾರ್ಪೊರೇಟ್ ನಿಯಮಗಳು ಹಾಗೂ ಕಾರ್ಪೊರೇಟ್ ಆಡಳಿತಕ್ಕೆ ಸಂಬಂಧಿಸಿದ ಪ್ರಶ್ನೆ ಕೂಡ ಈ ಪ್ರಕರಣದಲ್ಲಿದೆ. ಸರ್ಕಾರ ಮತ್ತು ತನಿಖಾ ಸಂಸ್ಥೆಗಳು ಈ ಪ್ರಕರಣದಲ್ಲಿ ಹೇಗೆ ನಡೆದುಕೊಳ್ಳುತ್ತವೆ ಎಂಬುದು ದೇಶದ ಪ್ರತಿಷ್ಠೆಯ ಮೇಲೆಯೂ ದೊಡ್ಡ ಮಟ್ಟದಲ್ಲಿ ಪರಿಣಾಮ ಬೀರಲಿದೆ.

# ಮಕ್ಕಳು ನಿರಂತರವಾಗಿ ಕೆಮ್ಮುತ್ತಿದ್ದರೆ ಈ ಹಣ್ಣುಗಳನ್ನು ನೀಡಲೇಬೇಡಿ

ಚಳಿಗಾಲದಲ್ಲಿ ಸಾಮಾನ್ಯವಾಗಿ ಮಕ್ಕಳು ಅನಾರೋಗ್ಯಕ್ಕೆ ಒಳಗಾಗುತ್ತಾರೆ, ಶೀತ, ಕೆಮ್ಮು, ಜ್ವರ ಸೇರಿದಂತೆ ಅನೇಕ ಆರೋಗ್ಯ ಸಮಸ್ಯೆಗಳು ಕಾಡುವುದು ಸಹಜ.

ಪಾಲಕರು ನಿರಂತರವಾಗಿ ಹೆಚ್ಚಿನ ಒತ್ತಡವನ್ನು ಅನುಭವಿಸುತ್ತಾರೆ ಮತ್ತು ಮಕ್ಕಳಲ್ಲಿ ಆಗಾಗ ತಗುಲುವ ಸೋಂಕಿನಿಂದ ಭಯಪಡುತ್ತಿದ್ದಾರೆ. ಇನ್ನೇನು ಶೀತ ಕಡಿಮೆಯಾಯಿತು ಎನ್ನುವಾಗ ಕೆಮ್ಮು ಸೇರಿದಂತೆ ಇತರೆ ಅಲರ್ಜಿಗಳು ಗೋಚರಿಸುತ್ತವೆ.

ಸ್ಟ್ರಾಬೆರಿ, ದ್ರಾಕ್ಷಿ ಮತ್ತು ಲಿಚಿ ನೀಡುವುದನ್ನು ನಿಲ್ಲಿಸಿ ಕೆಮ್ಮನ್ನು ಹೋಗಲಾಡಿಸಲು, ಮಕ್ಕಳು ಚಳಿಗಾಲದಲ್ಲಿ ಸ್ಟ್ರಾಬೆರಿ, ದ್ರಾಕ್ಷಿ ಮತ್ತು ಲಿಚಿ, ನ್ಯುಮೋನಿಯಾ, ತೀವ್ರ ಜ್ವರ, ಗಲಗ್ರಂಥಿಯ ಉರಿಯೂತ ಮತ್ತು ಕಿವಿ ಸೋಂಕುಗಳನ್ನು ತಿನ್ನುವುದನ್ನು ನಿಲ್ಲಿಸಬೇಕು.



ಈ ಹಣ್ಣುಗಳನ್ನು ಶಿಶುಗಳಿಗೆ ಏಕೆ ತಿನ್ನಬಾರದು ಎಂಬುದಕ್ಕೆ, ಸ್ಟ್ರಾಬೆರಿಗಳು ಹಿಸ್ಟಮೈನ್ ಅನ್ನು ಬಿಡುಗಡೆ ಮಾಡುತ್ತವೆ ಎಂದು ವಿವರಿಸುತ್ತಾರೆ, ಇದು ಕೆಮ್ಮನ್ನು ಪ್ರಚೋದಿಸುತ್ತದೆ, ಅಸ್ತಿತ್ವದಲ್ಲಿರುವ ಕೆಮ್ಮನ್ನು ಉಲ್ಬಣಗೊಳಿಸುತ್ತದೆ ಅಥವಾ ಕೆಮ್ಮನ್ನು ಉಂಟುಮಾಡುತ್ತದೆ, ದ್ರಾಕ್ಷಿಗಳು ಮತ್ತು ಇದನ್ನು ಲಿಚಿ ತಿನ್ನುವ ಮೂಲಕ ತಯಾರಿಸಲಾಗುತ್ತದೆ. ಇದು ನೈಸರ್ಗಿಕ ಸಕ್ಕರೆಯಲ್ಲಿ ಅಧಿಕವಾಗಿರುವ ಹಣ್ಣುಗಳು, ಇದು ಬ್ಯಾಕ್ಟೀರಿಯಾದ ಬೆಳವಣಿಗೆಗೆ ಉತ್ತಮ ಮಾಧ್ಯಮವಾಗಿದೆ.

ಪೋಷಕರು ಯಾವುದರ ಬಗ್ಗೆ ಹೆಚ್ಚು ಕೊಡಬೇಕು? ಶಿಶುವೈದ್ಯರು ಹೆಚ್ಚು ಬಣ್ಣದ, ಕೃತಕವಾಗಿ ಸಿಹಿಗೊಳಿಸಲಾದ, ಕೃತಕ ಬಣ್ಣ ಅಥವಾ ಅತಿಯಾದ ತಣ್ಣನೆಯ ಆಹಾರಗಳನ್ನು ತಪ್ಪಿಸಲು ಶಿಫಾರಸು ಮಾಡುತ್ತಾರೆ. ಅವರ ಪ್ರಕಾರ, ಶೀತವು ಸ್ಥಳೀಯ ತಡೆಗೋಡೆಯನ್ನು ಒಡೆಯುತ್ತದೆ ಮತ್ತು ಬ್ಯಾಕ್ಟೀರಿಯಾವನ್ನು ಬೆಳೆಯಲು ಅನುವು ಮಾಡಿಕೊಡುತ್ತದೆ, ಆದರೆ ಸೋಂಕು ಸಂಭವಿಸಲು ಅನುವು ಮಾಡಿಕೊಡುತ್ತದೆ. ಐಸ್ ಕ್ರೀಮ್, ಚಾಕೊಲೇಟ್, ಕ್ಯಾಂಡಿ, ಪೇಸ್ಟ್ರಿ, ಡೋನಟ್ಸ್, ಕೇಕ್, ಸ್ಟ್ರಾಬೆರಿ, ಲಿಚಿ, ದ್ರಾಕ್ಷಿ ಮತ್ತು ಫ್ರಿಡ್ಜ್‌ನಲ್ಲಿ ಇರಿಸಲಾದ ಯಾವುದೇ ಶೀತ ವಸ್ತುಗಳನ್ನು ತಪ್ಪಿಸಬೇಕು.

ಮಕ್ಕಳು ಈ ಹಣ್ಣುಗಳನ್ನು ತಿನ್ನುವುದನ್ನು ತಪ್ಪಿಸಬೇಕು, ಹಾಗೆಯೇ ಮಕ್ಕಳು ಮುಗ್ಧರು, ಅವರಿಗೆ ಏನು ತಿನ್ನಬೇಕು ಮತ್ತು ಏನು ಮಾಡಬಾರದು ಎಂದು ತಿಳಿದಿಲ್ಲ, ಇದಕ್ಕಾಗಿ ಮಕ್ಕಳು ಶೀತ ಅಥವಾ ಸಿಹಿ ತಿನ್ನುವುದನ್ನು ತಪ್ಪಿಸಬೇಕು ಎಂದು ಪೋಷಕರು ನೆನಪಿನಲ್ಲಿಡಬೇಕು. ನಿಮ್ಮ ಮಗು ಕೆಮ್ಮಿನ ಹೆಚ್ಚು ಗಂಭೀರ ಲಕ್ಷಣಗಳನ್ನು ತೋರಿಸುತ್ತಿದ್ದರೆ, ನಂತರ ವೈದ್ಯರನ್ನು ಪರೀಕ್ಷಿಸಿ.


# ಸಕ್ಕರೆಯ ಬದಲು ಬೆಲ್ಲ ತಿಂದರೆ ಸಿಗುವ ಆರೋಗ್ಯಕಾರಿ ಲಾಭಗಳಿವು!

ಸಕ್ಕರೆ, ಬೆಲ್ಲ ಎರಡೂ ಸಿಹಿ ಪದಾರ್ಥಗಳಾದರೂ ಆರೋಗ್ಯದ ವಿಚಾರದಲ್ಲಿ ಬೆಲ್ಲ ಈಸ್ ದ ಬೆಸ್ಟ್. ತಯಾರಿಕೆಯ ಸಮಯದಲ್ಲಿ ಸಕ್ಕರೆ ತನ್ನ ಪೌಷ್ಟಿಕಾಂಶದ ಮೌಲ್ಯವನ್ನು ಕಳೆದುಕೊಳ್ಳುತ್ತದೆ, ಆದರೆ ಬೆಲ್ಲವು ಅದರ ಪೌಷ್ಟಿಕಾಂಶದ ಮೌಲ್ಯವನ್ನು ಉಳಿಸಿಕೊಳ್ಳುತ್ತದೆ.

ಬೆಲ್ಲವು ಸಕ್ಕರೆಗಿಂತ ಹೆಚ್ಚು ಪೌಷ್ಟಿಕವಾಗಿದೆ. ವಿವಿಧ ಆರೋಗ್ಯ ಪ್ರಯೋಜನಗಳನ್ನು ಒದಗಿಸುತ್ತದೆ.

ಸಕ್ಕರೆಗಿಂತ ಬೆಲ್ಲ ಏಕೆ ಆರೋಗ್ಯಕರ? ಬೆಲ್ಲವು ಸಾಂದ್ರೀಕೃತ ಕಬ್ಬಿನ ರಸದಿಂದ ತಯಾರಿಸಿದ ಸಂಸ್ಕರಿಸದ ಪಾಕ. ಬೆಲ್ಲದಲ್ಲಿರುವ ಕ್ಯಾಲ್ಸಿಯಂ, ಪೊಟ್ಯಾಸಿಯಮ್, ಮೆಗ್ನೀಸಿಯಮ್, ಮ್ಯಾಂಗನೀಸ್, ಸತು ಮತ್ತು ಸೆಲೆನಿಯಂನಂತಹ ಇತರ ಖನಿಜಗಳು ಕಬ್ಬಿನ ರಸದಿಂದ ಬರುತ್ತವೆ.

ಬೆಲ್ಲವು ಸಸ್ಯ ಮೂಲದ ಕಬ್ಬಿಣದ ಅತ್ಯುತ್ತಮ ಮೂಲಗಳಲ್ಲಿ ಒಂದಾಗಿದೆ, ಇದು ಸ್ನಾಯುವಿನ ಕಾರ್ಯವನ್ನು ಸುಧಾರಿಸಲು, ಶಕ್ತಿಯನ್ನು



ಹೆಚ್ಚಿಸಲು ಸಹಾಯ ಮಾಡುತ್ತದೆ. ಹೊಟ್ಟೆಯ ಸುತ್ತಲಿನ ಕೊಬ್ಬನ್ನು ವೇಗವಾಗಿ ಸುಡಲು ಸಹಾಯ ಮಾಡುತ್ತದೆ

ಬೆಲ್ಲದಲ್ಲಿರುವ ಉತ್ಕರ್ಷಣ ನಿರೋಧಕಗಳು ವಯಸ್ಸಾದ ಲಕ್ಷಣಗಳನ್ನು ಸಹ ಕಡಿಮೆ ಮಾಡುತ್ತದೆ. ನೆಗಡಿ ಮತ್ತು ಸೋಂಕುಗಳ ಚಿಕಿತ್ಸೆಯಲ್ಲಿ ಬೆಲ್ಲ ಸಹಕಾರಿ. ಶೀತ, ಕೆಮ್ಮು ಮತ್ತು ಅಸ್ತಮಾ ಚಿಕಿತ್ಸೆಯಲ್ಲಿ ಸಹಾಯ ಮಾಡುತ್ತದೆ.

**ಸಕ್ಕರೆಯ ಆರೋಗ್ಯದ ಪರಿಣಾಮಗಳು**

ಹೆಚ್ಚು ಸಕ್ಕರೆ ತಿನ್ನುವುದರಿಂದ ತೂಕ ಹೆಚ್ಚಾಗುವುದು, ಆಯಾಸ ಮತ್ತು ಮೊಡವೆ ಉಂಟಾಗುತ್ತದೆ. ಹೆಚ್ಚು ಸಕ್ಕರೆಯನ್ನು ಸೇವಿಸುವುದರಿಂದ ಟೈಪ್ 2 ಮಧುಮೇಹ ಮತ್ತು ಹೃದಯ ಸಮಸ್ಯೆಗಳಂತಹ ದೀರ್ಘಕಾಲದ ಪರಿಸ್ಥಿತಿಗಳ ಅಪಾಯವನ್ನು ಹೆಚ್ಚಿಸುತ್ತದೆ.

**ಬೆಲ್ಲದ ಇತರ ಆರೋಗ್ಯ ಪ್ರಯೋಜನಗಳು;**

1.ಜೀರ್ಣಕ್ರಿಯೆಗೆ ಸಹಾಯ

2.ಯಕೃತ್ತಿನಿಂದ ವಿಷವನ್ನು ಹೊರಹಾಕುತ್ತದೆ

3.ರಕ್ತವನ್ನು ಶುದ್ಧೀಕರಿಸುತ್ತದೆ

4.ಶ್ವಾಸಕೋಶ ಮತ್ತು ಉಸಿರಾಟದ ಸೋಂಕುಗಳ ವಿರುದ್ಧ ಹೋರಾಡುತ್ತದೆ

5. ಮಲಬದ್ಧತೆ ನಿವಾರಿಸುತ್ತದೆ 6. ಶಾಖವನ್ನು ಉತ್ಪಾದಿಸುತ್ತದೆ ಮತ್ತು ಶಕ್ತಿಯ ಮಟ್ಟವನ್ನು ಹೆಚ್ಚಿಸುತ್ತದೆ

7. ಪ್ರೀ ಮೆನ್ಸ್ಟ್ರುವಲ್ ಸಿಂಡ್ರೋಮ್ ಅನ್ನು ಸರಾಗಗೊಳಿಸುತ್ತದೆ

8. ಉತ್ಕರ್ಷಣ ನಿರೋಧಕ ಮತ್ತು ಆಂಟಿ ಕಾರ್ಸಿನೋಜೆನಿಕ್ ಗುಣಲಕ್ಷಣಗಳನ್ನು ಹೊಂದಿದೆ

# ಬೆಳಗಿನ ಉಪಾಹಾರಕ್ಕೆ ಬಾಳೆಹಣ್ಣಿನ ಸೇವನೆ ಆರೋಗ್ಯಕರವೇ?



ಅನೇಕರಿಗೆ ಬೆಳಗಿನ ಉಪಾಹಾರಕ್ಕಾಗಿ ಬಾಳೆಹಣ್ಣು ತಿನ್ನಲು ಇಷ್ಟಪಡುತ್ತಾರೆ. ಬೆಳಗಿನ ಉಪಾಹಾರಕ್ಕೆ ಬಾಳೆಹಣ್ಣು ಉತ್ತಮ ಆಯ್ಕೆ ಎನ್ನುತ್ತಾರೆ ತಜ್ಞರು. ಮುಂಜಾನೆ ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿನ್ನುವುದರಿಂದ ಅನೇಕ ಆರೋಗ್ಯ ಪ್ರಯೋಜನಗಳಿವೆ.

ಬಾಳೆಹಣ್ಣುಗಳು ಹೆಚ್ಚು ಪೌಷ್ಟಿಕಾಂಶವನ್ನು ಹೊಂದಿದ್ದು, ಉತ್ತಮ ಪ್ರಮಾಣದ ಪೊಟ್ಯಾಸಿಯಮ್, ಫೈಬರ್ ಮತ್ತು ವಿಟಮಿನ್ ಬಿ6 ಮತ್ತು ಸಿ ಅನ್ನು ಹೊಂದಿರುತ್ತದೆ. ಅವು ಕಾರ್ಬೋಹೈಡ್ರೇಟ್‌ಗಳು ಮತ್ತು ನೈಸರ್ಗಿಕ ಸಕ್ಕರೆಗಳಲ್ಲಿ ತುಲನಾತ್ಮಕವಾಗಿ ಹೆಚ್ಚು. ಬೆಳಿಗ್ಗೆ ತ್ವರಿತ ಶಕ್ತಿಯನ್ನು ಒದಗಿಸಲು ಸಹಾಯ ಮಾಡುತ್ತದೆ. ಇದು ರಕ್ತದಲ್ಲಿನ ಸಕ್ಕರೆಯ ಮಟ್ಟವನ್ನು ಹೆಚ್ಚಿಸುತ್ತದೆ.

ವಿಶೇಷವಾಗಿ ಗ್ಯಾಸ್, ಹೊಟ್ಟೆ ನೋವು, ಅಜೀರ್ಣ ಮತ್ತು ಬೆಲ್ಚಿಂಗ್‌ನಂತಹ ಸಮಸ್ಯೆಗಳಿಂದ ಬಳಲುತ್ತಿರುವವರು ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿನ್ನಬಹುದು. ಬಾಳೆಹಣ್ಣು ಯಾವುದೇ ಆರೋಗ್ಯ ಸಮಸ್ಯೆಗಳನ್ನು ದೂರವಿಡುತ್ತದೆ. ಸಮತೋಲಿತ ಉಪಹಾರದ ಭಾಗವಾಗಿ ಬಾಳೆಹಣ್ಣುಗಳನ್ನು ಸೇವನೆ ಪ್ರಯೋಜನಕಾರಿಯಾಗಿದೆ.

ಇದು ರಕ್ತದ ಸಕ್ಕರೆ ನಿಯಂತ್ರಣ ಬೆಂಬಲಿಸುತ್ತದೆ. ಊಟದ ನಡುವೆ ಹಸಿವನ್ನು ಕಡಿಮೆ ಮಾಡುತ್ತದೆ. ಬಾಳೆಹಣ್ಣಿನ ಜೊತೆಗೆ ಪ್ರೋಟೀನ್ ಆಹಾರವನ್ನು ಸೇವಿಸುವುದರಿಂದ ತೂಕ ನಷ್ಟ ಮತ್ತು ಕೊಬ್ಬು ನಷ್ಟವನ್ನು ಉತ್ತೇಜಿಸುತ್ತದೆ.

# ಕಿತ್ತಳೆ ಹಣ್ಣು ತಿಂದ ಮೇಲೆ ಯಾವತ್ತೂ ಸೇವಿಸಬೇಡಿ ಈ ಪದಾರ್ಥಗಳನ್ನು!

ಕಿತ್ತಳೆ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ಹೇಳಲಾಗುತ್ತದೆ. ಇದು ಪೋಷಕಾಂಶಗಳಿಂದ ತುಂಬಿದೆ. ವಿಟಮಿನ್ ಸಿ ಮತ್ತು ಆಂಟಿ–ಆಕ್ಸಿಡೆಂಟ್‌ಗಳಂತಹ ಅನೇಕ ಪೋಷಕಾಂಶಗಳು ಕಿತ್ತಳೆ ಹಣ್ಣಿನಲ್ಲಿ ಕಂಡು ಬರುತ್ತವೆ.

ಇದನ್ನು ತಿನ್ನುವುದರಿಂದ ಅನೇಕ ರೋಗಗಳ ಅಪಾಯ ದೂರವಾಗುತ್ತದೆ. ಕಿತ್ತಳೆ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ, ಆದರೆ ಅದನ್ನು ತಿಂದ ನಂತರ ಕೆಲವು ವಿಷಯಗಳನ್ನು ಕಾಳಜಿ ವಹಿಸುವುದು ಮುಖ್ಯ, ಇಲ್ಲದಿದ್ದರೆ ಅದು ನಿಮಗೆ ಭಾರವಾಗಿರುತ್ತದೆ. ಕಿತ್ತಳೆ ಹಣ್ಣಿನ ನಂತರ ಯಾವ ಪದಾರ್ಥಗಳನ್ನು ಸೇವಿಸಬಾರದು ಮತ್ತು ಅದು ಯಾವ ರೋಗಗಳಿಗೆ ಕಾರಣವಾಗಬಹುದು.

ಕಿತ್ತಳೆ ನಂತರ ಹಾಲು ಕಿತ್ತಳೆ ತಿಂದ ನಂತರ ಹಾಲು ಸೇವಿಸಬಾರದು. ಕಿತ್ತಳೆ ತಿಂದ ನಂತರ ಹಾಲು ಕುಡಿದರೆ ಜೀರ್ಣಕ್ರಿಯೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಇದು



ಅಜೀರ್ಣ ಮತ್ತು ಮಲಬದ್ಧತೆಯಂತಹ ಸಮಸ್ಯೆಗಳನ್ನು ಉಂಟುಮಾಡಬಹುದು. ಈ ಕಾರಣದಿಂದಾಗಿ, ಚರ್ಮದ ಸಮಸ್ಯೆಗಳು ಸಹ ಸಂಭವಿಸಬಹುದು.

ಕಿತ್ತಳೆ ನಂತರ ಪಾನ್ ಅನೇಕ ಜನರು ಜ್ಯೂಸ್ ಕುಡಿದ ನಂತರ ಪಾನ್ ಸೇವಿಸುತ್ತಾರೆ. ಆದರೆ ನೀವು ಕಿತ್ತಳೆ ರಸವನ್ನು ಕುಡಿದಿದ್ದರೆ, ನೀವು ಪಾನ್ ತಿನ್ನುವುದನ್ನು ತಪ್ಪಿಸಬೇಕು. ಕಿತ್ತಳೆ ನಂತರ ವೀಳ್ಯದೆಲೆಯನ್ನು ತಿನ್ನುವುದರಿಂದ ಶ್ವಾಸಕೋಶಕ್ಕೆ ಹಾನಿಯಾಗುತ್ತದೆ. ಇದು ಎದೆಯಲ್ಲಿ ಬಿಗಿತಕ್ಕೆ ಕಾರಣವಾಗಬಹುದು.


ಕಿತ್ತಳೆ ನಂತರ ಕ್ಯಾರೆಟ್ ತಿನ್ನಬೇಡಿ ಅಂದಹಾಗೆ, ಹೆಚ್ಚಿನ ಜನರು ಕಿತ್ತಳೆ ಮತ್ತು ಕ್ಯಾರೆಟ್ ಜ್ಯೂಸ್ ಅನ್ನು ಬೆರೆಸಿ ಕುಡಿಯಲು ಇಷ್ಟಪಡುತ್ತಾರೆ. ಆದರೆ ನೀವು ಈ ಸಂಯೋಜನೆಯನ್ನು ತಪ್ಪಿಸಬೇಕು. ಇದು ನಿಮಗೆ ಹಾನಿಕಾರಕವಾಗಬಹುದು. ಈ ಎರಡನ್ನು ಒಟ್ಟಿಗೆ ತೆಗೆದುಕೊಳ್ಳುವುದರಿಂದ ಹೆಚ್ಚುವರಿ ಪಿತ್ತಾಕ್ಕೆ ಕಾರಣವಾಗಬಹುದು. ಇದು ಎದೆಯುರಿ ಉಂಟುಮಾಡಬಹುದು.

ಊಟ ಮಾಡಿದ ನಂತರವೂ ಕಿತ್ತಳೆ ತಿನ್ನಬೇಡಿ ಆಹಾರ ಸೇವಿಸಿದ ನಂತರವೂ ಕಿತ್ತಳೆ ಸೇವಿಸಬಾರದು. ಇದರಿಂದ ಅಸಿಡಿಟಿ, ಎದೆಯುರಿ ಉಂಟಾಗುತ್ತದೆ.

ಕಿತ್ತಳೆಯನ್ನು ತಿಂದ ನಂತರ ಬೇರೆ ಯಾವುದೇ ಆಹಾರವನ್ನು ತಿನ್ನುವ ಮೊದಲು ನೀವು ಒಂದು ಗಂಟೆ ಕಾಯಬೇಕು. ಅಂ–ದರೆ ಕಿತ್ತಳೆ ಹಣ್ಣನ್ನು ತಿಂದ ನಂತರ ಒಂದು ಗಂಟೆಯವರೆಗೆ ಏನನ್ನೂ ತಿನ್ನಬಾರದು.

# ಚುರುಕು ಬುದ್ಧಿಗಾಗಿ ಈ ಆಹಾರ ಸೇವನೆ ಮಾಡಿ

ಮೆದುಳು ಚುರುಕಾಗೋ–ಕೆ ಹೊರಗಿನಿಂದ ಮಾಡುವ ಚಟುವಟಿಕೆಗಳು ಎಷ್ಟು ಮುಖ್ಯವೋ ಹಾಗೆ ಒಳಗೆ ತೆಗೆದುಕೊಳ್ಳುವ ಆಹಾರ ಕೂಡ ಅಷ್ಟೇ ಮುಖ್ಯ. ಉತ್ತಮ ಮೆದುಳಿಗಾಗಿ ಈ ಆಹಾರ ಸೇವನೆ ಮಾಡಿ.




# ಥೈರಾಯ್ಡ್ ಸಮಸ್ಯೆ ಇದೆಯಾ? ಕುಂಬಳಕಾಯಿ ಬೀಜವನ್ನು ಮಿಸ್ ಮಾಡ್ದೇ ಈ ರೀತಿ ತಿನ್ನಿ

ಥೈರಾಯ್ಡ್ ಗಂಭೀರ ಕಾಯಿಲೆಯಾಗಿದೆ. ಇದು ನಮ್ಮ ದೇಹದ ಪ್ರಮುಖ ಗ್ರಂಥಿ. ಇದು ಗಂಟಲಿನಲ್ಲಿ ಇರುತ್ತದೆ. ಥೈರಾಯ್ಡ್ ಗ್ರಂಥಿಯು ಟಿ3 ಮತ್ತು ಟಿ4 ಹಾರ್ಮೋನುಗಳನ್ನು ಸ್ರವಿಸುತ್ತದೆ. ಈ ಹಾರ್ಮೋನುಗಳು ದೇಹದ ಅನೇಕ ಕಾರ್ಯಗಳಲ್ಲಿ ಪ್ರಮುಖ ಪಾತ್ರವಹಿಸುತ್ತವೆ.

ಐಯೋಡಿನ್ ಕೊರತೆಯು ಥೈರಾಯ್ಡ್ ಕಾಯಿಲೆಗೆ ಮುಖ್ಯ ಕಾರಣವಾಗಿದೆ. ಈ ಥೈರಾಯ್ಡ್ ಗ್ರಂಥಿಯ ಗಾತ್ರವು ಹೆಚ್ಚಾದರೆ, ದೇಹದ ಕಾರ್ಯಗಳ ಮೇಲೆ ಪರಿಣಾಮವು ಗೋಚರಿಸುತ್ತದೆ. ಥೈರಾಯ್ಡ್ ನಿಂದಾಗಿ ದೇಹದ ತೂಕ ಕಡಿಮೆಯಾಗುತ್ತದೆ ಅಥವಾ ಹೆಚ್ಚುತ್ತದೆ. ಥೈರಾಯ್ಡ್ ಇದ್ದಾಗ ಗಂಟಲಿನಲ್ಲಿ ಊತ ಮತ್ತು ಅನಿಯಮಿತ ಹೃದಯ ಬಡಿತದಂತಹ ಲಕ್ಷಣಗಳು ಕಂಡುಬರುತ್ತವೆ. ಕೆಲವು ಮನೆಮದ್ದುಗಳು ಥೈರಾಯ್ಡ್ ಕಾಯಿಲೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಶುಂಠಿ: ಶುಂಠಿಯಲ್ಲಿರುವ ಉರಿಯೂತದ ಗುಣಲಕ್ಷಣಗಳು ಊತ ಮತ್ತು ನೋವನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದರಲ್ಲಿ ಪೊಟ್ಯಾಸಿಯಮ್ ಮತ್ತು ಮೆಗ್ನೀಸಿಯಮ್ ಸಮೃದ್ಧವಾಗಿದೆ, ಇದು ಥೈರಾಯ್ಡ್ ಗ್ರಂಥಿಯನ್ನು ನಿಯಂತ್ರಿಸಲು ಸಹಾಯ





ಮಾಡುತ್ತದೆ. ನೀವು ಥೈರಾಯ್ಡ್ ಹೊಂದಿರುವಾಗ ಶುಂಠಿ ತಿನ್ನುವುದು ಪ್ರಯೋಜನಕಾರಿಯಾಗಿದೆ.

ಕುಂಬಳಕಾಯಿ: ಮಧುಮೇಹದಲ್ಲಿ ಕುಂಬಳಕಾಯಿ ಬೀಜಗಳ ಸೇವನೆಯು ಪ್ರಯೋಜನಕಾರಿಯಾಗಿದೆ. ಕುಂಬಳಕಾಯಿಯಲ್ಲಿರುವ ಸತುವು ಥೈರಾಯ್ಡ್ ಹಾರ್ಮೋನುಗಳನ್ನು ಸಮತೋಲನಗೊಳಿಸಲು ಸಹಾಯ ಮಾಡುತ್ತದೆ. ನಿಮಗೆ ಥೈರಾಯ್ಡ್ ಕಾಯಿಲೆ ಇದ್ದರೆ, ಕುಂಬಳಕಾಯಿ ಬೀಜಗಳನ್ನು ನಿಮ್ಮ ಆಹಾರದ ಭಾಗವಾಗಿ ಮಾಡಿ.

ಬಾದಾಮಿ: ಬಾದಾಮಿ ತಿನ್ನುವುದು ಥೈರಾಯ್ಡ್‌ಗೆ ತುಂಬಾ ಪ್ರಯೋಜನಕಾರಿ ಎಂದು ಪರಿಗಣಿಸಲಾಗಿದೆ. ಇದರಲ್ಲಿರುವ ಮೆಗ್ನೀಸಿಯಮ್ ಥೈರಾಯ್ಡ್ ಗ್ರಂಥಿಯನ್ನು ಸಕ್ರಿಯಗೊಳಿಸಲು ಕೆಲಸ ಮಾಡುತ್ತದೆ. ಬಾದಾಮಿಯನ್ನು ಹೊರತುಪಡಿಸಿ, ಅನೇಕ ಒಣ ಹಣ್ಣುಗಳನ್ನು ಥೈರಾಯ್ಡ್‌ಗೆ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಅವು ಜೀವಸತ್ವಗಳು, ಪ್ರೋಟೀನ್‌ಗಳು, ಉತ್ಕರ್ಷಣ ನಿರೋಧಕಗಳು, ಕಾರ್ಬೋಹೈಡ್ರೇಟ್‌ಗಳು ಮತ್ತು ಖನಿಜಗಳಂತಹ ಪೋಷಕಾಂಶಗಳಲ್ಲಿ ಸಮೃದ್ಧವಾಗಿವೆ.

ನೆಲ್ಲಿಕಾಯಿ: ಆಮ್ಲಾ ವಿಟಮಿನ್ ಸಿ ಯಲ್ಲಿ ಸಮೃದ್ಧವಾಗಿದೆ. ಇದು ಥೈರಾಯ್ಡ್ ನಿಯಂತ್ರಣದಲ್ಲಿ ಸಹಾಯ ಮಾಡುತ್ತದೆ. ನೆಲ್ಲಿಕಾಯಿ ತಿಂದರೆ ಈ ರೋಗ ಬರದಂತೆ ತಡೆಯಬಹುದು. ನೀವು ಥೈರಾಯ್ಡ್ ಹೊಂದಿದ್ದರೆ, ನಿಮ್ಮ ಆಹಾರದಲ್ಲಿ ನೆಲ್ಲಿಕಾಯಿ ರಸ ಅಥವಾ ಕ್ಯಾಂಡಿಯಂತಹವುಗಳನ್ನು ಸೇರಿಸಿಕೊಳ್ಳಬಹುದು.

ಈ ಮಾಹಿತಿಯ ನಿಖರತೆ, ಸಮಯೋಚಿತತೆ ಮತ್ತು ನೈಜತೆಯನ್ನು ಖಚಿತಪಡಿಸಿಕೊಳ್ಳಲು ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡಲಾಗಿದೆ. ಅದರ ನೈತಿಕ ಹೊಣೆಗಾರಿಕೆ ನದ್ದಲ್ಲ. ಯಾವುದೇ ಪರಿಹಾರವನ್ನು ಪ್ರಯತ್ನಿಸುವ ಮೊದಲು ನಿಮ್ಮ


# ಪ್ರತಿಯೊಬ್ಬರೂ ತಪ್ಪದೆ ಸೇವಿಸಿ ಈ ತರಕಾರಿ

ಹಲವರಿಗೆ ಕೆಲ ತರಕಾರಿ ಅಂ–ದರೆ ಅದೇನೋ ಅಸಡ್ಡೆ. ಅದು ಬೇಡ, ಇದನ್ನು ತಿನ್ನಲ್ಲ, ಈ ತರಕಾರಿ ಇಷ್ಟ ಇಲ್ಲ ಅಂತ ಹೇಳುವವರು ಈ ಲಿಸ್ಟ್ ನಲ್ಲಿರುವ ತರಕಾರಿಗಳನ್ನು ಸೇವಿಸಬೇಕು. ಯಾಕೆ ಗೊತ್ತಾ.ಹಸಿರು ಬಟಾಣಿ

ಇದರಲ್ಲಿ ಪೊಟಾಶಿಯಂ, ಕಬ್ಬಿಣಾಂಶ ಮತ್ತು ವಿಟಮಿನ್‌ಗಳು ಯಥೇಚ್ಛವಾಗಿದ್ದು, ಜೀರ್ಣಾಂಗ ವ್ಯವಸ್ಥೆಯನ್ನು ಶುದ್ಧಗೊಳಿಸಲು ನೆರವು ಮಾಡುತ್ತವೆ.

ಬೀನ್ಸ್: ಇದರಲ್ಲಿ ವಿಟಮಿನ್ ಬಿ ಹಾಗೂ ಬೀಟಾ–ಕೆರೊಟಿನ್ ಅಧಿಕ ಪ್ರಮಾಣದಲ್ಲಿರುತ್ತದೆ.

ಪಾಲಕ್ ಸೊಪ್ಪು: ಈ ಸೊಪ್ಪಿನಲ್ಲಿ ಪೊಟಾಶಿಯಂ, ಸತು, ವಿಟಮಿನ್ ಕೆ, ಇ, ಮತ್ತು ಎ ಅಧಿಕ ಪ್ರಮಾಣದಲ್ಲಿರುತ್ತವೆ. ಇವುಗಳು ಕ್ಯಾನ್ಸರನ್ನು ನಿಯಂತ್ರಿಸಲು ಸ್ವಾಭಾವಿಕವಾಗಿ ನೆರವಾಗುತ್ತವೆ.



ಬೀಟ್‌ರೂಟ್: ರಕ್ತ ಪರಿಚಲನೆ ಮತ್ತು ರಕ್ತದಲ್ಲಿ ಸಕ್ಕರೆಯ ಪ್ರಮಾಣವನ್ನು ಸುಸ್ಥಿತಿಯಲ್ಲಿಡಲು ನೆರವಾಗುತ್ತವೆ.

ಎಲೆಕೋಸು: ಎಲೆಕೋಸಿನಲ್ಲಿರುವ ಶಕ್ತಿಶಾಲಿ ಆಯಂಟಿಆಕ್ಸಿಡೆಂಟ್‌ಗಳು ಕ್ಯಾನ್ಸರ್ ಕೋಶಗಳ ಬೆಳವಣಿಗೆಗೆ ಕಾರಣವಾಗುವಂತಹ ಫ್ರೀ ರಾಡಿಕಲ್‌ಗಳನ್ನು ನಿವಾರಣೆ ಮಾಡುತ್ತದೆ. ಇದರಲ್ಲಿರುವ ನಾರಿನಂಶ ಜೀರ್ಣಕ್ರಿಯೆ ಸಮಸ್ಯೆಯನ್ನು ನಿವಾರಿಸುತ್ತದೆ.

ಈರುಳ್ಳಿ ಮತ್ತು ಬೆಳ್ಳುಳ್ಳಿ: ಇದರಲ್ಲಿ ಕ್ಯಾನ್ಸರ್ ತಡೆಯುವ ನೈಸರ್ಗಿಕ ರಾಸಾಯನಿಕ ಗುಣಗಳು ಇವೆ. ಈರುಳ್ಳಿ ಮತ್ತು ಬೆಳ್ಳುಳ್ಳಿಯಲ್ಲಿರುವ ಅಂಶಗಳು ಕರುಳು ಕ್ಯಾನ್ಸರ್, ಹೊಟ್ಟೆ, ಕಿಡ್ನಿ , ಅನ್ನನಾಳ, ಬಾಯಿ, ಗರ್ಭಕೋಶ, ಯಕೃತ್ ಕ್ಯಾನ್ಸರ್ ಹಾಗೂ ಸ್ತನ ಕ್ಯಾನ್ಸರ್ ಅನ್ನು ತಡೆಯುತ್ತದೆ.

# ಬಂಜೆತನಕ್ಕೆ ಕಾರಣವಾಗುವ ಈ 'ಪಾನೀಯ' ಸೇವಿಸದಿರುವುದೇ ಒಳಿತು

ನಗರದ ಜೀವನ ಶೈಲಿ ಮತ್ತು ಅಧಿಕ ಒತ್ತಡ ಬಂಜೆತನಕ್ಕೆ ಮೂಲ ಕಾರಣ. ಕೇವಲ ಇದ–ರಿಂದ ಮಾತ್ರ ಸಮಸ್ಯೆಗಳು ಉದ್ಭವಿಸುವುದಿಲ್ಲ. ಕೃತಕ ಸೋಡಾ ಪಾನೀಯದಿಂದ್ಲೂ ನಪುಂಸಕತೆ ಉಂಟಾಗಬಹುದು ಅನ್ನೋ ಆಘಾತಕಾರಿ ಮಾಹಿತಿಯೊಂದು ವೈದ್ಯಲೋಕದಿಂದ ಹೊರಬಿದ್ದಿದೆ.

ಕೃತಕ ಸೋಡಾ ಡ್ರಿಂಕ್ಸ್ ನಲ್ಲಿ ಸಿಹಿಗಾಗಿ ಸ್ಪಾರ್ಟಮೆ ಎಂಬ ವಸ್ತುವನ್ನು ಬಳಸಲಾಗುತ್ತದೆ.

ಅದು ಮನುಷ್ಯನ ಎಂಡೋಕ್ರೇನ್ ವ್ಯವಸ್ಥೆ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ.

ಇದರಿಂದ ಹಾರ್ಮೋನ್ ವ್ಯವಸ್ಥೆ ಏರುಪೇರಾಗುತ್ತದೆ, ಮಹಿಳೆಯರಲ್ಲಿ ಬಂಜೆತನ ಕಾಣಿಸಿಕೊಳ್ಳಬಹುದು.



ಬಹುತೇಕ ಎಲ್ಲ ಸೋಡಾ ಮತ್ತು ತಂಪು ಪಾನೀಯಗಳಲ್ಲಿ ಸ್ಪಾರ್ಟಮೆ ಎಂಬ ವಸ್ತುವನ್ನು ಬಳಸಲಾಗುತ್ತದೆಯಂತೆ.

ಅದರಿಂದ ಬಂಜೆತನ ಮತ್ತು ಗರ್ಭಪಾತದಂತಹ ಹಲವು ಸಮಸ್ಯೆಗಳು ಉದ್ಭವಿಸುತ್ತವೆ. ಇವುಗಳ ಅತಿಯಾದ ಸೇವನೆಯಿಂದ ವೃಷಣಕ್ಕೆ ಸಂಬಂಧಪಟ್ಟ ಖಾಯಿಲೆಗಳು ಕೂಡ ಆವರಿಸಿಕೊಳ್ಳಬಹುದು.

ಸ್ಪಾರ್ಟಮೆಯಲ್ಲಿರುವ ಫೆನಿಲಯೇಲಾನಿನ್ ಹಾಗೂ ಅಸ್ಪಾರ್ಟಿಕ್ ಎರಡೂ ಅಮಿನೋ ಆಮ್ಲಗಳು. ಇತರ ಆಮ್ಲಗಳೊಡನೆ ಬೆರೆಸದೇ ಇವನ್ನು ಸೇವನೆ ಮಾಡಿದಲ್ಲಿ ಫ್ರೀ ರಾಡಿಕಲ್ ಗಳ ಉತ್ಪಾದನೆ ಅತ್ಯಂತ ವೇಗವಾಗಿ ಆಗುತ್ತದೆ. ಇದ–ರಿಂದ ಜೀವಕೋಶಗಳು ಸಾಯಲು ಆರಂಬಿಸುತ್ತವೆ. ವೀರ್ಯ ಮತ್ತು ಅಂಡಾಣು ಜೀವಕೋಶಗಳು. ಕೃತಕ ಪೇಯಗಳ ಸೇವನೆಯಿಂದ ಇವು ಕೂಡ ಸಾಯುವ ಸಾಧ್ಯತೆಗಳು ಹೆಚ್ಚಾಗುತ್ತವೆ.

ಅಷ್ಟೇ ಅಲ್ಲ ಕೃತಕ ಸಿಹಿ ಅಥವಾ ಇನ್ಯಾವುದೇ ಕೃತಕ ವಸ್ತುಗಳಿಂದ ತಯಾರಾದ ತಿನಿಸುಗಳು ನಮ್ಮ ದೇಹದಲ್ಲಿರುವ ರೋಗ ನಿರೋಧಕ ಶಕ್ತಿಯನ್ನು ಕೂಡ ಕುಗ್ಗಿಸುತ್ತವೆ. ಇದರಿಂದ ತೂಕ ಹೆಚ್ಚಾಗುತ್ತದೆ, ಹಾರ್ಮೋನುಗಳಲ್ಲಿ ಏರುಪೇರು ಉಂಟಾಗುತ್ತದೆ. ಇವೆರಡೂ ಬಂಜೆತನಕ್ಕೆ ಪ್ರಮುಖ ಕಾರಣಗಳು.




## ಮುಕ್ತಾಯವೆಂಬುದು ಮುಕ್ತಾಯವಲ್ಲ

# ಹೊಸದೊಂದು ಹೊಸತನದ ಆರಂಭ

ಹೊಸ ವರ್ಷ ಅಂದ್ರೆ ಎಲ್ಲೆಲ್ಲೂ ಸಂತೋಷ ಸಂಭ್ರಮ. ಮಧ್ಯರಾತ್ರಿ ಹನ್ನೆರಡು ಗಂಟೆಯಾದರೆ ಜೋರು ಜೋರು ಪಟಾಕಿ ಸದ್ದು, ಕೇಕ್ ಕತ್ತರಿಸಿ ಸಿಹಿ ತಿಂದು ಹೊಸ ಉತ್ಸಾಹದಿಂದ ಹೊಸ ವರ್ಷವನ್ನು ಸ್ವಾಗತಿಸುವ ದಿನ. ಮೋಜು ಮಸ್ತಿಯಲ್ಲಿ ತೇಲಾಡುವಂತಹ ಕ್ಷಣ. ಜಾಲತಾಣಗಳಲ್ಲೆಲ್ಲಾ ಸಂದೇಶಗಳ ಸುರಿಮಳೆ ಫೋಟೋಗಳ ಕಲರವ. ಹಾಗಿದ್ದಲ್ಲಿ ಮೋಜು ಮಸ್ತಿ ಮಾತ್ರ ಹೊಸ ವರ್ಷನಾ? ಅಥವಾ ಹಬ್ಬದಂತೆ ಆಚರಿಸಿ ಮತ್ತೆ ಯಥಾವತ್ತಾಗಿ ದಿನಗಳನ್ನಾ ಕಳೆಯುವುದ ಖಂಡಿತವಾಗಿಯೂ ಇಲ್ಲ.. ಕೆಲವೊಂದಿಷ್ಟು ಹೊಸ ಆಲೋಚನೆ, ಕನಸುಗಳ ಜೊತೆ ಹೊಸ ಭರವಸೆಯೊಂದಿಗೆ ಮುನ್ನುಗ್ಗುವುದು. ತಪ್ಪುಗಳನ್ನು ತಿದ್ದಿಕೊಳ್ಳಲು ಆ ದೇವರು ಕೊಟ್ಟಂತಹ ಮತ್ತೊಂದು ಅವಕಾಶ.

ಪಾಶ್ಚಿಮಾತ್ಯ ನಾಗರಿಕತೆಯ ಪ್ರಭಾವದಿಂದಾಗಿ ಕೆಲವರು ಜನೆವರಿ 1 ರಂದು ಹೊಸ ವರ್ಷವನ್ನಾಗಿ ಆಚರಿಸಿದರೆ ಇನ್ನೂ ಕೆಲವೊಂದಿಷ್ಟು ಜನ ಅವರವರ ಧರ್ಮಗಳ ಅನುಗುಣವಾಗಿ ವಿವಿಧ ದಿನಗಳನ್ನು ಹೊಸ ವರ್ಷವೆಂದು ಆಚರಿಸುತ್ತಾರೆ. ಜೀವನವನ್ನ ಹೊಸ ಹುರುಪಿನೊಂದಿಗೆ ಹೊಸ ಹರುಷದೊಂದಿಗೆ ನಡೆಸಲು ದಿನ ಯಾವುದಾದರೇನಂತೆ ಅಲ್ವಾ.ವರ್ಷ ಬದಲಾಗಿದೆ ನಿಜ, ಆದರೆ ಸಿಕ್ಕಿರುವ ಮತ್ತೊಂದು ವರ್ಷವನ್ನು ಒಳ್ಳೆಯ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳುವುದು ನಮ್ಮನಮ್ಮ ವಿವೇಚನೆಗೆ ಬಿಟ್ಟಿದ್ದು.

ಸಮಯ ಅದೆಷ್ಟು ಬೇಗ ಕಳೆದು ಹೋಗುತ್ತೆ ಅಲ್ವಾ? ಯಾವತ್ತೂ ಯಾರಿಗೂ ಕಾಯದ ಸಮಯ ಎಲ್ಲವನ್ನೂ ಬದಲಾಯಿಸಿ ಬಿಡುತ್ತದೆ.ಈ ವರ್ಷದ ಕ್ಯಾಲೆಂಡರ್ ಕೂಡ ಬದಲಾಗಿಯೇ ಬಿಡ್ತು.ಒಂದೆಡೆ ಹೊಸ ವರ್ಷ ಬಂತೆಂಬ ಸಂತೋಷ,ಹೊಸ ಉತ್ಸಾಹ ತಂತೆಂಬ ಸಂಭ್ರಮ. ಇನ್ನೊಂದೆಡೆ ಕಂಡ ಕನಸುಗಳು ನನಸಾಗದೆ? ಮೂಲೆ ಗುಂಪಾಗಿವೆ ಎನ್ನುವ ನೋವು.ಹಿಗ್ಗುವುದ ಕುಗ್ಗುವುದ ಎಂಬುದೊಂದು ಗೊಂದಲ. ಕಳೆದ ವರ್ಷದ ಜೀವನವೆಂಬ ಪುಸ್ತಕದ ಒಂದೊಂದೇ ಪುಟಗಳನ್ನ ನೋಡುತ್ತಾ ಹೋದಾಗ ಮನಸ್ಸಿಗೆ ಹತ್ತಿರವಾಗಿ ದೂರಾದ ಸಂಬಂಧಗಳೆಷ್ಟೋ, ಬದಲಾದ ವ್ಯಕ್ತಿತ್ವಗಳೆಷ್ಟೋ, ಬದಲಾಗದೆ ಬಿಗಿಯಾದ ಬಂಧಗಳೆಷ್ಟೋ, ನಕ್ಕ ಕ್ಷಣಗಳೆಷ್ಟೋ, ಮಂಕಾಗಿ ಕೂತ ದಿನಗಳೆಷ್ಟೋ, ಅತ್ತು ಮಲಗಿದ ರಾತ್ರಿಗಳೆಷ್ಟೋ, ನಿದ್ದೆಗೆಡಿಸಿದ ಕನಸುಗಳೆಷ್ಟೋ, ಮರೆತ ನೋವುಗಳೆಷ್ಟೋ, ಕಲಿತ ಪಾಠಗಕಳೆಷ್ಟೋ..

ಬದಲಾಗಿರುವುದು ವರ್ಷವಷ್ಟೆ . ಕಾಲ ಬದಲಾಗುತ್ತಲೇ ಇರುತ್ತದೆ. ಆದರೆ ಕಾಲಕಾಲಕ್ಕೆ ನಮ್ಮಲ್ಲಿ ಸಕಾರಾತ್ಮಕ ಬದಲಾವಣೆ ಯಾವ ರೀತಿಯಾಗಿ ಆಗಿದೆ ಎಂಬುದನ್ನು ನಾವು ಗಮನಿಸಬೇಕಾಗುತ್ತದೆ.


ರೋಹಿಣಿ. ಸಿ. ಬೀರಾದರ್. ನಿಂಬೂರ್. ತಾ. ಹುಮನಾಬಾದ್ ಜಿ. ಬೀದರ್

ಇಟ್ಟ ಗುರಿಯನ್ನು ಮುಟ್ಟಿದ್ದೀವಾ? ಅಥವಾ ಅದನ್ನು ತಲುಪಲು ನಾವು ಮಾಡುತ್ತಿರುವ ಪ್ರಯತ್ನಗಳು ಸಾಕ? ತಂದೆ ತಾಯಿ ನಮ್ಮ ಮೇಲಿಟ್ಟಿರುವ ನಂಬಿಕೆಯನ್ನ ನಾವು ಎಷ್ಟರ ಮಟ್ಟಿಗೆ ಉಳಿಸಿಕೊಳ್ಳುತ್ತಿದ್ದೇವೆ ಎಂಬುದನ್ನೆಲ್ಲಾ ತಲೆಯಲ್ಲಿಟ್ಟುಕೊಂಡು ಮುಂದಿನ ಹೆಜ್ಜೆಯನ್ನಿಡಬೇಕಾಗುತ್ತದೆ. ಕಳೆದ ವರ್ಷ ನಮ್ಮಿಂದಾದ ತಪ್ಪುಗಳೇನು? ಈ ವರ್ಷ ಆ ತಪ್ಪಾಗದಂತೆ ನಡೆದುಕೊಳ್ಳುವುದು ಹೇಗೆ ಎಂಬುದನ್ನು ಮನವರಿಕೆ ಮಾಡಿಕೊಳ್ಳುವುದು ಅತ್ಯವಶ್ಯ..

ಕಳೆದು ಹೋದ ಸಮಯ ಮತ್ತೆ ಬಾರದು. ಇರುವ ಈ ಸಮಯವನ್ನು ನಾವು ಸದುಪಯೋಗ ಪಡಿಸಿಕೊಂಡಾಗ ಮಾತ್ರ ಅಂದುಕೊಂಡದ್ದನ್ನು ಸಾಧಿಸಲು ಸಾಧ್ಯವಾಗುತ್ತದೆ. ಎದುರಾದ ಕಷ್ಟಗಳು, ಅನುಭವಿಸಿದ ನೋವುಗಳು ,ಅವಮಾನಗಳು, ನಿಂದನೆಗಳು ಇವೆಲ್ಲವನ್ನೂ ಮರೆತುಬಿಡಿ.

ಆದರೆ ಅದರಿಂದ ಕಲಿತ ಪಾಠವನ್ನು ನಿಮ್ಮ ಸಾಧನೆಯ ಶಿಖರಕ್ಕೆ ಮೆಟ್ಟಿಲುಗಳಾಗಿಸಿಕೊಳ್ಳಿ. ಕಾಲೆಳೆದ ಜನಗಳ ಎದುರಲ್ಲೇ ಗೆದ್ದು ತೋರಿಸುವ ಛಲ ಈ ವರ್ಷ ನಮ್ಮೆಲ್ಲರಲ್ಲಿ ಹುಟ್ಟಬೇಕಾಗಿದೆ. ಆದರೆ ಎಲ್ಲವನ್ನೂ ಸಾಧಿಸುವ ಭರದಲ್ಲಿ ಅಮೂಲ್ಯವಾದ ಸಂಬಂಧಗಳನ್ನು ಕಳೆದುಕೊಳ್ಳದೆ ಸ್ನೇಹ ಪ್ರೀತಿ ಮಮತೆ ಕರುಣೆ ಇವೆಲ್ಲದರ ಜೊತೆಜೊತೆಗೆ ಇರುವಷ್ಟು ದಿನ ಸಂತೋಷದಿಂದ ಕಳೆಯೋಣ.

ಕಳೆದ ವರ್ಷಕ್ಕೆ ವಿದಾಯ ಹೇಳಿ ಹೊಸ ವರ್ಷವನ್ನು ವಿಜೃಂಭಣೆಯಿಂದ ಸ್ವಾಗತಿಸೋಣ. ಸಿಹಿಯ ಜೊತೆಗೆ ಪ್ರೀತಿಯನ್ನು ಹಂಚೋಣ. ಜಾತಿ ಬೇಧವನ್ನು ಮರೆತು ಎಲ್ಲರೊಳಗೊಂದಾಗಿ ಬಾಳೋಣ. ಹೊಸ ವರ್ಷಕ್ಕೆ ಹೊಸತನ್ನು ಕಲಿತು ಜೀವನವನ್ನ ಹಸನಾಗಿಸಿಕೊಳ್ಳೋಣ, ಗುರಿಯೆಡೆಗೆ ಮುಖಮಾಡಿ ಸಾಧನೆಯ ಶಿಖರವನ್ನು ತಲುಪೋಣ.

ಎಲ್ಲರಿಗೂ ಹೊಸ ವರ್ಷದ ಹಾರ್ದಿಕ ಶುಭಾಷಯಗಳು..

# ಸಂಭಾವ್ಯ ಸಾಲ ಯೋಜನೆ ಪಟ್ಟಿ ಬಿಡುಗಡೆ




ಬಳ್ಳಾರಿ: ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಸಮನ್ವಯ ಸಮಿತಿ ಸಭೆಯಲ್ಲಿ 2024-25ನೇ ಸಾಲಿನ ಸಂಭಾವ್ಯ ಸಾಲ ಯೋಜನೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಬಿಡುಗಡೆಗೊಳಿಸಿದರು.

ನಬಾರ್ಡ್ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ಆರ್.ಎಸ್.ಯುವರಾಜ ಕುಮಾರ್ ಮಾತನಾಡಿ, ಬೆಳೆ ಸಾಲಕ್ಕಾಗಿ 2551.58 ಕೋಟಿ ರೂ., ಕೃಷಿ ದೀರ್ಘಾವಧಿ ಸಾಲಕ್ಕೆ 1038.79 ಕೋಟಿ ರೂ., ಕೃಷಿ ಮೂಲಸೌಕರ್ಯಕ್ಕಾಗಿ 75.78 ಕೋಟಿ ರೂ., ಕೃಷಿ ಪೂರಕ ಚಟುವಟಿಕೆಗಳಿಗೆ 250.18 ಕೋಟಿ ರೂ., ಒಟ್ಟಾಗಿ ಕೃಷಿ ಕ್ಷೇತ್ರಕ್ಕೆ 3916.33 ಕೋಟಿ ರೂ., ನಷ್ಟು 2024-25 ವರ್ಷಕ್ಕೆ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಉದ್ಯಮಗಳಿಗೆ 2661.38 ಕೋಟಿ ರೂ., ರಫ್ತುಗೆ 25.60 ಕೋಟಿ ರೂ., ಶಿಕ್ಷಣಕ್ಕೆ 56.70 ಕೋಟಿ ರೂ., ವಸತಿ ಸೌಕರ್ಯಕ್ಕೆ 119.60 ಕೋಟಿ .. ನವೀಕರಿಸಬಹುದಾದ ಶಕ್ತಿಗೆ 3.04 ಕೋಟಿ ರೂ., ಮತ್ತು ಸಾಮಾಜಿಕ ಮೂಲಸೌಕರ್ಯಕ್ಕೆ 13.47 ಕೋಟಿ ರೂ., ಇತರೆ ಚಟುವಟಿಕೆಗಳಿಗೆ 95.70 ಕೋಟಿ ರೂ., ಯನ್ನು ನಿಗದಿಪಡಿಸಲಾಗಿದೆ. ಒಟ್ಟಾರೆ ಆದ್ಯತಾ ವಲಯಕ್ಕೆ 6891.82 ಕೋಟಿ ರೂ., ನಿಗದಿಪಡಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಆರ್ಬಿಐನ ಎಲ್ಡಿಒಎಂ. ಪಾಠಕ್, ಸೋಮನಗೌಡ ಐನಾಪುರ, ವಿವಿಧ ಬ್ಯಾಂಕ್ ಗಳ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಮುಂತಾದವರು ಭಾಗವಹಿಸಿದ್ದರು.

# ರಾತ್ರಿ ಪಾಳಿ ಚಾಲಕರಿಗೆ ಥರ್ಮೋ ಫ್ಲಾಸ್ಕ್ ನೀಡಲು ಕೆಎಸ್‌ಆರ್‌ಟಿಸಿ ನಿರ್ಧಾರ

ಬೆಂಗಳೂರು: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಪ್ರಯಾಣಿಕರ ಸುರಕ್ಷತೆಗಾಗಿ ಮತ್ತೊಂದು ಪರಿಣಾಮಕಾರಿ ಕ್ರಮಕ್ಕೆ ಮುಂದಾಗಿದ್ದು, ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುವ ಅಥವಾ ಚಾಲನೆ ಮಾಡುವ ಚಾಲಕರಿಗೆ ಉತ್ತಮ ಗುಣಮಟ್ಟದ 500 ಮಿಲಿಯ ಥರ್ಮೋ ಫ್ಲಾಸ್ಕ್ ನೀಡಲು ನಿಗಮ ಮುಂದಾಗಿದೆ.

ನಿಗಮದ 1,600 ಬಸ್‌ಗಳು ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತವೆ. ಇತ್ತೀಚೆಗೆ, ನಡೆಸಿದ ಅಧ್ಯಯನದ ಪ್ರಕಾರ ನಿಗಮದ ವಾಹನಗಳು ರಾತ್ರಿ ವೇಳೆ ಕಾರ್ಯಾಚರಣೆಯಲ್ಲಿದ್ದಾಗ ಬೆಳಗಿನ ಜಾವ 3 ರಿಂದ 4 ಗಂಟೆಯ ಸಮಯದಲ್ಲಿ ಹೆಚ್ಚು ಅಪಘಾತಕ್ಕೆ ಒಳಪಟ್ಟಿರುವುದು ತಿಳಿದುಬಂದಿದೆ.

ಈ ಹಿನ್ನೆಲೆ, ನಿಗಮದ ಪ್ರಯಾಣಿಕರು ಹಾಗೂ ಸಿಬ್ಬಂದಿ ಸುರಕ್ಷತೆಯು ಪ್ರಥಮ ಆದ್ಯತೆಯಾಗಿದ್ದು, ಆ ನಿಟ್ಟಿನಲ್ಲಿ ರಾತ್ರಿ ವೇಳೆ, ಬಸ್‌ಗಳ ಕಾರ್ಯಾಚರಣೆ ಸಮಯದಲ್ಲಿ ಚಾಲಕರು ಸುರಕ್ಷಿತವಾಗಿ ವಾಹನ ಚಾಲನೆ ಮಾಡುವ ಅವಶ್ಯಕತೆ ಇರುವುದರಿಂದ, ಅವರ ಕಾರ್ಯ ಕ್ಷಮತೆಯನ್ನು ಉತ್ತಮಪಡಿಸುವ ಸಲುವಾಗಿ ಆ ಅವಧಿಯಲ್ಲಿ ರಿಫ್ರೆಸ್ ಆಗಲು ಕಾಫಿ-ಟೀ ಸೇವಿಸಿ (ಆ ಸಮಯದಲ್ಲಿ ಮಾರ್ಗ ಮಧ್ಯದಲ್ಲಿ ಯಾವುದೇ ಹೋಟೆಲುಗಳ ಲಭ್ಯತೆಯು ಇರದ ಕಾರಣ) ವಾಹನವನ್ನು




ಸುರಕ್ಷಿತವಾಗಿ ಚಾಲನೆ ಮಾಡಲು ಚಾಲಕರಿಗೆ ಉತ್ತಮ ಗುಣಮಟ್ಟದ 500 ಮಿಲಿಯ ಥರ್ಮೋ ಫ್ಲಾಸ್ಕ್ ಅನ್ನು 1,600 ಬಸ್‌ಗಳಿಗೆ ಒದಗಿಸಲಾಗಿದೆ ಎಂದು ನಿಗಮ ತಿಳಿಸಿದೆ.

ಈ ಕ್ರಮದಿಂದಾಗಿ ನಿಗಮದ ಚಾಲಕರುಗಳು ರಾತ್ರಿ ವೇಳೆಯಲ್ಲಿ ವಾಹನಗಳು ನಿಲ್ಲಿಸಿದ ಹೋಟೆಲ್ ಇತ್ಯಾದಿ ಸ್ಥಳಗಳಿಂದ ಟೀ/ಕಾಫಿಯನ್ನು ಫ್ಲಾಸ್ಕ್‌ನಲ್ಲಿ ಸಂಗ್ರಹಿಸಿಕೊಂಡು, ಬೆಳಗಿನ ಜಾವದಲ್ಲಿ ಬಳಸಿ ಸುರಕ್ಷತೆಯಿಂದ ವಾಹನವನ್ನು ಚಾಲನೆ ಮಾಡಿ ಪ್ರಯಾಣಿಕರನ್ನು ಅವರವರ ಗಮ್ಯ ಸ್ಥಳಕ್ಕೆ ಸುರಕ್ಷಿತವಾಗಿ ತಲುಪಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದೆ.

## ಕನಕದುರ್ಗಮ್ಮ ದೇವಸ್ಥಾನದ ಹುಂಡಿ ಎಣಿಕೆ ಕಾರ್ಯ

# 63.49 ಲಕ್ಷ ರೂ. ಸಂಗ್ರಹ



ಬಳ್ಳಾರಿ: ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನದ ಹುಂಡಿ ಹಣ ಎಣಿಕೆ ಕಾರ್ಯ ಶುಕ್ರವಾರ ನಡೆಸಲಾಯಿತು.

2023 ಆ.16 ರಿಂದ ಡಿ.29 ರ ವರೆಗೆ ಅಳವಡಿಸಲಾಗಿದ್ದ ದೇವಸ್ಥಾನದ 4 ನಾಲ್ಕು ಹುಂಡಿಗಳ ಎಣಿಕೆ ಕಾರ್ಯ ದೇವಸ್ಥಾನದ ಪ್ರಾಂಗಣದಲ್ಲಿ ನಡೆಯಿತು. ಹುಂಡಿ ಎಣಿಕೆ ವೇಳೆ ರೂ.63,49,235 ಹಣ ಸಂಗ್ರಹವಾಗಿದೆ.

ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಸಹಾಯಕ ಆಯುಕ್ತರಾದ ಹೆಚ್. ಗಂಗಾಧರ, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ದೇವಸ್ಥಾನದ ಪ್ರಧಾನ ಧರ್ಮಕರ್ತರಾದ ಪಿ.ಎಂ.ರಾಜಶೇಖರ್, ಪಾರ್ವತಿ ನಗರದ ಕೆಜಿಬಿ ಬ್ಯಾಂಕ್ನ ವ್ಯವಸ್ಥಾಪಕರಾದ ರಾಮಲಿಂಗಪ್ಪ ಹಾಗೂ ಗಾಂಧಿನಗರ ಪೊಲೀಸ್ ಠಾಣೆಯ ಅರಕ್ಷಕ ಪ್ರವೀಣ್ ಕುಮಾರ್ ಅವರ ನೇತೃತ್ವದಲ್ಲಿ ಕನಕದುರ್ಗಮ್ಮ ದೇವಸ್ಥಾನದ ಹುಂಡಿ ಹಣ ಎಣಿಕೆ ಮಾಡಲಾಯಿತು.

# ಜನವರಿ 15 ರವರೆಗೆ ಮಾಲ್ ಆಫ್ ಏಷ್ಯಾ ಬಂದ್

ಬೆಂಗಳೂರು: ಯಲಹಂಕ ಹೋಬಳಿ ಬ್ಯಾಟರಾಯನಪುರದ (ಬಳ್ಳಾರಿ ರಸ್ತೆ) ಮಾಲ್ ಆಫ್ ಏಷ್ಯಾವನ್ನು ಜನವರಿ 15ರವರೆಗೆ ಬಂದ್ ಮಾಡುವಂತೆ ನಗರ ಪೊಲೀಸ್ ಆಯುಕ್ತರು ಆದೇಶಿಸಿದ್ದಾರೆ.

ಇತ್ತೀಚೆಗಷ್ಟೇ ನಾಮಫಲಕದಲ್ಲಿ ಶೇ 60ರಷ್ಟು ಕನ್ನಡ ಅಕ್ಷರ ಬಳಸದ ಆರೋಪದ ಮೇಲೆ ಫೋನಿಕ್ಸ್ ಮಾಲ್ ಆಫ್ ಏಷ್ಯಾ ವಿರುದ್ಧ ಕರವೇ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದರು. ಮಾಲ್‌ಗೆ ನುಗ್ಗಿ ಗಲಾಟೆ ನಡೆಸಲಾಗಿತ್ತು.

ಘಟನೆ ಬೆನ್ನಲ್ಲೇ ಸಾರ್ವಜನಿಕ ಶಾಂತಿ ಕಾಪಾಡುವುದು ಹಾಗೂ ಕಾನೂನು ಮತ್ತು ಸುವ್ಯವಸ್ಥೆ ನಿರ್ವಹಿಸುವ ದೃಷ್ಟಿಯಿಂದ ಮಾಲ್‌ನಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಈ ಆದೇಶ ಹೊರಡಿಸಿದ್ದಾರೆ.

ಈ ನಡುವ ಮಾಲ್ ನಿರ್ಮಾಣದಿಂದ ಸಂಚಾರಕ್ಕೆ ಅನಾನೂಕೂಲ ಆಗಿದೆ ಸಾರ್ವಜನಿಕರು ಪ್ರತಿಭಟನೆ ಸಹ ನಡೆಸಿದ್ದರು.

ಮಾಲ್ ಭಾಗದಲ್ಲಿ ಸುಗಮ ಸಂಚಾರಕ್ಕೆ ಅವಕಾಶ ಆಗುತ್ತಿಲ್ಲ. ವಿಮಾನ ನಿಲ್ದಾಣಕ್ಕೆ ಹೋಗುವ ವಾಹನಗಳು, ಅಂಬುಲೆನ್ಸ್ ಗಳ ಓಡಾಟಕ್ಕೂ ಕಷ್ಟ ಆಗಲಿದೆ ಎಂಬ



ದೂರುಗಳ ಮಾಲ್ ವಿರುದ್ಧ ದಾಖಲಾಗಿದ್ದವು. ಸಾಲು ಸಾಲು ದೂರುಗಳು ದಾಖಲಾದ ಹಿನ್ನೆಲೆ ಪೊಲೀಸ್ ಆಯುಕ್ತ ದಯಾನಂದ್ ಅವರೇ ಮಾಲ್ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.

ಈ ವೇಳೆ ಪಾರ್ಕಿಂಗ್ ಸೇರಿದಂತೆ ಕೆಲವು ನ್ಯೂನ್ಯತೆಗಳು ಕಂಡು ಬಂದಿದ್ದವು. ಈ ಹಿನ್ನೆಲೆಯಲ್ಲಿ ಮಾಲ್ ಆಫ್ ಏಷಿಯಾವನ್ನು ತಾತ್ಕಾಲಿಕವಾಗಿ ಬಂದ್ ಮಾಡಲು ಆದೇಶಿಸಿದ್ದಾರೆ.

ಮಾಲ್ ಆಫ್ ಏಷ್ಯಾಗೆ 16 ದಿನ ಸಾರ್ವಜನಿಕರ ನಿರ್ಬಂಧ ವಿಧಿಸಿ ಆಯುಕ್ತರು ಪ್ರತಿಬಂಧಕಾಜ್ಞೆ ವಿಧಿಸಿದ್ದಾರೆ. ಆದರೆ, ಮಾಲ್ ಸಿಬ್ಬಂದಿ ಹಾಗೂ ಮಳಿಗೆಗಳ ಸಿಬ್ಬಂದಿ ಕಾರ್ಯಚಟುವಟಿಕೆ ನಡೆಸಬಹುದು ಎಂದು ತಿಳಿಸಿದ್ದಾರೆ.


## ಮಾಡರ್ನ್ ಬಟ್ಟೆ ಧರಿಸುತ್ತಿದ್ದ ಪತ್ನಿ

# ಕೊಲೆ ಮಾಡಿ ಪರಾರಿಯಾದ ಪತಿ

ಹಾಸನ : ಪತಿಯೋರ್ವ ತನ್ನ ಪತ್ನಿ ತುಂಡುಡುಗೆ ಧರಿಸುತ್ತಾಳೆಂದು ಸಿಟ್ಟಿಗೆದ್ದು ಆಕೆಯ ಕತ್ತು ಸೀಳಿ ಹತ್ಯೆ ಮಾಡಿರುವ ಘಟನೆ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ರಾಂಪುರ ಗ್ರಾಮದಲ್ಲಿ ನಡೆದಿದೆ.

ಪತಿಯಿಂದ ಹತ್ಯೆಗೊಳಗಾದ ದುರ್ದೈವಿಯನ್ನು ಜ್ಯೋತಿ (22) ಎಂದು ಗುರುತಿಸಲಾಗಿದೆ. ಜ್ಯೋತಿಯ ಪತಿ ಕೊಲೆ ಆರೋಪಿಯಾದ ಜೀವನ ತಲೆಮಾರಿಸಿಕೊಂಡಿದ್ದಾನೆ.

ಜೀವನ ಧಾರವಾಡ ಮೂಲದ ಜ್ಯೋತಿಯನ್ನು ಪ್ರೀತಿಸಿ ವರ್ಷದ ಹಿಂದಷ್ಟೇ ಮದುವೆಯಾಗಿದ್ದರು ಎಂದು ತಿಳಿದು ಬಂದಿದೆ. ಅರಸೀಕೆರೆ



ತಾಲೂಕಿನ ರಾಂಪುರ ಗ್ರಾಮದ ಮನೆಯೊಂದರಲ್ಲಿ ದಂಪತಿಗಳು ವಾಸವಾಗಿದ್ದರು. ಪತ್ನಿ ಜ್ಯೋತಿ ತುಂಡು ಬಟ್ಟೆ ಧರಿಸುವುದು ಸೇರಿ ಮಾಡರ್ನ್ ಉಡುಪು ಧರಿಸುವುದನ್ನು ಜ್ಯೋತಿಯ ಪತಿ ಜೀವನ ವಿರೋಧಿಸುತ್ತಿದ್ದ. ಈ ಹಿನ್ನಲೆಯಲ್ಲಿ ಬಟ್ಟೆ ವಿಚಾರವಾಗಿ ದಂಪತಿಗಳ ನಡುವೆ ಆಗಾಗ ಜಗಳವಾಗುತ್ತಿತ್ತು.

ನಿನ್ನೆ ದಿ. 30 ರ ಶನಿವಾರ ಕೂಡ ಜ್ಯೋತಿ ಮಾಡರ್ನ್ ಬಟ್ಟೆ ಧರಿಸಿ ಹೊರಗೆ ಹೊರಟ್ಟಿದನ್ನು ಪತಿ ಜೀವನ ಗಮನಿಸಿದ್ದಾನೆ. ಪತ್ನಿಗೆ ಡ್ರಾಪ್ ಮಾಡುವುದಾಗಿ ಹೇಳಿ ಆಕೆಯನ್ನು ನಿರ್ಜನ ಪ್ರದೇಶಕ್ಕೆ ಕರೆದೊಯ್ದಿದ್ದು, ಬಳಿಕ ಚಾಕುವಿನಿಂದ ಜ್ಯೋತಿಯ ಕುತ್ತಿಗೆ ಸೀಳಿ ಬರ್ಬರವಾಗಿ ಕೊಲೆ ಮಾಡಿ ಎಸ್ಕೇಪ್ ಆಗಿದ್ದಾನೆ.

ಕೊಲೆಯ ವಿಚಾರ ತಿಳಿದು ಅರಸೀಕೆರೆ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿದ ಪರಶೀಲನೆ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ಆರೋಪಿಯ ಬಂಧನಕ್ಕೆ ಬಲೆ ಬೀಸಿದ್ದಾರೆ.


## ಕಾರ್ಖಾನೆಯಲ್ಲಿ ಬೆಂಕಿ ಅವಘಡ: ಮೃತರ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ಘೋಷಿಸಿದ ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ

ಮುಂಬೈ: ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಭಾನುವಾರ ಮುಂಜಾನೆ ಛತ್ರಪತಿ ಸಂಭಾಜಿನಗರದ ಕಾರ್ಖಾನೆಯೊಂದರಲ್ಲಿ ಬೆಂಕಿ ಕಾಣಿಸಿಕೊಂಡು ಸಾವಿಗೀಡಾದ ಆರು ಜನರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ.

ವಾಲುಜ್ ಕೈಗಾರಿಕಾ ಪ್ರದೇಶದಲ್ಲಿನ ಸನ್‌ಶೈನ್ ಎಂಟರ್‌ಪ್ರೈಸಸ್ ಘಟಕದಲ್ಲಿ ಮಧ್ಯರಾತ್ರಿ 1 ಗಂಟೆಗೆ ಬೆಂಕಿ ಕಾಣಿಸಿಕೊಂಡಿದೆ. ಈ ವೇಳೆ ಹದಿಮೂರು ಕಾರ್ಮಿಕರು ಒಳಗೆ ಮಲಗಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೈಗವಸುಗಳನ್ನು ತಯಾರಿಸುವ ಘಟಕದ ಛಾವಣಿಯನ್ನು ಒಡೆದು ಏಳು ಮಂದಿ ಬೆಂಕಿಯಿಂದ ಪಾರಾಗುವಲ್ಲಿ ಯಶಸ್ವಿಯಾಗಿದ್ದರೆ. ಇನ್ನುಳಿದ ಆರು ಮಂದಿ ಸಜೀವ ದಹನವಾಗಿದ್ದಾರೆ ಎಂದು ಅವರು ಹೇಳಿದರು.

ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂಪಾಯಿ



ನೀಡುವಂತೆ ಹಾಗೂ ಗಾಯಗೊಂಡವರ ಚಿಕಿತ್ಸಾ ವೆಚ್ಚವನ್ನು ಭರಿಸುವಂತೆ ಶಿಂಧೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಹೇಳಿಕೆ ತಿಳಿಸಿದೆ.

ಘಟನೆಯಲ್ಲಿನ ಜೀವಹಾನಿಗಾಗಿ ಅವರು ದುಃಖ ವ್ಯಕ್ತಪಡಿಸಿದ್ದಾರೆ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ.

ಬೆಳಗಿನ ಜಾವ 3.30ಕ್ಕೆ ಬೆಂಕಿ ನಂದಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## 16ನೇ ಕೇಂದ್ರ ಹಣಕಾಸು ಆಯೋಗದ ಅಧ್ಯಕ್ಷರಾಗಿ ಅರವಿಂದ್ ಪನಗಾರಿಯಾ ನೇಮಕ



ನವದೆಹಲಿ: ನೀತಿ ಆಯೋಗದ ಮಾಜಿ ಅಧ್ಯಕ್ಷ ಅರವಿಂದ್ ಪನಗಾರಿಯಾ ಅವರನ್ನು 16ನೇ ಕೇಂದ್ರ ಹಣಕಾಸು ಆಯೋಗದ ಮುಖ್ಯಸ್ಥರನ್ನಾಗಿ ನೇಮಿಸಲಾಗಿದೆ.

ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿ ರಿತ್ವಿಕ್ ರಂಜನಂ ಪಾಂಡೆ ಅವರು ಆಯೋಗದ 'ಮುಂಗಡ ಕೋಶ'ದ ವಿಶೇಷ ಕರ್ತವ್ಯಾಧಿಕಾರಿಯಾಗಿರುತ್ತಾರೆ ಎಂದು ಸರ್ಕಾರ ತನ್ನ ಅಧಿಸೂಚನೆಯಲ್ಲಿ ತಿಳಿಸಿದೆ.

2015 ರಿಂದ 2017ರವರೆಗೆ ಪನಗಾರಿಯಾ ಅವರು ನೀತಿ ಆಯೋಗದ ಅಧ್ಯಕ್ಷರಾಗಿದ್ದರು. ಅರವಿಂದ್ ಪನಗಾರಿಯಾ ಅವರು ಭಾರತ-ಅಮೆರಿಕನ್ ಪ್ರಮುಖ ಆರ್ಥಿಕ ತಜ್ಞ ಎಂದು ಗುರುತಿಸಿಕೊಂಡಿದ್ದಾರೆ.

ಮಾಧ್ಯಮ ವರದಿಗಳ ಪ್ರಕಾರ, ಪನಗಾರಿಯಾ ಅವರು ಈ ವರ್ಷದ ಆರಂಭದಲ್ಲಿ 2026ರ ವೇಳೆಗೆ ಭಾರತವು ಮೂರನೇ ಅತಿದೊಡ್ಡ ಆರ್ಥಿಕತೆಯಾಗುತ್ತದೆ ಎಂದು ಹೇಳಿದ್ದರು.

'ಭಾರತದ ಜಿಡಿಪಿ 2026 ರಲ್ಲಿ 5 ಟ್ರಿಲಿಯನ್ ಡಾಲರ್ ಮತ್ತು 2027 ರಲ್ಲಿ 5.5 ಟ್ರಿಲಿಯನ್ ಡಾಲರ್ ತಲುಪುತ್ತದೆ. ಇದರರ್ಥ, 2026ರ ಅಂತ್ಯದ ವೇಳೆಗೆ ಭಾರತವು ವಿಶ್ವದ ಮೂರನೇ-ಅತಿದೊಡ್ಡ ಆರ್ಥಿಕತೆಯಾಗುವತ್ತ ಮುನ್ನುಗ್ಗುವ ಅನುಕೂಲಕರ ಸೂಚನೆಗಳಿವೆ. ಅಸ್ತಿತ್ವದಲ್ಲಿರುವ ಮುನ್ಸೂಚನೆಗಳು ನಿರೀಕ್ಷಿಸುವುದಕ್ಕಿಂತ ಮುಂಚಿತವಾಗಿಯೇ ಈ ಮೈಲಿಗಲ್ಲನ್ನು ಸಾಧಿಸುವ ಎಲ್ಲಾ ಸಾಧ್ಯತೆಯಿದೆ' ಎಂದು ಖ್ಯಾತ ಅರ್ಥಶಾಸ್ತ್ರಜ್ಞರನ್ನು ಉಲ್ಲೇಖಿಸಿ ಬಿಸಿನೆಸ್ ಟುಡೇ ವರದಿ ಮಾಡಿದೆ.

# ತಾಲೂಕ ಮಟ್ಟದ ಜನತಾ ದರ್ಶನ

## ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಿ: ಜಿಲ್ಲಾಧಿಕಾರಿ




ಧಾರವಾಡ: ಸಾರ್ವಜನಿಕರ ಮನವಿ ಪತ್ರಗಳನ್ನು ಕಚೇರಿ ಹಂತದಲ್ಲಿಯೇ ಪರಿಹರಿಸಲು ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು, ಅಹವಾಲುಗಳ ಮನವಿ ಪತ್ರಗಳನ್ನು ಕೂಡಲೇ ಅಧಿಕಾರಿಗಳು ಸ್ವೀಕರಿಸಿ ಅವುಗಳಿಗೆ ಸೂಕ್ತ ಪರಿಹಾರ ನೀಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಅವರು ಬೆಳಿಗ್ಗೆ ತಹಶೀಲ್ದಾರ್ ಕಾರ್ಯಾಲಯದ ನೂತನ ಸಭಾಂಗಣದಲ್ಲಿ ತಾಲೂಕ ಆಡಳಿತ, ತಾಲೂಕ ಪಂಚಾಯತ್ ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸಹಯೋಗದಲ್ಲಿ ತಾಲೂಕ ಮಟ್ಟದ ಜನತಾ ದರ್ಶನದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವು ಯಶಸ್ವಿಗೊಂಡ ನಂತರ ಸರ್ಕಾರವು ತಾಲೂಕ ಮಟ್ಟದ ಜನತಾ ದರ್ಶನಕ್ಕೆ ಮುಂದಾಗಿದ್ದು ಸೂಕ್ತ ವಿಚಾರವಾಗಿದೆ.

ಸರ್ಕಾರ ಹಂತದಲ್ಲಿ ಪರಿಹರಿಸಬೇಕಾದ ಮತ್ತು ಕೋರ್ಟ್ಗೆ ಸಂಭದಿಸಿದ ಅಹವಾಲುಗಳನ್ನು ಹೊರತುಪಡಿಸಿ ಇತರೆ ಅಹವಾಲುಗಳನ್ನು ತಮ್ಮ ವ್ಯಾಪ್ತಿಯಲ್ಲಿ ಪರಿಹರಿಸಬಹುದಾಗಿದೆ. ಅರ್ಜಿಗಳನ್ನು ಪರಿಹರಿಸಲು ಸಂಬಂಧಿಸಿದ ಇಲಾಖೆಗಳಿಗೆ ರವಾನಿಸಲಾಗುತ್ತದೆ.

ತಮ್ಮ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು.

ಜನತಾ ದರ್ಶನವನ್ನು ಹೊರತಾಗಿಯು ಅಧಿಕಾರಿಗಳು ಸಾರ್ವಜನಿಕರಿಗೆ ಸಹಾಯ ಮಾಡಬೇಕೆಂದು ಅವರು ಹೇಳಿದರು.

ಇದೆ ಸಂಧರ್ಭದಲ್ಲಿ ಜಾನುವಾರು ಮೇವಿನ ಬೀಜದ ಮಿನಿಕಿಟ್ ವಿತರಣೆಯನ್ನು ಜಿಲ್ಲಾಧಿಕಾರಿ ವಿತರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಗಣ್ಣಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಅಣಗೌಡರ, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಇಮ್ತಿಯಾಜ್, ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಾಶ ಬೆನ್ನೂರು, ತಾಲೂಕ ಪಂಚಾಯತ್ ಇ.ಓ ಗಂಗಾಧರ ಕಂದುಕೂರ ಮತ್ತು ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ತಹಶೀಲ್ದಾರ್ ದೊಡ್ಡಪ್ಪ ಹೂಗಾರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮೇಘ ಪಾಟೀಲ ನಿರೂಪಿಸಿದರು, ಬಸವರಾಜ ಕುಲಾವಿ ವಂದಿಸಿದರು.

## ಕೋವಿಡ್ -19: ಕರ್ನಾಟಕದಲ್ಲಿ ಮತ್ತೆ ಸೋಂಕು ಏರಿಕೆ



ಬೆಂಗಳೂರು: ಕರ್ನಾಟಕದಲ್ಲಿ ಭಾನುವಾರ 229 ಹೊಸ ಕೋವಿಡ್ -19 ಸೋಂಕು ಪ್ರಕರಣಗಳು ದಾಖಲಾಗಿದ್ದು, ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 1000 ಗಡಿ ದಾಟಿದೆ. ಈ ಬಗ್ಗೆ ರಾಜ್ಯ ಆರೋಗ್ಯ ಇಲಾಖೆ ಮಾಹಿತಿ ನೀಡಿದ್ದು, ಭಾನುವಾರ 229 ಹೊಸ ಕೋವಿಡ್ -19 ಸೋಂಕು ಪ್ರಕರಣಗಳ ದಾಖಲಾತಿಯೊಂದಿಗೆ ರಾಜ್ಯದಲ್ಲಿನ ಸಕ್ರಿಯ ಪ್ರಕರಣಗಳ ಸಂಖ್ಯೆ 1000ಕ್ಕೆ ಏರಿದೆ. ಈ ಪೈಕಿ 943 ಜನರು ಮನೆಯಲ್ಲಿ ಪ್ರತ್ಯೇಕವಾಗಿರುತ್ತಾರೆ ಮತ್ತು ಉಳಿದ 57 ಜನರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಅಂತೆಯೇ ಸೋಂಕಿತರ ಸಾವಿನ ಬಗ್ಗೆ ವರದಿಯಾಗಿಲ್ಲ.

ಕಳೆದ 24 ಗಂಟೆಗಳಲ್ಲಿ 62 ಸೋಂಕಿತರು ಚೇತರಿಸಿಕೊಂಡಿದ್ದು, ಒಟ್ಟು 3,527 ಕೋವಿಡ್ ಪರೀಕ್ಷೆಗಳನ್ನು ನಡೆಸಲಾಗಿದೆ. ಈ ಪೈಕಿ 2,972 ಖಖಿಕಅಖ ಮತ್ತು 555 ರಾಪಿಡ್ ಆಂಟಿಜೆನ್ ಪರೀಕ್ಷೆಗಳನ್ನು ನಡೆಸಲಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ಗರಿಷ್ಠ ಸಂಖ್ಯೆಯ ಪರೀಕ್ಷೆಗಳನ್ನು ನಡೆಸಲಾಗಿದೆ. ರಾಜಧಾನಿಯಲ್ಲಿ 83 ಸೋಂಕು ಪ್ರಕರಣಗಳು ದಾಖಲಾಗಿದ್ದು, ಇದು ರಾಜ್ಯದ ಇತರ ಜಿಲ್ಲೆಗಳಿಗೆ ಹೋಲಿಸಿದರೆ ಅತಿ ಹೆಚ್ಚಿನದ್ದಾಗಿದೆ. ರಾಜ್ಯದಲ್ಲಿ ಸೋಂಕು ಸಕಾರಾತ್ಮಕತೆಯ ಪ್ರಮಾಣವು ಶೇ.6.49 ಪ್ರತಿಶತದಷ್ಟಿದ್ದರೆ, ಪ್ರಕರಣದ ಸಾವಿನ ಪ್ರಮಾಣವು ಶೇ.0.00 ಪ್ರತಿಶತದಷ್ಟಿದೆ ಎಂದು ಆರೋಗ್ಯ ಇಲಾಖೆಯ ದತ್ತಾಂಶಗಳು ಮಾಹಿತಿ ನೀಡಿವೆ.

# ಉದ್ಯೋಗದಿಂದ ಉತ್ತಮ ಜೀವನ: ಪ್ರೊ. ಡಾ.ಅನಂತ್ ಝುಂಡೇಕರ್

ಬಳ್ಳಾರಿ: ಉತ್ತಮ ಜೀವನ ರೂಪಿಸಿಕೊಳ್ಳಲು ಉದ್ಯೋಗ ಎಂಬುದು ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ಪುರುಷ ಮತ್ತು ಮಹಿಳೆಯರಿಬ್ಬರೂ ಉದ್ಯೋಗ ಕಂಡುಕೊಳ್ಳುವುದು ಮುಖ್ಯ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾ.ಅನಂತ್ ಝುಂಡೇಕರ್ ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ವಿಶೇಷ ಘಟಕದ ವತಿಯಿಂದ ಶನಿವಾರ ಆಯೋಜಿಸಿದ್ದ "ಎಸ್ಸಿಪಿ/ಟಿಎಸ್ಪಿ ಯೋಜನೆ ಅಡಿಯಲ್ಲಿ ಲಭ್ಯವಿರುವ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಯುವಜನತೆಗೆ ಸ್ವಯಂ-ಉದ್ಯೋಗ




ಅವಕಾಶಗಳು" ಕುರಿತಾದ ಒಂದು ದಿನದ ಕಾರ್ಯಾಗಾರವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

"ಉದ್ಯೋಗಂ ಪುರುಷ ಲಕ್ಷಣಂ" ಎಂಬ ಗಾದೆಯಂತೆ ಈಗ ಎಲ್ಲಾ ಕ್ಷೇತ್ರದಲ್ಲೂ ಅವಕಾಶದ ಬಾಗಿಲು ತೆರೆದಿರುತ್ತದೆ. ಈಗಿನ ಕಾಲದಲ್ಲಿ "ಉದ್ಯೋಗಂ ಸರ್ವ ಲಕ್ಷಣಂ" ಎಂಬಂತಾಗಿ ಹೆಣ್ಣು ಮಕ್ಕಳು ಪುರಷರಿಗೆ ಸಮಾನವಾಗಿ ದುಡಿಯುತ್ತಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಭಾರತೀಯ ಹಣಕಾಸು ಸಚಿವಾಲಯದ ನಿವೃತ್ತ ಪ್ರಧಾನ ಮುಖ್ಯ ಆಯುಕ್ತರಾದ ಎಚ್. ಆರ್.ಭೀಮಾಶಂಕರ್ ಮಾತನಾಡಿ, ಭಾರತದಲ್ಲಿನ ಅರ್ಧದಷ್ಟು ಕೆಲಸಗಾರರು ಸ್ವಯಂ ಉದ್ಯೋಗಿಗಳಾಗಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಮಹಿಳೆಯರಲ್ಲಿ ಸ್ವಯಂ ಉದ್ಯೋಗಿಗಳ ಪ್ರಮಾಣ ಗಣನೀಯವಾಗಿ ಹೆಚ್ಚಿದೆ. ವಿಶ್ವವಿದ್ಯಾಲಯಗಳಲ್ಲಿ ಈ ಮಾದರಿಯ ಉದ್ಯೋಗ ಅವಕಾಶಗಳ ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಯುವ ಸಮುದಾಯಗಳಿಗೆ ಹೆಚ್ಚಿನ ನೆರವು ನೀಡಿದಂತಾಗುತ್ತದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ್.ಎಸ್.ಎನ್ ಮಾತನಾಡಿ, 21ನೇ ಶತಮಾನದಲ್ಲಿ ನಮ್ಮ ಶಿಕ್ಷಣ ಮತ್ತು ಜೀವಮಾನದ ಕಲಿಕೆಯ ಮೂಲಕ ಹೊಸದನ್ನು ಪಡೆದುಕೊಂಡು ಸ್ವಯಂ-ಉದ್ಯೋಗ ಗಿಟ್ಟಿಸಿಕೊಳ್ಳಬೇಕು, ಇದರಿಂದ ಸಮಾಜದಲ್ಲಿ ವ್ಯಕ್ತಿಗೆ ಗೌರವ, ಮನ್ನಣೆ ಸಿಗುತ್ತದೆ ಎಂದು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ವಿವಿಯ ಕುಲಸಚಿವರು (ಮೌಲ್ಯಮಾಪನ) ಪ್ರೊ. ರಮೇಶ್ ಓಲೇಕಾರ್, ವಿತ್ತಾಧಿಕಾರಿ ಪ್ರೊ.ಸದ್ಯೋಜಾಥಪ್ಪ, ಎಸ್ಸಿ ಎಸ್ಟಿ ಘಟಕದ ನಿರ್ದೇಶಕರಾದ ಪ್ರೊ. ಗೌರಿ ಮಾಣಿಕ ಮಾನಸ್, ಡಾ. ಶಿವಪ್ರಸಾದ, ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಮನವಿ



ಬೈಲಹೊಂಗಲ : ಬೆಳವಡಿ ಗ್ರಾಪಂ ಪಂಚಾಯತಿ ವ್ಯಾಪ್ತಿಯ ಕೆ.ಬಿ. ಪಟ್ಟಿಹಾಳ ಕ್ರಾಸ್ ಹತ್ತಿರದ ಮುಲ್ಲಾ ಮಡ್ಡಿ ಸ್ಥಳದಲ್ಲಿ ವಾಸಿಸುತ್ತಿರುವ ಅಲೆಮಾರಿ ಬುಡಕಟ್ಟು ಜನದವರಿಗೆ ಮೂಲಭೂತ ಸೌಲಭ್ಯಗಳನು ಒದಗಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಲೆಮಾರಿ ಬುಡಕಟ್ಟು ಮಹಾಸಭಾ ಪದಾಧಿಕಾರಿಗಳು ಎಸಿ ಪ್ರಭಾವತಿ ಫಕೀರಪೂರ, ಬೆಳವಡಿ ಪಿಡಿಒ ಉಸ್ಮಾನ ನದಾಫ ಅವರಿಗೆ ಮನವಿ ಸಲ್ಲಿಸಿದರು.

ಸಂಘಟಣೆಯ ಜಿಲ್ಲಾಧ್ಯಕ್ಷ ಮಾರುತಿ ಕೊಂಡೂರ ಮಾತನಾಡಿ, ಸುಮಾರು 20 ವರ್ಷಗಳಿಂದ 20 ಕ್ಕೂ ಹೆಚ್ಚು ಕುಟುಂಬಗಳು ಪ್ಲಾಸ್ಟಿಕ್ ಹೊದಿಕೆಯ ಗುಡಿಸಲು ಹಾಕಿಕೊಂಡು ನಿತ್ಯ ಉಪಜೀವನ ಸಾಗಿಸುತ್ತಿದ್ದು, ಮಳೆ, ಚಳಿ, ಬೇಸಿಗೆಗಾಲದಲ್ಲಿ ಜೀವನ ನಡೆಸುವುದು ಕಷ್ಟಕರವಾಗಿದೆ. ಮಕ್ಕಳಿಗೆ ಸಮರ್ಪಕವಾಗಿ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲ. ಮೂಲಭೂತ ಸೌಕರ್ಯಗಳಿಂದ ತುಂಬಾ ವಂಚಿತವಾಗಿದೆ. ಈ ಕುರಿತು ಸಾಕಷ್ಟು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಕೂಡಾ ನಮ್ಮ ಮನವಿಗೆ ಯಾವುದೇ ರೀತಿ ಸ್ಪಂದನೆ ಸಿಗುತ್ತಿಲ್ಲವೆಂದು ಆರೋಪಿಸಿದರು. ಇನ್ನಾದರೂ ಎಚ್ಚೆತ್ತುಕೊಂಡು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮುಂದಾಗಬೇಕೆಂದು ಒತ್ತಾಯಿಸಿದರು.

ದುರ್ಗಪ್ಪ ಕುಂದ್ರೋಲ, ಹುಸೇನಿ ದೇವರಶಟ್ಟಿ, ಯಲ್ಲಪ್ಪ ಮೋಗಸಲಿ, ನಾಗರಾಜ ಸಿದ್ನಲ, ಪಕ್ಕಿರವ್ವ ದೇವರಶೆಟ್ಟಿ, ಅಶ್ವಿನಿ ಕುಂದ್ರೋಲ, ಮಂಜಾವ್ವ ಕೊನಪೊಲಾ ಮುಂತಾದವರು ಇದ್ದರು.

### ನಾಡು–ನುಡಿಗೆ ಡಿ.ಎಸ್ ಕರ್ಕಿಯವರ ಕೊಡುಗೆ ಅಪಾರ: ಡಾ. ಗೀತಾಂಜಲಿ ಕುರಡಗಿ

## ಡಾ. ಡಿ.ಎಸ್. ಕರ್ಕಿ 116ನೇ ಜನ್ಮದಿನೋತ್ಸವ ನಿಮಿತ್ತ ಕಾವ್ಯ ಪ್ರಶಸ್ತಿ ಪ್ರದಾನ

ಬೆಳಗಾವಿ: "ಗಡಿಯಲ್ಲಿ ಕನ್ನಡ ಕಟ್ಟಿ ಬೆಳೆಸಿದ ಕೀರ್ತಿ ಡಾ. ಡಿ.ಎಸ್. ಕರ್ಕಿ ಅವರಿಗೆ ಸಲ್ಲುತ್ತದೆ. ಅವರು, ಹಚ್ಚಿದ ಕನ್ನಡ ದೀಪ ನಿರಂತರವಾಗಿ ಬೆಳೆಗುತ್ತಿದ್ದು, ನಾಡು–ನುಡಿಗೆ ಕರ್ಕಿಯವರ ಕೊಡುಗೆ ಅಪಾರ" ಎಂದು ಹಾವೇರಿ ವಿಶ್ವವಿದ್ಯಾಲಯ ಕನ್ನಡ ಅಧ್ಯಯನ ವಿಭಾಗದ ಡಾ. ಗೀತಾಂಜಲಿ ಕುರಡಗಿ ಹೇಳಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಡಾ. ಡಿ.ಎಸ್. ಕರ್ಕಿ–ಪ್ರತಿಷ್ಠಾನ ಟ್ರಸ್ಟ್ ವತಿಯಿಂದ ಆಯೋಜಿಸಲಾದ ಡಾ. ಡಿ.ಎಸ್. ಕರ್ಕಿ 116ನೇ ಜನ್ಮದಿನೋತ್ಸವ ಹಾಗೂ ಕಾವ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಕೃತಿ ಬಗ್ಗೆ ಕರ್ಕಿ ಅವರು ಅಪಾರ ಗೌರವ ಇಟ್ಟಿದರು ಎಂದು ತಿಳಿಸಿದರು.

1907ರಲ್ಲಿ ಬೆಳಗಾವಿಯ ಬೆಲ್ಲದ ಬಾಗೇವಾಡಿಯಲ್ಲಿ ಹುಟ್ಟಿದ ಕರ್ಕಿಯವರು ಹುಟ್ಟಿ, ಶಿಕ್ಷಕರಾಗಿ ಜೀವನ ನಿರ್ವಹಿಸಿ, ಕನ್ನಡ ಜ್ಯೋತಿ



ಬೆಳಗಿದವರು. ಡಿ.ಎಸ್. ಕರ್ಕಿ ಅವರಿಗೆ ಕಾವ್ಯ ಕೃಷಿ ವಿಶೇಷ ಕ್ಷೇತ್ರವಾದರೂ ಎಲ್ಲ ಸಾಹಿತ್ಯ ಪ್ರಕಾರಗಳಲ್ಲಿಯೂ ಜನಪರ ವಿಚಾರಗಳನ್ನು ನೀಡಿದ್ದಾರೆ ಎಂದರು.

ಡಾ. ಡಿ.ಎಸ್.ಕರ್ಕಿಯವರು ನವೋದಯ ಪಾವಿತ್ರತೆ ಕಾಪಾಡಿಕೊಂಡ ಬಂದ ನಾಡಿನ ಅಗ್ರಗಣ್ಯ ಕವಿಗಳು. ಸತ್ಯವನ್ನು ಕೊಲ್ಲಲು ಆಗಲ್ಲ, ಸತ್ಯ ಹೇಳುವವರನ್ನು ಕೊಲ್ಲುತ್ತಾರೆ. ಹೀಗಾಗಿ ಪ್ರಶಸ್ತಿಗಾಗಿ ಸಾಹಿತ್ಯ ಬರೆಯಬಾರದು. ಜನಪರ ಕಾಳಜಿ ಇರುವುದೇ ನಿಜವಾದ ಸಾಹಿತ್ಯ. ನಾಡಿನ ಕುವೆಂಪು ಸೇರಿ ಎಲ್ಲ ಕವಿಗಳಿಗೆ ದೊಡ್ಡ ಗುರು ಬಸವಣ್ಣ ಎಂದು ಸ್ಮರಿಸಿಕೊಂಡರು.

ಇವರ ಕನ್ನಡ ಸೇವೆಗೆ ಅತ್ಯುತ್ತಮ ಪ್ರಶಸ್ತಿಗಳು ಅವರನ್ನು ಹುಡುಕಿಕೊಂಡು ಬಂದಿವೆ. ಹಿರಿಯ ಸಾಹಿತಿ ಪಾಟೀಲ ಪುಟ್ಟಪ್ಪ ಅವರು ಡಾ. ಡಿ.ಎಸ್. ಕರ್ಕಿಯವರಿಗೆ ಚಿರಂಜೀವಿ ಕವಿ ಎಂದು ಕರೆದರು. ಕನ್ನಡಕ್ಕೆ ಉತ್ತಮ ಕೃತಿ ನೀಡಿದ

ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆ ಸಲ್ಲಿಸಿ, ಶುಭಹಾರೈಸಿದರು.

ಜಾಗತಿಕ ಲಿಂಗಾಯತ ಮಹಾ ಸಭಾ ಅಧ್ಯಕ್ಷರಾದ ಬಸವರಾಜ ರೋಟ್ಟಿ ಮಾತನಾಡಿ, ಬಡತನದಲ್ಲಿ ಬೆಳೆದ ಬಂದ ಡಿ.ಎಸ್ ಕರ್ಕಿಯವರು ಪ್ರಕೃತಿ ಮೇಲೆ ಅಪಾರ ಗೌರವ ಇಟ್ಟಿಕೊಂಡಿದ್ದರು. ಪ್ರಕೃತಿ ಸೌಂದರ್ಯ ಅವರ ಜೀವಾಳವೇ ಆಗಿತ್ತು. ಅದರಂತೆ, ಶಿಕ್ಷಕ ವೃತ್ತಿಜೀವನದಲ್ಲಿ ಕನ್ನಡ ಕವಿತೆಗಳನ್ನು ಬರೆದು, ಗಡಿಯಲ್ಲಿ ಕನ್ನಡ ನೆಲೆಯೂರಲು ಶ್ರಮಿಸಿದರು. ಕರ್ಕಿಯವರ ಒಂದೊಂದು ಕವಿತೆ ಅಜರಾಮರ ಎಂದರು.

ಕರ್ಕಿಯವರು ನಿಸ್ವಾರ್ಥದಿಂದ ಕನ್ನಡ ಸೇವೆ ಸಲ್ಲಿಸಿದ್ದಾರೆ. ಅವರ ಟ್ರಸ್ಟ್ ನಿರ್ಮಾಣಕ್ಕೆ ಸರ್ಕಾರದಿಂದ ಯಾವುದೇ ಸಹಾಯ–ಸಹಕಾರ ಪಡೆಯದೇ ಕುಟುಂಬದ ಸದಸ್ಯರು ನಿರಂತರಾಗಿ ನಡೆಸಿಕೊಂಡು ಬರುತ್ತಿದ್ದಾರೆ.

ಕನ್ನಡ ಉತ್ತಮ ಬರಗಾರರಿಗೆ ಪ್ರತಿ ವರ್ಷವೂ ಡಿ.ಎಸ್ ಕರ್ಕಿ–ಪ್ರತಿಷ್ಠಾನ ಪ್ರಸ್ಟ್ ದಿಂದ ನಿರಂತರ ಗೌರವ ಸನ್ಮಾನ ಮಾಡುತ್ತಿರುವುದು ನಮ್ಮೆಲ್ಲರ ಹೆಮ್ಮೆ ಎಂದ ಅವರು, ಕರ್ಕಿಯವರ ಟ್ರಸ್ಟ್ ಗೆ ಸಮುದಾಯದಿಂದ ಕೈಲಾದಷ್ಟು ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಕೃತಿ ಪ್ರಶಸ್ತಿ ಪುರಸ್ಕೃತರಾದ, ಶ್ರೀದೇವಿ ಕೆರೆಮನೆ ಕಾರವಾರ, ಇವರ 'ಆಸೆಯೆಂಬ ಶೂಲದ ಮೇಲೆ', ಆಶಾ ಕಡಪಟ್ಟಿ ಬೆಳಗಾವಿ ಇವರ, 'ಹರಕು ಕೌದಿಯ ಕಿಂಡಿ' ಹಾಗೂ ಇಂದಿರಾ ಮೋಟೆಬೆನ್ನೂರ್ ಬೆಳಗಾವಿ ಇವರ' ಭಾವ ಬೆಳಗು' ಇವರಿಗೆ ಪ್ರಶಸ್ತಿ ನೀಡಿ, ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಡಾ.ವಿಜಯಲಕ್ಷ್ಮೀ ಮ. ಪುಟ್ಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.ಅಧ್ಯಕ್ಷತೆ ಡಾ. ರಮೇಶ ಮು.ಕರ್ಕಿ , ಮಹಾದೇವಿ ಚ. ಹುಣಶೀಬೀಜ ಸ್ವಾಗತಿಸಿದರು. ಕಾರ್ಯದಶಿ ಪ್ರೋ.ಗಿರೀಶ ಮು. ಕರ್ಕಿ , ಡಾ.ರಮೇಶ ಮು. ಕರ್ಕಿ , ಡಾ. ಕಲ್ಪನಾ ರ. ಕರ್ಕಿ, ಶಶಿಧರ ಮ. ಬೈರನಟ್ಟಿ, ಶಶಿಧರ ಬ.ಕರ್ಕಿ, ಸತೀಶ ಮು ಕರ್ಕಿ, ಮಷ್ಠಾ ಕರ್ಕಿ, ಮನೋಹರ ಕರ್ಕಿ, ಗೌರಿ ಕರ್ಕಿ, ಉಮೇಶ ಕರ್ಕಿ, ಶ್ರೀದೇವಿ ಕರ್ಕಿ ಹಾಗೂ ಇತರರು ಇದ್ದರು.

## ಲೋಕಸಭಾ ಮತಕ್ಷೇತ್ರದ ಮೇಲೆ ಕಣ್ಣಿಟ್ಟ ಪ್ರಭಾವಿ ಮಹಿಳೆಯರು

ಬೆಳಗಾವಿ: ಲೋಕಸಭಾ ಚುನಾವಣೆಗೆ ಕೈ–ಕಮಲ ಭರ್ಜರಿ ಸಿದ್ಧತೆ ಶುರುಮಾಡಿದ್ದು, ಕರ್ನಾಟಕದಲ್ಲಿ ಕನಿಷ್ಠ ಲೋಕಸಭಾ ಕ್ಷೇತ್ರಗಳನ್ನು ಗೆಲ್ಲಲು ರಣತಂತ್ರ ರೂಪಿಸಿವೆ. ಅದರಲ್ಲೂ ಇದೀಗ ಬೆಳಗಾವಿ ಹಾಗೂ ಕಾರವಾರ ಜಿಲ್ಲೆಯ ಪ್ರಭಾವಿ ಮಹಿಳೆಯರು ಉ.ಕ. ಜಿಲ್ಲೆಯ ಲೋಕಸಭಾ ಮತಕ್ಷೇತ್ರದ ಮೇಲೆ ಕಣ್ಣಿಟ್ಟು ಸ್ಪರ್ಧೆಗೆ ಸಜ್ಜಾಗುತ್ತಿದ್ದಾರೆ.

ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರ ಬೆಳಗಾವಿ ಜಿಲ್ಲೆಯ ಖಾನಾಪುರ ಮತ್ತು ಕಿತ್ತೂರು ವಿಧಾನಸಭಾ ಮತಕ್ಷೇತ್ರಗಳನ್ನು ಒಳಗೊಂಡಿದೆ. ವಿಧಾನಸಭಾ ಚುನಾವಣೆಯಲ್ಲಿ ಸೋತಿರುವ ಡಾ. ಅಂಜಲಿ ನಿಂಬಾಳ್ಕರ್ ಲೋಕಸಭೆಗೆ ಹೋಗಲು ಮುಂದಾಗಿದ್ದಾರೆ. ಈ ಮೂಲಕ ವರ್ಷದ ಅವಧಿಯಲ್ಲಿಯೇ ಮತ್ತೊಂದು ಚುನಾವಣೆಗೆ ಹೋಗಲು ತುರುಸಿನ ತಯಾರಿ ನಡೆಸಿದ್ದಾರೆ. ಇನ್ನೊಂದೆಡೆ ಕಾರವಾರದ ಮಾಜಿ ಶಾಸಕಿ ರೂಪಾಲಿ ನಾಯಕ ಅವರು ಬಿಜೆಪಿಯಿಂದ ಟಿಕೆಟ್ ಗಿಟ್ಟಿಸಿಕೊಳ್ಳಲು



ಬಿರುಸಿನ ತಯಾರಿ ನಡೆಸಿದ್ದಾರೆ. ಒಟ್ಟಾರೆ, ಎರಡು ಪಕ್ಷಗಳು ಈ ಮತಕ್ಷೇತ್ರದಿಂದ ಮಹಿಳೆಯರ ಸ್ಪರ್ಧೆಗೆ ಅನುವು ಮಾಡಿಕೊಡುತ್ತದಾ? ಎಂದು ನೋಡಬೇಕಿದೆ.

ದಿಲ್ಲಿಗೆ ಹೋಗುವ ತವಕ: ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದಿಂದ ಸ್ಪರ್ಧೆಗಿಳಿಯಲು ಖಾನಾಪುರದ ಮಾಜಿ ಶಾಸಕಿ ಡಾ. ಅಂಜಲಿ ನಿಂಬಾಳ್ಕರ್ ಉತ್ಸುಕತೆ ತೋರಿಸಿದ್ದಾರೆ. ಈ ಮೂಲಕ ಕಳೆದ ಕೆಲ ದಶಕಗಳಿಂದ ಕಳೆದುಕೊಂಡಿರುವ ಈ ಪ್ರತಿಷ್ಠಿತ ಕ್ಷೇತ್ರವನ್ನು ಕಾಂಗ್ರೆಸಿಗೆ ಗೆದ್ದು ಕೊಡುವ ಸನ್ನಾಹದಲ್ಲಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಆಯ್ಕೆಗೆ ಸಂಬಂಧಿಸಿ ಜಿಲ್ಲೆಯ ಉಸ್ತುವಾರಿ ಜವಾಬ್ದಾರಿ ಹೊತ್ತಿರುವ ಸಚಿವ ಎಚ್ .ಕೆ.ಪಾಟೀಲ ಅವರು ಈಗಾಗಲೇ ಒಂದು ಸಭೆ ನಡೆಸಿದ್ದಾರೆ. ಅನೇಕರ ಅಭಿಪ್ರಾಯ ಸಂಗ್ರಹ ನಡೆಸಲಾಗಿದೆ. ಮಾಜಿ ಶಾಸಕಿ ಡಾ.ಅಂಜಲಿ ನಿಂಬಾಳ್ಕರ್ ಹೆಸರು ಮುಂಚೂಣಿಯಲ್ಲಿದೆ.

ಪಕ್ಷ ಅವರಿಗೆ ಈ ಬಾರಿ ಸ್ಪರ್ಧೆಗೆ ಟಿಕೆಟ್ ನೀಡುತ್ತದಾ ಎಂಬ ಚರ್ಚೆ ಖಾನಾಪುರ ಮತಕ್ಷೇತ್ರದಲ್ಲಿ ಜೋರಾಗಿ ಹರಿದಾಡುತ್ತಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಖಾನಾಪುರದಲ್ಲಿ ಸೋತಿರುವ ರಾಜಕೀಯ ಪುನರ್ವಸತಿಗಾಗಿ ಉತ್ತರ ಕನ್ನಡ ಲೋಕಸಭಾ ಚುನಾವಣೆಯಲ್ಲಿ ಗೆದ್ದು ದಿಲ್ಲಿಗೆ ಹೋಗುವ ತವಕದಲ್ಲಿದ್ದಾರೆ. ಉತ್ತರ ಕನ್ನಡ ಮತಕ್ಷೇತ್ರವನ್ನು ಈ ಹಿಂದೆ ಮಾರ್ಗರೆಟ್ ಆಳ್ವ ಪ್ರತಿನಿಧಿಸಿದ್ದರು. ಕೇಂದ್ರ ಸಚಿವೆಯು ಸಹಾ ಆಗಿದ್ದರು. ಇದೀಗ ಕಾಂಗ್ರೆಸ್ ವರಿಷ್ಠರು ಮತ್ತೊಬ್ಬ ಮಹಿಳೆಯನ್ನು ಈ ಕ್ಷೇತ್ರದಿಂದ ಕಣಕ್ಕಿಳಿಸಲು ಪರಿಗಣಿಸುತ್ತದಾ ? ಕಾದು ನೋಡಬೇಕಿದೆ.

ಖಾನಾಪುರ ಮತಕ್ಷೇತ್ರದ ಮೇಲೆ ಅಂಜಲಿಗಿದೆ ಹಿಡಿತ: ಡಾ. ಅಂಜಲಿ ನಿಂಬಾಳ್ಕರ್ ಅವರಿಗೆ ಖಾನಾಪುರ ಮತಕ್ಷೇತ್ರದ ಮೇಲೆ ಭಾರಿ ಹಿಡಿತ ಇದೆ. ಜೊತೆಗೆ ಬೆಳಗಾವಿ ಜಿಲ್ಲೆಗೆ ಸೇರಿರುವ ಕಿತ್ತೂರು ಮತಕ್ಷೇತ್ರ ಸಹಾ ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಗೆ ಬರುತ್ತಿದ್ದು ಅಲ್ಲಿ ಕಾಂಗ್ರೆಸ್ ಪಕ್ಷದ ಬಾಬಾ ಸಾಹೇಬ್ ಪಾಟೀಲ ಶಾಸಕರು. ಉಳಿದಂತೆ ಉತ್ತರ ಕನ್ನಡ ಮತಕ್ಷೇತ್ರದಲ್ಲಿ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಶಾಸಕರು ಆಯ್ಕೆಯಾಗಿರುವ ಹಿನ್ನಲೆಯಲ್ಲಿ ಲೋಕಸಭೆಗೆ ಸುಲಭವಾಗಿ ಆಯ್ಕೆಯಾಗಬಹುದು ಎನ್ನುವ ರಾಜಕೀಯ ಲೆಕ್ಕಾಚಾರ ಡಾ. ಅಂಜಲಿ ನಿಂಬಾಳ್ಕರ್ ಅವರದ್ದು.

ಸ್ವತಃ ವೈದ್ಯೆ ಆಗಿರುವ ಅವರು ಡಾ.ಅಂಜಲಿತಾಯಿ ಫೌಂಡೇಶನ್ ಮೂಲಕ ಖಾನಾಪುರದ ಹಳ್ಳಿ ಹಳ್ಳಿಗಳಲ್ಲಿ ಸಾಮಾಜಿಕ ಸೇವೆ ನೀಡಿ ಜನಪ್ರಿಯತೆ ಹೊಂದಿದ್ದಾರೆ. ಒಟ್ಟಾರೆ, ಇದೀಗ ಕಾಂಗ್ರೆಸ್ ಹೈಕಮಾಂಡ್ ಡಾ.ಅಂಜಲಿ ನಿಂಬಾಳ್ಕರ್ ಅವರಿಗೆ ಟಿಕೆಟ್ ನೀಡಲು ಮುಂದಾಗುತ್ತಾ ಎಂದು ಕಾದು ನೋಡಬೇಕಿದೆ.

## ಬದುಕಿನ ನೆಮ್ಮದಿಗಾಗಿ ಆಧ್ಯಾತ್ಮದ ಕಡೆಗೆ ಸಾಗಿ: ಗಂಗಾಧರ ಸ್ವಾಮೀಜಿ

ಬೈಲಹೊಂಗಲ : ಪೂಜ್ಯರ ಆಧ್ಯಾತ್ಮಿಕ ದರ್ಶನದ ಮೂಲಕ ಮನುಷ್ಯನು ದೇವ ಸ್ವರೂಪಿಯಾಗಬೇಕಾದರೆ, ಮನಸ್ಸನು ಹತೋಟಿಯಲ್ಲಿ ಇಟ್ಟುಕೊಂಡು ಉತ್ತಮ ಜೀವನ ನಡೆಸಬೇಕು ಎಂದು ಹೊಸೂರ ಮಡಿವಾಳೇಶ್ವರ ಮಠದ ಗಂಗಾಧರ ಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಜಗದ್ಗುರು ಶ್ರೀ ಮಡಿವಾಳೇಶ್ವರ ಮಠದ 33 ನೇ ಜಾತ್ರಾ ಮಹೋತ್ಸವ, ಶಿವಶರಣೆ ತಂಗೆಮ್ಮಾ ತಾಯಿಯವರ 78 ನೇ ಜಯಂತೋತ್ಸವ ಅಂಗವಾಗಿ ನಡೆಯುತ್ತಿರುವ ಜೀವನ ದರ್ಶನ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿ, ಪೂಜ್ಯರ ವಾಣಿಯ ಆಲಿಸುವುದರಿಂದ ಮನಸ್ಸು ಹಗುರುವಾಗುತ್ತದೆ. ಮಾನವ ಜನ್ಮ ಪಾವನ ಆಗಬೇಕಾದರೆ ಉತ್ತಮ ಕಾರ್ಯಗಳತ್ತ ಹೆಚ್ಚಿನ ಒತ್ತು



ನೀಡಬೇಕೆಂದರು. ತಂಗೆಮ್ಮಾತಾಯಿ ಅವರು ಮಡಿವಾಳೇಶ್ವರರ ಪೀಠಾಧಿಕಾರಿಯಾಗಿ ನಾಡಿಗೆ ಅನೇಕ ಕೊಡುಗೆ ನೀಡಿ, ಭಕ್ತರ ಜನಮಾನಸದಲ್ಲಿ ಹಚ್ಚಹಸಿರಾಗಿ ಉಳಿದಿದ್ದಾರೆ. ಜ.7ರವರೆಗೆ ನಡೆಯುವ ಕಾರ್ಯಕ್ರಮಕ್ಕೆ ಭಕ್ತರು ತನು, ಮನ, ಧನ ಸಹಾಯ ಸಲ್ಲಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಬೇಕೆಂದರು.

ಅರಳಿಕಟ್ಟಿ ತೋಂಟದಾರ್ಯ ಮಠದ ಶಿವಮೂರ್ತಿ ಸ್ವಾಮೀಜಿ, ದೇಗುಲಹಳ್ಳಿ ಮಡಿವಾಳೇಶ್ವರ ಮಠದ ವಿರೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿ, ಮನುಷ್ಯನ ಬದುಕಿನಲ್ಲಿ ಶಾಂತಿ ನೆಲೆಸಬೇಕಾದರೆ ಆಧ್ಯಾತ್ಮಿಕ ಚಿಂತನೆಯತ್ತ ಗಮನ ಹರಿಸಿದಾಗ ಮಾತ್ರ ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ ಎಂದರು.

ಪ್ರವಚನಕಾರ ಸಿದ್ಧರಾಮ ಶಾಸೊಥಗಳು ಮಾತನಾಡಿ, ಮಡಿವಾಳೇಶ್ವರನ ಮಹಿಮೆಯ ಪ್ರವಚನ ಆಲಿಸಿ, ಅವರ ಆಶಯದಂತೆ ಪುಣ್ಯಮಯ ಕಾರ್ಯ ಮಾಡುತ್ತಾ ಮುನ್ನಡೆದು ಜೀವನ ಪಾವನ ಮಾಡಿಕೊಳ್ಳಬೇಕು ಎಂದರು.

ಶ್ರೀಮಠದ ಮಡಿವಾಳೇಶ್ವರ ಸ್ವಾಮೀಜಿ ಸಾನಿಧ್ಯವಹಿಸಿದ್ದರು. ಹಿರಿಯರಾದ ಗಂಗಪ್ಪ ತುರಮರಿ, ಸಣ್ಣಬಸಪ್ಪ ಕುಡಸೋಮಣ್ಣವರ, ಈಶ್ವರ ಕೊಪ್ಪದ, ಮಹಾಂತೇಶ ಅಕ್ಕಿ, ರುದ್ರಪ್ಪ ತುರಮರಿ, ಶಿವಲಿಂಗಯ್ಯ ಏಣಗಿಮಠ, ರವಿ ಲಕ್ಕನ್ನವರ, ಈರಪ್ಪ ಹಣಸಿ, ಬಸವರಾಜ ಕಲಾದಗಿ, ಉಮೇಶ ಬೋರಕನವರ, ಶಿವಸಪ್ಪ ಕಡಕೋಳ, ಗುರುಪಾದಪ್ಪ ಅಂಗಡಿ, ಮಹಾಂತೇಶ ಹಣಸಿ, ಗಿರೀಶ ಕಡಕೋಳ, ಗಿರೀಶ ಪಾಟೀಲ ಹಾಗೂ ನೂರಾರು ಭಕ್ತರು ಇದ್ದರು. ರುದ್ರಪ್ಪ ಹೂಗಾರ ಸಂಗೀತ ಸೇವೆ, ಮಲ್ಲಿಕಾರ್ಜುನ ಚಿಕ್ಕಮಠ ತಬಲಾ ಸೇವೆ ಮಾಡಿದರು.

## ಗುರುವಿನ ಅಮೃತ ವಾಣಿಗಳಿಂದ ಜೀವನ ಪಾವನ; ಅಭಿನವ ಸಿದ್ಧಾರೂಢ ಸ್ವಾಮೀಜಿ

### ಸುಕ್ಷೇತ್ರ ಇಂಚಲ ಗ್ರಾಮದಲ್ಲಿ ವಿಶ್ವಶಾಂತಿಗಾಗಿ 54 ನೇ ಅಖಿಲ ಭಾರತ ವೇದಾಂತ ಪರಿಷತ್

ಬೈಲಹೊಂಗಲ: ನೀವು ಯಜ್ಞದ ಮೂಲಕ ಉತ್ಕರ್ಷ ಹೊಂದಿ, ನಿಮ್ಮೆಲ್ಲ ಇಷ್ಟಾರ್ಥಗಳನ್ನು ಪೂರೈಸುವ ಕಾಮಧೇನುವಾಗಲಿ. ಯಜ್ಞದಿಂದ ದೇವತೆಗಳನ್ನು ಸಂತುಷ್ಟಗೊಳಿಸಿ, ಒಲಿಸಿಕೊಳ್ಳಲು ಸಾಧ್ಯವೆಂದು ಹುಬ್ಬಳ್ಳಿಯ ಶಾಂತಾಶ್ರಮದ ಅಭಿನವ ಸಿದ್ಧಾರೂಢ ಸ್ವಾಮೀಜಿ ಹೇಳಿದರು.

ಅವರು ಸಮೀಪದ ಸುಕ್ಷೇತ್ರ ಇಂಚಲ ಗ್ರಾಮದ ಡಾ.ಶಿವಾನಂದ ಭಾರತಿ ಮಹಾಸ್ವಾಮೀಜಿಯವರ 84ನೇ ಜಯಂತ್ಯೋತ್ಸವ ಹಾಗೂ ವಿಶ್ವಶಾಂತಿಗಾಗಿ 54ನೇ ಅಖಿಲ ಭಾರತ ವೇದಾಂತ ಪರಿಷತ್ತಿನಲ್ಲಿ ಶನಿವಾರ ನಡೆದ ಎರಡನೇ ದಿನದ ಕಾರ್ಯಕ್ರಮದ ನೇತೃತ್ವ ವಹಿಸಿ ಯಜ್ಞ ದಾನ ತಪಃ ಕರ್ಮಪಾವನಾನಿ ಮನಿಷಿಣಾಮ ವಿಷಯದ ಕುರಿತು ಮಾತನಾಡಿ,

ಮನುಷ್ಯ ಗುರಿವಿನ ಅಮೃತ ವಾಣಿಗಳಿಂದ ಆತನು ಜೀವನ ಪಾವನಗೊಂಡು ಆಧ್ಯಾತ್ಮಿಕದತ್ತ ಶರಣಾಗುತ್ತಾನೆ. ನಾವು ಮಾಡುವ ಪುಣ್ಯ–



ಪಾಪಗಳ ಮೇಲೆ ಮುಕ್ತಿ ಸಿಗುತ್ತದೆ. ಪ್ರವಚನ ಆಲಿಸುವುದು ಇದು ಜ್ಞಾನದ ಯಜ್ಞ, ಆಧ್ಯಾತ್ಮ ಚಿಂತನೆ ಮಾಡುವುದರಿಂದ ನಾವು ಬ್ರಹ್ಮ ಲೀನವಾಗುತ್ತೇವೆ. ಲಕ್ಷಾಂತರ ಜೀವರಾಸಿಗಳಲ್ಲಿ ಮನುಷ್ಯ ಜನ್ಮ ಸಿಕ್ಕಿರುವುದು ಪುಣ್ಯ ಆದರೆ ಇದನ್ನು ಕಾಪಾಡಿಕೊಂಡು ಹೊಗಬೇಕು ಎಂದರು.

ಅನ್ನ ದಾನ ಮಹಾದಾನ, ಅನ್ನದಾನಕಿಂತಲು ವಿದ್ಯಾದಾನ ಬಹಳ ಶ್ರೇಷ್ಠವಾಗಿದೆ. ಮನುಷ್ಯ ತನ್ನ ಶರೀರವನ್ನು ಹತೋಟಿಯಲ್ಲಿ ಇಟ್ಟುಕೊಳ್ಳುವುದು ಒಂದು ದೊಡ್ಡ ಯಜ್ಞವಾಗಿದೆ ಎಂದರಲ್ಲದೇ ಇಂಚಲ ಶ್ರೀಗಳು ಪುಟ್ಟ ಗ್ರಾಮದಲ್ಲಿ ಪ್ರತಿವರ್ಷ ವೇದಾಂತ ಪರಿಷತ್ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ನಾಡಿಗೆ ಆಧ್ಯಾತ್ಮಿಕ ಚಿಂತನೆ ಭಿತ್ತುತ್ತಿರುವ ಕಾರ್ಯ ಅನನ್ಯವಾಗಿದೆ. ಅವರಿಗೆ ಭಗವಂತನು ನೂರಾರು ವರ್ಷ ಆಯುಷ್ಯ, ಆರೋಗ್ಯ ದಯೆ ಪಾಲಿಸಲೆಂದು ದೇವರಲ್ಲಿ ಪ್ರಾರ್ಥಿಸಿದರು.

ಹರಳಕಟ್ಟಿ ಶಿವಾನಂದ ಬ್ರಹ್ಮವಿದ್ಯಾಶ್ರಮದ ನಿಜಗುಣ ಸ್ವಾಮೀಜಿ ಮಾತನಾಡಿ, ಯಜ್ಞದಿಂದ ನಾವು ಮಾಡುವ ಕರ್ಮಗಳು ದೂರವಾಗುತ್ತವೆ. ಭಗವಂತನ ನಾಮ ಸ್ಮರಣೆ ನಿತ್ಯ ಮಾಡಬೇಕು. ದಾನ ಮಾಡುವುದು ಕೂಡಾ ಒಂದು ಯಜ್ಞ ಎಂದರು.

ಖುರ್ದಕಂಚನಳ್ಳಿಯ ಸುಬ್ರಮಣ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿ ಸುಧಾರಸ ಧಾರೆ ಯಾವುದು ಮಿಗೆ ಮೃದುವಚನ ವಿಷಯ ಕುರಿತು ಮಾತನಾಡಿ. ಮಾತು ನಮಗೆ ಭಗವಂತ ನೀಡಿರುವ ಒಂದು ವರದಾನ. ನಮ್ಮ ಭಾವನೆಗಳನ್ನು ವ್ಯಕ್ತಪಡಿಸಲು ಒಂದು ಅತ್ಯುತ್ತಮ ಸಾಧನವಾಗಿದೆ. ಮೃದುವಾದ ಮಾತುಗಳು ಅಮೃತಕ್ಕೆ ಸಮಾನ. ಅಂತಹ ಮಾತುಗಳನ್ನಾಡುವವರರನ್ನು ಜನರು ಪ್ರೀತಿಸುತ್ತಾರೆ. ಮಾತನಾಬೇಕಾದರೆ ನಾವು ಬಹಳ ವಿಚಾರ ಮಾಡಬೇಕು. ಅತಿಥಿಗಳನ್ನು ಪ್ರೀತಿಯಿಂದ ಕಾಣಬೇಕು. ಮನುಷ್ಯನ ವಿನಯ ಮಾತುಗಳು ಅವರನ್ನು ಉನ್ನತ ಮಟ್ಟಕ್ಕೆ ಕೊಂಡಯ್ಯೊಲು ಸಾಧ್ಯ ಎಂದರು.

ಡಾ.ಶಿವಾನಂದ ಭಾರತಿ ಸ್ವಾಮೀಜಿ ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ವೇದಿಕೆಯ ಮೇಲೆ ಮುರಗೋಡದ ನೀಲಕಂಠ ಸ್ವಾಮೀಜಿ, ಹಂಪಿ ಹೇಮಕೂಟದ ವಿದ್ಯಾನಂದ ಭಾರತಿ ಸ್ವಾಮೀಜಿ, ದಾವಣಗೆರೆಯ ಜಡಿಶಾಂತಾಶ್ರಮದ ಶಿವಾನಂದ ಸ್ವಾಮೀಜಿ, ಇಂಚಲದ ಪೂರ್ಣಾನಂದ ಸ್ವಾಮೀಜಿ, ಮಲ್ಲಾಪೂರ ಗಾಳೇಶ್ವರ ಮಠದ ಚಿದಾನಂದ ಸ್ವಾಮೀಜಿ, ಹಡಗಿನಾಳದ ಮಲ್ಲೇಶ್ವರ ಶರಣರು, ತೊಂಡಿಕಟ್ಟಿ ಅವಧೂತ ಗಾಳೇಶ್ವರ ಮಠದ ಅಭಿನವ ವೆಂಕಟೇಶರ ಸ್ವಾಮೀಜಿ, ಹುಬ್ಬಳ್ಳಿ ಸಿದ್ಧಾರೂಢ ಮಠದ ಸಚ್ಚಿದಾನಂದ ಸ್ವಾಮೀಜಿ, ಖೋದಾನಪುರದ ಶಾಂಭವಿ ಆಶ್ರಮದ ಜಾನಮ್ಮತಾಯಿ, ಸವಟಗಿ ನಿಂಗಾನಂದ ಸ್ವಾಮೀಜಿ, ಚಿಕ್ಕಪಡಸಲಗಿಯ ಅಕ್ಕಮಹಾದೇವಿ ತಾಯಿ, ಬಾದಾಮಿಯ ದಯಾಭಾರತಿ ತಾಯಿ, ತುಂಗಳದ ಅನಸೂಯಾ ತಾಯಿ ಮುಂತಾದವರು ಇದ್ದರು. ಸಹಸ್ರಾರು ಸದ್ಭಕ್ತರು ಉಪಸ್ಥಿತರಿದ್ದರು. ಇದೇ ವೇಳೆ ಶ್ರೀಗಳಿಂದ ಗಣ್ಯ ಮಾನ್ಯರನ್ನು ಸತ್ಕರಿಸಲಾಯಿತು.

## ಹೆದ್ದಾರಿಯಲ್ಲೇ ಗಾಳಿಯಲ್ಲಿ ಗುಂಡು ಹಾರಿಸಿ ಪುಂಡಾಟ, ಇಬ್ಬರು ಅರೆಸ್ಟ್



ಶಿವಮೊಗ್ಗ: ಜಿಲ್ಲೆಯ ಹೆದ್ದಾರಿಯಲ್ಲೇ ಕಾರು ನಿಲ್ಲಿಸಿದಂತ ಇಬ್ಬರು ಯುವಕರು ಗಾಳಿಯಲ್ಲಿ ಏರ್ ಗನ್ ನಿಂದ ಗುಂಡು ಹಾರಿಸಿ ಪುಂಡಾಟ ಮೆರೆದಿರೋದಾಗಿ ತಿಳಿದು ಬಂದಿದೆ.

ಈ ಘಟನೆ ಸಂಬಂಧ ಪುಂಡಾಟ ಮೆರೆದಂತ ಇಬ್ಬರನ್ನು ಬಂಧಿಸಿ, ಏರ್ ಗನ್, ಕಾರನ್ನು ಪೊಲೀಸರು ಸೀಜ್ ಮಾಡಿದ್ದಾರೆ.

ಶಿವಮೊಗ್ಗ ನಗರದ ಮಲ್ನಾಡ್ ಕ್ಯಾನ್ಸರ್ ಆಸ್ಪತ್ರೆ ಸಮೀಪದ ಶಿವಮೊಗ್ಗ–ಭದ್ರಾವತಿ ಹೆದ್ದಾರಿಯಲ್ಲಿ ಡಿ. 26ರಂದು ಇಬ್ಬರು ಯುವಕರು ಹೆದ್ದಾರಿಯಲ್ಲೇ ಕಾರನ್ನು ನಿಲ್ಲಿಸಿ, ಕುಣಿದಾಡಿದ್ದಾರೆ.

ಅಲ್ಲದೇ ಕಾರಿನಿಂದ ಏರ್ ಗನ್ ತೆಗೆದಂತ ಒಬ್ಬಾತ, ಅದರಿಂದ ಗಾಳಿಯಲ್ಲಿ ಗುಂಡು ಹಾರಿಸಿ ಹುಚ್ಚಾಟ ಮೆರೆದಿದ್ದಾನೆ.

ಹೀಗೆ ಹುಚ್ಚಾಟ ಮೆರೆದ ವೀಡಿಯೋವನ್ನು ಸ್ಥಳದಲ್ಲಿದ್ದಂತ ಜನರು ತಮ್ಮ ಮೊಬೈಲ್ ನಲ್ಲಿ ಚಿತ್ರೀಕರಿಸಿಕೊಂಡು ಸಾಮಾಜಿಕ ಮಾಧ್ಯಮಗಳಲ್ಲಿ ಹರಿಬಿಟ್ಟಿದ್ದರು.

ವೀಡಿಯೋ ವೈರಲ್ ಆಗುತ್ತಿದ್ದಂತೆ, ಈ ಸಂಬಂಧ ತುಂಗಾ ನಗರ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಚಿಕ್ಕಮಗಳೂರು ಜಿಲ್ಲೆಯ ಸಿರಗನಹಳ್ಳಿಯ ಹರ್ಷ ಪಟೇಲ್(23) ಹಾಗೂ ಅಜ್ಜಂಪುರದ ಅಭಿಷೇಕ್ (23) ಎಂಬುದಾಗಿ ಗುರುತಿಸಲಾಗಿದೆ. ಈ ಆರೋಪಿಗಳ ವಿರುದ್ಧ ಅಜಾಗರೂಕತೆ ಹಾಗೂ ಬೇಜವಾಬ್ದಾರಿ ಸೆಕ್ಷನ್ ಗಳ ಅಡಿಯಲ್ಲಿ ಪ್ರಕರಮ ದಾಖಲಿಸಿಕೊಂಡು, ತನಿಖೆ ನಡೆಸುತ್ತಿದ್ದಾರೆ.

## 2 ಲಕ್ಷ ಹೂವುಗಳನ್ನ ವಿತರಿಸಿ ಕೃತಕ ಹೂವುಗಳನ್ನ ಬಳಸದಂತೆ ರಾಜ್ಯದ ಹೂವು ಬೆಳೆಗಾರರಿಂದ ವಿನೂತನ ಜನಜಾಗೃತಿ

### ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್ ಭಾಗಿ ನೈಸರ್ಗಿಕ ಹೂಗಳನ್ನ ಬಳಸಿ ಹೂವು ಬೆಳೆಗಾರರಿಗೆ ಪ್ರೋತ್ಸಾಹ ನೀಡುವಂತೆ ಕರೆ

ಬೆಂಗಳೂರು: ರಾಜ್ಯದಲ್ಲಿ ದಿನೇ ದಿನೇ ಹೆಚ್ಚಾಗುತ್ತಿರುವ ಕೃತಕ ಹೂಗಳ ಬಳಕೆ ರಾಜ್ಯದ ಹೂವು ಬೆಳೆಗಾರರ ಜೀವನವನ್ನ ತೊಂದರೆಗೀಡಾಗುವುಂತೆ ಮಾಡಿದೆ. ಹೂವು ಬೆಳೆಗಾರರನ್ನ ಬೀದಿಗೆ ತಳ್ಳಿರುವ ಕೃತಕ ಹೂವುಗಳ ಬಳಕೆಗೆ ಕಡಿವಾಣ ಹಾಕುವಂತೆ ಜನರಲ್ಲಿ ಜಾಗೃತಿಯನ್ನು ಮೂಡಿಸುವ ಉದ್ದೇಶದಿಂದ ರಾಜ್ಯದ ಹೂವು ಬೆಳೆಗಾರರಿಂದ ಲಾಲ್‌ಬಾಗ್ ಉದ್ಯಾನವನದಲ್ಲಿ ವಿನೂತನ ಜನಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸುಮಾರು 2 ಲಕ್ಷ ಹೂವುಗಳನ್ನ ಜನರಿಗೆ ಉಚಿತವಾಗಿ ವಿತರಿಸುವ ಮೂಲಕ ಜನರಲ್ಲಿ ಪ್ಲಾಸ್ಟಿಕ್ ಹಾಗೂ ಸಿಂಥಟಿಕ್ ಹೂವುಗಳ ಬಳಕೆಯಿಂದ ಪರಿಸರದ ಮೇಲೆ ಆಗುವ ದಷ್ಪರಿಣಾಮಗಳು ಹಾಗೂ ರೈತರಿಗೆ ಆಗುವ ಅನ್ಯಾಯದ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ಮಾಡಲಾಯಿತು.

ತೋಟಗಾರಿಕೆ ಇಲಾಖೆ–ಕರ್ನಾಟಕ ಸರ್ಕಾರ, ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿ., ಹೆಬ್ಬಾಳ, ಜಿ.ಎಫ್.ಸಿ.ಐ., ಅಗ್ರಿ ಪ್ಲಾಸ್ಟ್, ರಾಜ್ಯದ ಹೂ ಬೆಳೆಗಾರರು/ ಖರೀದಾರರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜನಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ರಾಜ್ಯದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್ ಅವರು ಮಾತನಾಡಿ, ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಾಣಿಜ್ಯ ಬೆಳೆಯಾಗಿ ಹೂವುಗಳನ್ನು ಬೆಳೆಯಲಾಗುತ್ತಿದೆ. ವಿಶ್ವದ ಹಲವಾರು ರಾಷ್ಟ್ರಗಳಿಗೆ ಇಲ್ಲಿನಿಂದಲೇ ಹೂವುಗಳನ್ನು ರಫ್ತು ಮಾಡಲಾಗುತ್ತಿದೆ. ಕೃತಕ ಹೂಗಳನ್ನ ಬಿಟ್ಟು ಜನರು ಹೆಚ್ಚಿನ ಪ್ರಮಾಣದಲ್ಲಿ ನೈಸರ್ಗಿಕ ಹೂವುಗಳನ್ನ ಬಳಸಬೇಕು ಎಂದು ಕರೆ ನೀಡಿದ ಅವರು, ಕೃತಕ ಹೂವುಗಳ ಬಳಕೆಯಿಂದ ಪರಿಸರದ ಮೇಲೆ ಅಷ್ಟೇ ಅಲ್ಲದೇ ರಾಜ್ಯದ ಹೂವು ಬೆಳೆಗಾರರಿಗೂ ತೊಂದರೆ ಆಗುತ್ತಿದೆ. ಈ ಬಗ್ಗೆ ಅಗತ್ಯ ಕ್ರಮದ ಕೈಗೊಳ್ಳುವಂತೆ ಬೆಳೆಗಾರರು ಮನವಿ ಸಲ್ಲಿಸಿದ್ದಾರೆ. ಈ




ಬಗ್ಗೆ ಸರಕಾರದ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ದಕ್ಷಿಣ ಭಾರತ ಹೂ ಬೆಳೆಗಾರರ ಸಂಘದ ಅಧ್ಯಕ್ಷರಾದ ಟಿ ಎಂ ಅರವಿಂದ್ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಪುಷ್ಪ ಬೆಳೆಗಳನ್ನು ಸುಮಾರು 38000ಹೆ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ ಹಾಗೂ ವಾಣಿಜ್ಯ ಬೆಳೆಗಳನ್ನು ಸುಮಾರು 1500 ಹೆಕ್ಟೇರ್ಗಿಂತಲೂ ಹೆಚ್ಚು ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ರಾಜ್ಯದಲ್ಲಿ ಗುಲಾಭಿ, ಸೇವಂತಿಗೆ, ಚೆಂಡು ಹೂ, ಸುಗಂಧರಾಜ, ಕನಕಾಂಬರ ಇತ್ಯಾದಿ ಬಿಡಿ ಹೂಗಳನ್ನು ಹಾಗೂ ಕಟ್ ಗುಲಾಬಿ, ಕಟ್ ಸೇವಂತಿಗೆ, ಜೆರ್ಬೆರ, ಆಂತುರಿಯಮ್ಸ, ಆರ್ಕಿಡ್ಸ್ ಇತ್ಯಾದಿ ವಾಣಿಜ್ಯ ಬೆಳೆಗಳನ್ನು ಹಸಿರು ಮನೆ/ ಪಾಲಿಮನೆಯಲ್ಲಿ ಬೆಳೆಲಾಗುತ್ತಿದೆ. ಇದರಿಂದ ನೇರ ಹಾಗೂ ಪರೋಕ್ಷವಾಗಿ 11 ಲಕ್ಷ ಜನರ ಜೀವನ ಇದರ ಮೇಲೆ ಅವಲಂಬಿತವಾಗಿದೆ. ಅಲ್ಲದೆ, ರಾಜ್ಯದಲ್ಲಿ 2.8 ಲಕ್ಷ ಏಕರೆ ಪ್ರದೇಶದಲ್ಲಿ ಕಾಕಡ, ಮಲ್ಲಿಗೆ, ಮ್ಯಾರಿಗೋಲ್ಡ್, ಸಂಪಂಗಿ, ಕನಕಾಂಬರ ಸೇರಿದಂತೆ 40 ಬಗೆಯ ಹೂಗಳನ್ನು ಬೆಳೆಯಲಾಗುತ್ತದೆ. ಇದರ ಮೇಲೆ ಅವಲಂಬಿತರಾಗಿರುವ ಜನರ ಸಂಖ್ಯೆ 52 ಲಕ್ಷಕ್ಕೂ ಹೆಚ್ಚು. ಕೃತಕ ಹೂವುಗಳ ಬಳಕೆಯಿಂದ ರೈತರುಗಳು ಉತ್ತಮ ದರ ದೊರಕದೆ ತೊಂದರೆಗೆ ಸಿಲುಕಿಕೊಂಡಿದ್ದಾರೆ. ಜನರು ಕೃತಕ ಹೂವುಗಳನ್ನ ಬಿಟ್ಟು ನೈಸರ್ಗಿಕ ಹೂವುಗಳ ಬಳಕೆಯನ್ನು ಹೆಚ್ಚಿಸಬೇಕು ಎಂದು ಕರೆ ನೀಡಿದರು.

**ಕೃತಕ ಹೂಗಳಿಂದಾಗುತ್ತಿರುವ ದುಷ್ಪರಿಣಾಮಗಳು:**

ರೈತರ ಆದಾಯದಲ್ಲಿ ಕುಸಿತ: ಪ್ರತಿ ಏಕರೆಗೆ 50 ಲಕ್ಷ ರೂಪಾಯಿಗಳ ಬಂಡವಾಳವನ್ನು ಹೂಡುವ ಮೂಲಕ ಪಾಲಿ ಹೌಸ್ ಸೇರಿದಂತೆ ಹಲವಾರು ಉಪಕರಣಗಳ ಖರೀದಿಗೆ ರೈತರು ಮುಂದಾಗಿದ್ದಾರೆ. ಸರಿಯಾದ ಪ್ರಮಾಣದ ಬೆಲೆ ದೊರೆಕದೆ ಇದ್ದಲ್ಲಿ ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುವುದಿಲ್ಲ.

ಅಲ್ಲದೆ ರೈತರ ಆದಾಯ ಕುಸಿತದಿಂದಾಗಿ ಮಾಡಿರುವ ಸಾಲ ತೀರಿಸಲಾಗದೆ ರೈತರು ಸಂಕಷ್ಟದಲ್ಲಿದ್ದಾರೆ.

ಪ್ರತಿವರ್ಷ ಹಬ್ಬಗಳಲ್ಲಿ, ಮದುವೆ ಹಾಗೂ ಇನ್ನಿತರೆ ಸಮಾರಂಭಗಳಲ್ಲಿ ಕೃತಕ ಹೂಗಳ ಬಳಕೆ ಹೆಚ್ಚಾಗುತ್ತಿದ್ದು, ನೈಸರ್ಗಿಕ ಹೂಗಳನ್ನು ಕೊಳ್ಳುವರಿಲ್ಲದಂತಾಗಿದೆ. ಇದೇ ರೀತಿಯ ಬಳಕೆ ಹೆಚ್ಚಾದಲ್ಲಿ ನೈಸರ್ಗಿಕ ಹೂಗಳ ಬಳಕೆ ಸಂಪೂರ್ಣ ಕಡಿಮೆಯಾಗಲಿದ್ದು ಹೂ ಬೆಳೆಗಾರರು ಸಂಕಷ್ಟಕ್ಕೀಡಾಗುವ ಪರಿಸ್ಥಿತಿ ಎದುರಾಗಲಿದೆ. ಹೊಸ ವರ್ಷದ ಈ ಶುಭ ಸಂದರ್ಭದಲ್ಲಿ ಜನರು ನೈಸರ್ಗಿಕ ಹೂವುಗಳನ್ನ ಹೆಚ್ಚಿನ ಪ್ರಮಾಣದಲ್ಲಿ ಬಳಸಲು ಮುಂದಾಗಬೇಕು ಎಂದರು.

ರಾಜ್ಯದ ರೈತರು ಬೆಳೆದಿರುವಂತ ವಿವಿಧ ತಳಿಯ ಕಟ್ ಗುಲಾಬಿ ಮಾರಾಟನ್ನು ಲಾಲ್ ಬಾಗ್ನ 4ಕ್ಕೂ ದ್ವಾರಗಳಲ್ಲಿ ಆಯೋಜಿಸಲಾಗಿತ್ತು. ನೈಸರ್ಗಿಕ ಹೂಗಳನ್ನು ಬಳಸುವ ಬಗ್ಗೆ ಅಳವಡಿಸಲಾಗಿದ್ದ " ಖಜಟಜಿಜ ಕಙಣಣ " ಜನರು ಚಿತ್ರಗಳನ್ನು ತಗೆದುಕೊಂಡರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಮತ್ತು ರೇಷ್ಮೇ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಶಾಮ್ಲಾ ಇಕ್ಬಾಲ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರು ಹಾಗೂ ಅಂತಾರಾಷ್ಟ್ರೀಯ ಪುಷ್ಪ ಹರಾಜು ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ರಾದ ವಿಶ್ವನಾಥ್ ಮುನಿಯಪ್ಪ ದಕ್ಷಿಣ ಭಾರತ ಹೂ ಬೆಳೆಗಾರರ ಸಂಘದ ನಿರ್ದೇಶಕರಾದ ಶ್ರೀಕಾಂತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VOL. 05 | ISSUE. 01 | RNI. KARKAN/2020/79084 | REG.NO.G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089